22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 307 | ನವದೆಹಲಿ | ಬೆಲೆ ₹ 10 | ಮೇ 14, 2025, ಬುಧವಾರ





## ಕರ್ನಾಟಕ ರಾಜಕಾರಣದ ರೈಸಿಂಗ್ ಸ್ಟಾರ್, ಟ್ರಬಲ್ ಶೂಟರ್

# ಡಿ.ಕೆ.ಶಿವಕುಮಾರ್

**ಕಾಂಗ್ರೆಸ್ ಪಕ್ಷದ ಅತ್ಯಂತ ನಿಷ್ಠರಾಗಿರುವ ಮತ್ತು ಕಾಂಗ್ರೆಸ್ ವರಿಷ್ಠರಿಗೂ ಕೂಡ ಡಿ.ಕೆ.ಶಿವಕುಮಾರ್ ಅವರು, ಪಕ್ಷದ ಯಾವುದೇ ಕೆಲಸವನ್ನು ಅತ್ಯಂತ ನಿಷ್ಠೆಯಿಂದಲೇ ಮಾಡುತ್ತಾರೆಂಬ ವಿಶ್ವಾಸ ಇರುವುದರಿಂದಲೇ ಅವರು ಇಂದು ದೊಡ್ಡ ನಾಯಕರಾಗಿ ಬೆಳೆದಿದ್ದಾರೆ. ಅವರ ಈ ಪಕ್ಷ ನಿಷ್ಠ ಕಾಂಗ್ರೆಸ್ ಪಕ್ಷದಲ್ಲಿ ಬಹುದೊಡ್ಡ ನಾಯಕರಾಗಿ ಬೆಳೆಯುವ ಎಲ್ಲ ಅವಕಾಶಗಳೂ ತೆರೆದುಕೊಂಡಿವೆ.**

ಕೆಪಿಸಿಸಿ ಅಧ್ಯಕ್ಷರು ಮತ್ತು ಉಪಮುಖ್ಯಮಂತ್ರಿಗಳಾಗಿರುವ ಡಿ.ಕೆ. ಶಿವಕುಮಾರ್ ಸದ್ಯ ಕರ್ನಾಟಕ ರಾಜಕಾರಣದ ರೈಸಿಂಗ್ ಸ್ಟಾರ್ ಎಂದೇ ಹೇಳಬಹುದು.

■ ರಾಜಕೀಯದಲ್ಲಿ ವಿವಿಧ ಮಜಲುಗಳನ್ನು ದಾಟಿ ಬಂದಿರುವ ಡಿ.ಕೆ.ಶಿವಕುಮಾರ್ ಹೋರಾಟದ ಮೂಲಕ ಬೆಳೆದು ಬಂದವರು. ರಾಜಕೀಯದಲ್ಲಿ ಇವರು ಏನೇ ಕಷ್ಟಗಳು ಬಂದರೂ ಅವುಗಳನ್ನು ಎದುರಿಸಿ ದೃಢವಾಗಿ ನಿಲ್ಲುವುದರಿಂದ ಅವರನ್ನು ಕನಕಪುರದ ಬಂಡೆ ಎಂದು, ಪಕ್ಷ ಮತ್ತು ಸರ್ಕಾರದಲ್ಲಿ ಏನೇ ಸಂಕಷ್ಟಗಳು ಬಂದರೂ ಅವುಗಳನ್ನು ಸಮರ್ಥವಾಗಿ ಪರಿಹರಿಸಬಲ್ಲ ಚಾಣಾಕ್ಷತೆ ಹೊಂದಿರುವುದರಿಂದ ಅವರನ್ನು ರಾಜಕೀಯ ಟ್ರಬಲ್ ಶೂಟರ್ ಎಂದೂ ಕರೆಯುತ್ತಾರೆ.

■ ಡಿ.ಕೆ.ಶಿವಕುಮಾರ್ ನೇರವಾಗಿ ಉಪಮುಖ್ಯಮಂತ್ರಿಯಾದವರಲ್ಲ. ರಾಜಕೀಯದಲ್ಲಿ ಹಂತ ಹಂತವಾಗಿ ಬೆಳೆದು ಬಂದವರು. ಡಿ.ಕೆ.ಶಿವಕುಮಾರ್ 1980ರ ದಶಕದ ಆರಂಭದಲ್ಲಿ ವಿದ್ಯಾರ್ಥಿ ನಾಯಕನಾಗಿ ತಮ್ಮ ರಾಜಕೀಯ ಜೀವನ ಪ್ರಾರಂಭಿಸಿದರು ಮತ್ತು ಕ್ರಮೇಣ ಕಾಂಗ್ರೆಸ್ ಪಕ್ಷದ ಶ್ರೇಣಿಯ ಮೂಲಕ ಮೇಲೇರುತ್ತ ಬಂದವರು. ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಜಿಲ್ಲಾ ಪಂಚಾಯತ್ ಸದಸ್ಯರಾಗಿ ಪ್ರಥಮ ಬಾರಿಗೆ ಚುನಾಯಿತ ಸದಸ್ಯರಾಗಿ ಆಯ್ಕೆಯಾದ ಅವರು, 1989ರಲ್ಲಿ ಸಾತನೂರು ಕ್ಷೇತ್ರದಿಂದ ಆಯ್ಕೆಯಾಗುವ ಮೂಲಕ ಮೊದಲ ಬಾರಿಗೆ ವಿಧಾನಸಭೆ ಪ್ರವೇಶಿಸಿದರು.



ಕೆಪಿಸಿಸಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಸಂದರ್ಭ

■ ಆ ಸಮಯದಲ್ಲಿ ಅವರಿಗೆ ಕೇವಲ 27 ವರ್ಷ ವಯಸ್ಸಾಗಿತ್ತು ಮತ್ತು ಕಾಂಗ್ರೆಸ್ ಟಿಕೆಟ್‌ನಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಿ ಆಯ್ಕೆಯಾದ ನಂತರ ಹಿಂತಿರುಗಿ ನೋಡದ ಡಿ.ಕೆ. ಶಿವಕುಮಾರ್ 1994, 1999 ಮತ್ತು 2004ರಲ್ಲಿ ನಡೆದ ನಂತರದ ವಿಧಾನಸಭಾ ಚುನಾವಣೆಗಳಲ್ಲಿ ಅದೇ ಕ್ಷೇತ್ರದಿಂದ ಮರುಚುನಾವಣೆಯಲ್ಲಿ ಗೆದ್ದರು. ಅನಂತರ 2008, 2023 ಮತ್ತು 2018ರ ವಿಧಾನಸಭಾ ಚುನಾವಣೆಗಳಲ್ಲಿ ಕನಕಪುರ ಕ್ಷೇತ್ರದಿಂದ ಆಯ್ಕೆಯಾದರು.

### ಟ್ರಬಲ್ ಶೂಟರ್

■ ಮಹಾರಾಷ್ಟ್ರದ ಮುಖ್ಯಮಂತ್ರಿಯಾಗಿದ್ದ ವಿಲಾಸ್‌ರಾವ್ ದೇಶಮುಖ್ ಅವರು 2002ರಲ್ಲಿ ಅವರ ವಿರುದ್ಧ ಅವಿಶ್ವಾಸ ನಿರ್ಣಯವನ್ನು ಮಂಡಿಸಿದ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ನಿಕಟವಾಗಿ ಕೆಲಸ ಮಾಡಿದರು. ಮತದಾನದ ದಿನಾಂಕದವರೆಗೆ ಒಂದು ವಾರದವರೆಗೆ ಬೆಂಗಳೂರಿನ ಹೊರವಲಯದ ರೆಸಾರ್ಟಿನಲ್ಲಿ ಮಹಾರಾಷ್ಟ್ರ ಶಾಸಕರಿಗೆ ಆತಿಥ್ಯ ನೀಡಿ, ದೇಶಮುಖ್ ಸರ್ಕಾರವನ್ನು ಉಳಿಯುವಂತೆ ಮಾಡಿದ ಶ್ರೇಯಸ್ಸು ಡಿ.ಕೆ.ಶಿವಕುಮಾರ್ ಅವರಿಗೆ ಸಲ್ಲುತ್ತದೆ.

■ 2017ರಲ್ಲಿ ಕಾಂಗ್ರೆಸ್ ಪ್ರಭಾವಿ ನಾಯಕ ಅಹ್ಮದ್ ಪಟೇಲ್ ಅವರು ರಾಜ್ಯಸಭೆಗೆ ಆಯ್ಕೆಯಾಗುವ ಮುನ್ನ, ಕಾಂಗ್ರೆಸ್ಸಿನ 46 ಗುಜರಾತ್ ಕಾಂಗ್ರೆಸ್ ಶಾಸಕರು ಬೇರೆ ರಾಜಕೀಯ ಪಕ್ಷಕ್ಕೆ ಹೋಗುವುದನ್ನು ತಪ್ಪಿಸಲು ಬೆಂಗಳೂರಿನ ರೆಸಾರ್ಟಿಗೆ ಸ್ಥಳಾಂತರಿಸಲು ತಮ್ಮ ಪಕ್ಷದ ನಾಯಕತ್ವಕ್ಕೆ ಸಹಾಯ ಮಾಡಿ, ಅಹ್ಮದ್ ಪಟೇಲ್ ಚುನಾವಣೆಯಲ್ಲಿ ಗೆಲ್ಲುವಂತೆ ಮಾಡಿದ್ದೂ ಡಿ.ಕೆ.ಶಿವಕುಮಾರ್ ಅವರು.

(3ನೇ ಪುಟಕ್ಕೆ...)

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 14, 2025, ಬುಧವಾರ

## ಒಳಪುಟಗಳಲ್ಲಿ

ಪಿಓಕೆ ಉಗ್ರರನ್ನು ನುಗ್ಗಿಸಿ ಭಾರತದಲ್ಲಿ ಶಾಂತಿ ಕದಡುವುದು ಪಾಕ್ ಕೆಲಸ- ಪು.4

ಎರಡು ತಿಂಗಳಿನಿಂದ ವೇತನವನ್ನೇ ನೀಡದ ಸರ್ಕಾರ: ಬಿ.ವೈ.ವಿಜಯೇಂದ್ರ ವಾಗ್ದಾಳಿ-ಪು. 5

ಆಪರೇಷನ್ ಸಿಂಧೂರ: 17 ಶಿಶುಗಳಿಗೆ ಸಿಂಧೂರ ಹೆಸರು ನಾಮಕರಣ ಉ.ಪ್ರ ಕುಶೀನಗರದಲ್ಲಿ ಖುಷಿ-ಪು.6

# ಆದಂಪುರ ವಾಯುನೆಲೆಗೆ ಮೋದಿ ಭೇಟಿ: ಪಾಕ್‌ಗೆ ಎಚ್ಚರಿಕೆ

**ಆದಂಪುರ, ಮೇ 13:** ಆದಂಪುರ ವಾಯುನೆಲೆಯನ್ನು ನಾಶಪಡಿಸಿದ್ದೇವೆ ಎಂಬ ಪಾಕಿಸ್ತಾನದ ಹೇಳಿಕೆಯನ್ನು ಸುಳ್ಳು ಮಾಡಲು ಪ್ರಯತ್ನಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಈ ನಿರ್ಣಾಯಕ ಮಿಲಿಟರಿ ಸ್ಥಾಪನೆಗೆ ಭೇಟಿ ನೀಡಿ, ಭಯೋತ್ಪಾದಕ ದಾಳಿ ಸೇರಿದಂತೆ ಯಾವುದೇ ಭವಿಷ್ಯದ ದುಸ್ಸಾಹಸಗಳ ವಿರುದ್ಧ ಪಾಕಿಸ್ತಾನಕ್ಕೆ ಮತ್ತೊಮ್ಮೆ ಎಚ್ಚರಿಕೆ ನೀಡಿದರು. "ಭಯೋತ್ಪಾದನೆಯ ವಿರುದ್ಧ ಭಾರತದ ನಿಲುವನ್ನು ಈಗ ದೃಢವಾಗಿ ವ್ಯಾಖ್ಯಾನಿಸಲಾಗಿದೆ ಮತ್ತು ಯಾವುದೇ ಭಯೋತ್ಪಾದಕ ದಾಳಿಗೆ ಬಲವಾದ ಮತ್ತು ನಿರ್ಣಾಯಕ ಪ್ರತಿಕ್ರಿಯೆ ನೀಡಲಾಗುವುದು" ಎಂದು ಅವರು ಅಧಿಕಾರಿಗಳು ಮತ್ತು ಜವಾನರೊಂದಿಗೆ ಸಂವಾದ ನಡೆಸುತ್ತಾ ಹೇಳಿದರು ಮತ್ತು ಶೌರ್ಯವನ್ನು ಶ್ಲಾಘಿಸಿದರು. ರಾಷ್ಟ್ರವನ್ನುದ್ದೇಶಿಸಿ ಮಾಡಿದ ಕೊನೆಯ



ರಾತ್ರಿಯ ಭಾಷಣದಲ್ಲಿ ತಮ್ಮ "ಮೂರು ಅಂಶಗಳ ಮಾದರಿ"ಯನ್ನು ಪುನರುಚ್ಚರಿಸಿದ ಪ್ರಧಾನಿ, "ಮೊದಲನೆಯದಾಗಿ ಭಾರತದ ಮೇಲೆ ಭಯೋತ್ಪಾದಕ ದಾಳಿ ನಡೆದರೆ, ನಾವು ನಮ್ಮದೇ ಆದ ರೀತಿಯಲ್ಲಿ, ನಮ್ಮದೇ ಆದ ಸ್ಥಿತಿಯಲ್ಲಿ ಮತ್ತು ನಮ್ಮದೇ ಆದ ಸಮಯದಲ್ಲಿ ಪ್ರತಿಕ್ರಿಯಿಸುತ್ತೇವೆ, ಎರಡನೆಯದಾಗಿ, ಭಾರತ ಯಾವುದೇ ಪರಮಾಣು ಬೆದರಿಕೆಯನ್ನು ಸಹಿಸುವುದಿಲ್ಲ ಮತ್ತು ಮೂರನೆಯದಾಗಿ, ಭಯೋತ್ಪಾದಕರನ್ನು ಮತ್ತು ಭಯೋತ್ಪಾದನೆಯ ಯಜಮಾನರನ್ನು ಪ್ರತ್ಯೇಕವಾಗಿ ಪೋಷಿಸುವ ಸರ್ಕಾರವನ್ನು ನಾವು ನೋಡುವುದಿಲ್ಲ" ಎಂದು ಹೇಳಿದರು. "ಭಯೋತ್ಪಾದನೆಯ ವಿರುದ್ಧ ಭಾರತದ ಲಕ್ಷ್ಮಣ ರೇಖೆ ಈಗ ಸ್ಪಷ್ಟವಾಗಿದೆ. ಯಾವುದೇ ಭಯೋತ್ಪಾದಕ ದಾಳಿ ನಡೆದರೆ, ಭಾರತ ಘನ ಉತ್ತರವನ್ನು ನೀಡುತ್ತದೆ".

ಸರ್ಜಿಕಲ್ ಸ್ಟ್ರೈಕ್, ವಾಯುದಾಳಿಯ ಸಮಯದಲ್ಲಿ ಇದು ಸ್ಪಷ್ಟವಾಗಿತ್ತು ಮತ್ತು ಈಗ "ಆಪರೇಷನ್ ಸಿಂಧೂರ್ ಭಾರತದ ಹೊಸ ಸಾಮಾನ್ಯ" ಎಂದು ಅವರು ಹೇಳಿದರು. "ಭಾರತದ ಈ ಹೊಸ ರೂಪ ಮತ್ತು ಈ ಹೊಸ ವ್ಯವಸ್ಥೆಯನ್ನು ಅರ್ಥಮಾಡಿಕೊಳ್ಳುವ ಮೂಲಕ ಜಗತ್ತು ಸಹ ಮುಂದುವರಿಯುತ್ತಿದೆ" ಎಂದು ಅವರು ಹೇಳಿದರು. ಸಶಸ್ತ್ರ ಪಡೆಗಳನ್ನು ಶ್ಲಾಘಿಸಿದ ಮೋದಿ, "ಆಪರೇಷನ್ ಸಿಂಧೂರ್‌ನ ಪ್ರತಿ ಕ್ಷಣವೂ ಭಾರತೀಯ ಸೈನಿಕರ



ಶಕ್ತಿಗೆ ಸಾಕ್ಷಿಯಾಗಿದೆ. ಅದು ಸೇನೆ, ನೌಕಾಪಡೆ ಅಥವಾ ವಾಯುಪಡೆಯಾಗಿರಲಿ, ನಮ್ಮ ಪಡೆಗಳ ಸಮನ್ವಯವು ನಿಜವಾಗಿಯೂ ಅದ್ಭುತವಾಗಿತ್ತು" ಎಂದು ಹೇಳಿದರು. ಪಾಕಿಸ್ತಾನ ಮನವಿ ಮಾಡಿದ ನಂತರ, ಭಾರತ ತನ್ನ ಮಿಲಿಟರಿ ಕ್ರಮವನ್ನು ನಿಲ್ಲಿಸಿತು ಮತ್ತು "ಪಾಕಿಸ್ತಾನ ಮತ್ತೆ ಭಯೋತ್ಪಾದಕ ಚಟುವಟಿಕೆ ಅಥವಾ ಮಿಲಿಟರಿ ಬೆದರಿಕೆಯನ್ನು ತೋರಿಸಿದರೆ, ನಾವು ಸೂಕ್ತ ಉತ್ತರವನ್ನು ನೀಡುತ್ತೇವೆ" ಎಂದು ಎಚ್ಚರಿಸಿದೆ ಎಂದು ಪ್ರಧಾನಿ ಹೇಳಿದರು. "ನಾವು ನಮ್ಮದೇ ಆದ ರೀತಿಯಲ್ಲಿ, ನಮ್ಮದೇ ಆದ ನಿಯಮಗಳು ಮತ್ತು ಷರತ್ತುಗಳ ಮೇಲೆ ಈ ಉತ್ತರಗಳನ್ನು ನೀಡುತ್ತೇವೆ ಮತ್ತು ಈ ನಿರ್ಧಾರದ ಹಿಂದೆ ಅಡಗಿರುವ ವಿಶ್ವಾಸವು ನಿಮ್ಮ ಶಕ್ತಿ, ಧೈರ್ಯ, ಶೌರ್ಯ ಮತ್ತು ಜಾಗರೂಕತೆಯಾಗಿದೆ" ಎಂದು ಅವರು ಹೇಳಿದರು.

## ಗಾಜಾ ಆಸ್ಪತ್ರೆ ಮೇಲೆ ದಾಳಿ: ಪತ್ರಕರ್ತ ಸಾವು

**ಕೈರೊ/ಗಾಜಾ, ಮೇ 13:** ಗಾಜಾಪಟ್ಟಿಯ ಆಸ್ಪತ್ರೆಯೊಂದರ ಮೇಲೆ ಇಸ್ರೇಲ್ ಮಂಗಳವಾರ ನಡೆಸಿದ ವೈಮಾನಿಕ ದಾಳಿಯಲ್ಲಿ ಪ್ಯಾಲೆಸ್ತೀನಿ ಪತ್ರಕರ್ತ ಹಸನ್ ಅಸ್ಲಿಹ್ ಮೃತಪಟ್ಟಿದ್ದಾರೆ ಎಂದು ಇಲ್ಲಿನ ಆರೋಗ್ಯ ಸಚಿವಾಲಯ ಹೇಳಿದೆ. ಹಮಾಸ್ ಪರವಾಗಿ ಅಸ್ಲಿಕ್ ಕಾರ್ಯನಿರ್ವಹಿಸುತ್ತಿದ್ದರು ಎಂದು ಈ ಹಿಂದೆ ಇಸ್ರೇಲ್ ಪಡೆಗಳು ಆರೋಪಿಸಿದ್ದವು.

ಕಳೆದ ತಿಂಗಳು ಇಸ್ರೇಲ್ ನಡೆಸಿದ್ದ ದಾಳಿಯಲ್ಲಿ ಗಾಯಗೊಂಡಿದ್ದ ಅಸ್ಲಿಹ್, ಖಾನ್ ಯೂನಿಸ್ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಇದೀಗ ಅದೇ ಆಸ್ಪತ್ರೆಯ ಮೇಲೆ ಇಸ್ರೇಲ್ ದಾಳಿ ನಡೆಸಿದ ಪರಿಣಾಮ ಅಸ್ಲಿಕ್ ಜತೆಗೆ ಮತ್ತೊಬ್ಬ ವ್ಯಕ್ತಿಯೂ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ ಎಂದು ಗಾಜಾದ ಅಧಿಕಾರಿಯೊಬ್ಬರು ಹೇಳಿದ್ದಾರೆ. ಅಸ್ಲಿಹ್ ಅವರು ಆಲಂ 24 ನ್ಯೂಸ್ ಸಂಸ್ಥೆಯ ಮುಖ್ಯಸ್ಥರಾಗಿದ್ದರು. ಯುದ್ಧ ಆರಂಭವಾದ ಬಳಿಕ ಗಾಜಾದಲ್ಲಿ ಈವರೆಗೆ 160 ಪತ್ರಕರ್ತರು ಮೃತಪಟ್ಟಿದ್ದಾರೆ ಎನ್ನಲಾಗಿದೆ

## ಪಹಲ್ಗಾಮ್ ದಾಳಿ ಉಗ್ರರ ಫೋಟೋ ಬಿಡಗಡೆ ಸುಳಿವು ಕೊಟ್ಟವರಿಗೆ 20 ಲಕ್ಷ ಬಹುಮಾನ

**ಶ್ರೀನಗರ,ಮೇ 13:** ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಮೂವರು ಉಗ್ರರ ಪೋಸ್ಟರ್‌ಗಳನ್ನು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಬಿಡುಗಡೆಗೊಳಿಸಿದ್ದು, ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಘೋಷಿಸಿದ್ದಾರೆ.

ಏ.22 ರಂದು ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ನಡೆದ ಹಿಂದೂಗಳ ನರಮೇಧದಲ್ಲಿ 26 ಜನರು ಸಾವನ್ನಪ್ಪಿದ್ದರು. ಈ ದಾಳಿಯಲ್ಲಿ ಭಾಗಿಯಾಗಿದ್ದ ಭಯೋತ್ಪಾದಕರನ್ನು ಪತ್ತೆ ಹಚ್ಚಲು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಮೂವರು ಶಂಕಿತ ಪಾಕ್ ಉಗ್ರರ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿದ್ದಾರೆ. ಆ ಪೋಸ್ಟರ್‌ಗಳನ್ನು ಅಂಟಿಸಿ ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಘೋಷಿಸಿದ್ದಾರೆ. ಜೊತೆಗೆ ಸುಳಿವು ಕೊಟ್ಟವರ ಮಾಹಿತಿಯನ್ನು




ಗೌಪ್ಯವಾಗಿಡಲಾಗುವುದು ಎಂದು ಉಲ್ಲೇಖಿಸಿದ್ದಾರೆ.

ಸದ್ಯ ಜಮ್ಮು ಮತ್ತು ಕಾಶ್ಮೀರದಾದ್ಯಂತ 'ಭಯೋತ್ಪಾದನೆ ಮುಕ್ತ ಕಾಶ್ಮೀರ ಎಂಬ ಸಂದೇಶಗಳನ್ನು ಒಳಗೊಂಡಿರುವ ಪೋಸ್ಟರ್‌ಗಳು ಕಾಣಿಸಿಕೊಂಡಿದ್ದು, ಅದರಲ್ಲಿ ಲಷ್ಕರ್–ಇ–ತೈಬಾದ ಮೂವರು ಭಯೋತ್ಪಾದಕರಾದ ಅನಂತ್‌ನಾಗ್ ನಿವಾಸಿ ಆದಿಲ್ ಹುಸೇನ್ ಥೋಕರ್ ಮತ್ತು ಪಾಕ್ ಪ್ರಜೆಗಳಾದ ಅಲಿ ಭಾಯ್ ಅಕಾ ತಲ್ಹಾ ಭಾಯ್ ಮತ್ತು ಹಶಿಮ್ ಮೂಸಾ ಅಕಾ ಸುಲೇಮಾನ್ ಫೋಟೋಗಳಿವೆ.

ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆ ಮೇ 7ರಂದು 'ಆಪರೇಷನ್ ಸಿಂಧೂರ ಹೆಸರಿನಲ್ಲಿ ಪಾಕ್‌ನ 9 ಭಯೋತ್ಪಾದಕರ ನೆಲೆಗಳ ಮೇಲೆ ದಾಳಿ ನಡೆಸಿತು. ಅದಾದ ಬಳಿಕ ಪಾಕಿಸ್ತಾನ ಹಲವು ಬಾರಿ ಅಪ್ರಚೋದಿತ ದಾಳಿ ನಡೆಸಿದ್ದು, ಮೇ 10ರಂದು ಭಾರತ–ಪಾಕಿಸ್ತಾನ ಕದನ ವಿರಾಮ ಘೋಷಿಸಿವೆ.

## ವ್ಯಾಪಾರ ನಿಲ್ಲಿಸುವುದಾಗಿ ಟ್ರಂಪ್ ಬೆದರಿಕೆ ಸ್ಪಷ್ಟೀಕರಣಕ್ಕೆ ಕಾಂಗ್ರೆಸ್ ಒತ್ತಾಯ

**ನವದೆಹಲಿ, ಮೇ 13:** ವ್ಯಾಪಾರ ನಿಲ್ಲಿಸುವುದಾಗಿ ಬೆದರಿಕೆ ಹಾಕಿದ ಕಾರಣಕ್ಕಾಗಿ ಭಾರತ ಮತ್ತು ಪಾಕಿಸ್ತಾನ ಕದನ ವಿರಾಮವನ್ನು ಒಪ್ಪಿಕೊಂಡಿತ್ತು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆ ವ್ಯಾಪಕ ವಿವಾದವನ್ನು ಹುಟ್ಟುಹಾಕಿದೆ. ಅವರ ಹೇಳಿಕೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಸ್ಪಷ್ಟೀಕರಣ ನೀಡುವಂತೆ ಕಾಂಗ್ರೆಸ್ ಪ್ರಶ್ನಿಸಿದೆ.

ಪ್ರಧಾನಿ ಬಹಳ ವಿಳಂಬವಾಗಿ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದ ಕೆಲವು ನಿಮಿಷಗಳ ಹಿಂದೆ ಅಮೆರಿಕ ಅಧ್ಯಕ್ಷ ಟ್ರಂಪ್ ಬಹಿರಂಗಪಡಿಸಿದ ಮಾಹಿತಿ ಎಲ್ಲವನ್ನೂ ತಲೆಕೆಳಗೆ ಮಾಡಿದೆ. ಪ್ರಧಾನಿ ಅವರು ಅವುಗಳ ಬಗ್ಗೆ ಸಂಪೂರ್ಣವಾಗಿ ಮೌನವಾಗಿದ್ದರು. ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ತಿಳಿಸಿದ್ದಾರೆ.



ಭಾರತವು ಅಮೆರಿಕದ ಮಧ್ಯಸ್ಥಿಕೆಗೆ ಒಪ್ಪಿಕೊಂಡಿದೆಯೇ ಅಥವಾ ತಟಸ್ಥ ಸ್ಥಳದಲ್ಲಿ ಪಾಕಿಸ್ತಾನದೊಂದಿಗೆ ಮಾತುಕತೆ ನಡೆಸಲು ಒಪ್ಪಿಕೊಂಡಿದೆಯೇ ಎಂದು ರಮೇಶ್ ಪ್ರಶ್ನಿಸಿದ್ದಾರೆ. ಆಟೋಮೊಬೈಲ್ ಮತ್ತು ಕೃಷಿಯಂತಹ ಕ್ಷೇತ್ರಗಳಲ್ಲಿ ಭಾರತೀಯ ಮಾರುಕಟ್ಟೆಗಳಿಗೆ ಹೆಚ್ಚಿನ ಅವಕಾಶ ನೀಡಬೇಕು ಎಂಬ ಅಮೆರಿಕದ ಬೇಡಿಕೆಗಳನ್ನು ಒಪ್ಪಿಕೊಳ್ಳಲು ಭಾರತ ಈಗ ಸಿದ್ಧವಾಗಿದೆಯೇ ಎಂದು ಅವರು ಕೇಳಿದ್ದಾರೆ.

ಭಾರತ ಮತ್ತು ಪಾಕಿಸ್ತಾನದ ನಡುವಿನ ಪೂರ್ಣ ಮತ್ತು ತಕ್ಷಣದ ಕದನ ವಿರಾಮದ ಮಾತುಕತೆ ತನ್ನ ಮಧ್ಯಸ್ಥಿಕೆಯಿಂದ ನಡೆದಿದೆ ಎಂಬ ಹೇಳಿಕೆಯನ್ನು ಟ್ರಂಪ್ ಸೋಮವಾರ ಪುನರುಚ್ಚರಿಸಿದ್ದಾರೆ. ಮೋದಿ ಅವರ ಹೇಳಿಕೆ ಮತ್ತು ಅಮೆರಿಕ ಅಧ್ಯಕ್ಷರ ಹೇಳಿಕೆಯನ್ನು ನಾನು ಕೇಳಿದೆ. ಇದು ತೀವ್ರ ಸಮಸ್ಯಾತ್ಮಕ ವಿಚಾರ ಎಂದು ಕಾಂಗ್ರೆಸ್ ವಕ್ತಾರ ಪವನ್ ಖೇರಾ ಅವರು ಬಣ್ಣಿಸಿದ್ದಾರೆ. ಆಪರೇಷನ್ ಸಿಂಧೂರ್ ಅನ್ನು ನಿಲ್ಲಿಸುವಂತೆ ಮಾಡಲು ವ್ಯಾಪಾರವನ್ನು ಬೆದರಿಕೆಯಾಗಿ ಬಳಸಿಕೊಂಡಿರುವುದಾಗಿ ಅಮೆರಿಕ ಅಧ್ಯಕ್ಷರು ಹೇಳುತ್ತಾರೆ. ಪ್ರಧಾನಿ ಇದಕ್ಕೆ ಪ್ರತಿಕ್ರಿಯಿಸುತ್ತಾರೆಂದು ನಾವು ನಿರೀಕ್ಷಿಸಿದ್ದೆವು. ದುರದೃಷ್ಟವಶಾತ್, ಅವರು ಪ್ರತಿಕ್ರಿಯಿಸಲಿಲ್ಲ. ಎಂದು ಅವರು ಹೇಳಿದ್ದಾರೆ.

ಕಾಂಗ್ರೆಸ್ ಸಂಸದ ಶಶಿ ತರೂರ್ ಅವರು ಮೋದಿಯನ್ನು ನೇರವಾಗಿ ಪ್ರಶ್ನಿಸದೆ, ಟ್ರಂಪ್ ಅವರ ಪೋಸ್ಟ್ ಅನ್ನು ಭಾರತಕ್ಕೆ ನಿರಾಶಾದಾಯಕ ಎಂದು ಕರೆದ್ದಾರೆ. ಪಹಲ್ಗಾಮ್ ದಾಳಿಯ ನಂತರ ಭಾರತ ನಡೆಸಿದ ಆಪರೇಷನ್ ಸಿಂಧೂರದ ನಂತರ ನಾಲ್ಕು ದಿನಗಳ ಕಾಲ ಉಭಯ ದೇಶಗಳ ನಡುವೆ ಮಿಲಿಟರಿ ಉದ್ವಿಗ್ನತೆ ಉಂಟಾಗಿತ್ತು. ಅದಾಗ್ಯೂ, ಭಾರತ ಮತ್ತು ಪಾಕಿಸ್ತಾನ ಎಲ್ಲಾ ಗುಂಡಿನ ದಾಳಿಯನ್ನು ನಿಲ್ಲಿಸಲು ಶನಿವಾರ ಒಪ್ಪಿಕೊಂಡವು. ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು ಶನಿವಾರ ಮಧ್ಯಾಹ್ನ ಭಾರತಕ್ಕೆ ಕರೆ ಮಾಡಿ ಚಕಮಕಿಯನ್ನು ಕೊನೆಗೊಳಿಸಲು ಪ್ರಸ್ತಾಪಿಸಿದ್ದಾರೆ ಎಂದು ಇದೇ ವೇಳೆ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಹೇಳಿದ್ದರು.

ಪ್ರಧಾನಿ ನರೇಂದ್ರ ಮೋದಿ ಸೋಮವಾರ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಈ ನಿಲುವನ್ನು ಪುನರುಚ್ಚರಿಸಿದ್ದಾರೆ. ಪಾಕಿಸ್ತಾನದ ಪರಮಾಣು ಬೆದರಿಕೆಯನ್ನು ಸಹಿಸಲು ಸಾಧ್ಯವಿಲ್ಲ ಮತ್ತು ಆಪರೇಷನ್ ಸಿಂಧೂರ್ ಈಗ ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಭಾರತದ ನೀತಿಯಾಗಿದೆ ಎಂದು ಮೋದಿ ಹೇಳಿದ್ದಾರೆ. ಭಯೋತ್ಪಾದನೆ ಮತ್ತು ಮಾತುಕತೆ ಏಕಕಾಲದಲ್ಲಿ ನಡೆಯಲು ಸಾಧ್ಯವಿಲ್ಲ ಎಂಬ ಭಾರತದ ನಿಲುವನ್ನು ಮೋದಿ ಪುನರುಚ್ಚರಿಸಿದ್ದಾರೆ. ಭಯೋತ್ಪಾದನೆ ಮತ್ತು ವ್ಯಾಪಾರ ಏಕಕಾಲದಲ್ಲಿ ನಡೆಯಲು ಸಾಧ್ಯವಿಲ್ಲ, ಮತ್ತು ನೀರು ಮತ್ತು ರಕ್ತ ಏಕಕಾಲದಲ್ಲಿ ಹರಿಯಲು ಸಾಧ್ಯವಿಲ್ಲ ಎಂದು ಅವರು ಏ.23ರಂದು ನವದೆಹಲಿ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿದ್ದನ್ನು ಉಲ್ಲೇಖಿಸಿ ಹೇಳಿದ್ದಾರೆ. ಭಾರತ ಮತ್ತು ಪಾಕಿಸ್ತಾನ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಟ್ರಂಪ್ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೊಂಡ ಕೆಲವೇ ನಿಮಿಷಗಳ ನಂತರ ಶನಿವಾರ ಭಾರತದ ವಿದೇಶಾಂಗ ಕಾರ್ಯದರ್ಶಿ ಈ ಬಗ್ಗೆ ಘೋಷಣೆ ಮಾಡಿದ್ದರು. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರು ಸಾಮಾಜಿಕ ಮಾಧ್ಯಮದಲ್ಲಿ ಭಾರತ ಮತ್ತು ಪಾಕಿಸ್ತಾನ ತಟಸ್ಥ ಸ್ಥಳದಲ್ಲಿ ವ್ಯಾಪಕವಾದ ವಿಷಯಗಳ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ಒಪ್ಪಿಕೊಂಡಿವೆ ಎಂದು ಹೇಳಿಕೊಂಡಿದ್ದರು.

## ಬೃಹತ್ ಕೈಗಾರಿಕೆ, ಉಕ್ಕು ಸಚಿವಾಲಯ ಪ್ರಗತಿ ಪರಿಶೀಲನೆ ನಡೆಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

**ನವದೆಹಲಿ, ಮೇ 13:** ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು ನವದೆಹಲಿಯಲ್ಲಿ ಮಂಗಳವಾರ ತಮ್ಮ ಉಸ್ತುವಾರಿಯ ಎರಡೂ ಸಚಿವಾಲಯಗಳ ಉನ್ನತ ಅಧಿಕಾರಿಗಳ ಜತೆ ಪ್ರತ್ಯೇಕವಾಗಿ ಪರಿಶೀಲನಾ ಸಭೆಗಳನ್ನು ನಡೆಸಿದರು. ಎರಡೂ ಸಚಿವಾಲಯಗಳಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಈಗಾಗಲೇ ಅನುಷ್ಠಾನಕ್ಕೆ ತರಲಾಗಿರುವ ಮಹತ್ವದ ಕಾರ್ಯಕ್ರಮಗಳ ಬಗ್ಗೆ ಸಚಿವರು ಕೂಲಂಕಶವಾಗಿ ಚರ್ಚೆ ನಡೆಸಿದರು.



### ಬೃಹತ್ ಕೈಗಾರಿಕೆ ಸಚಿವಾಲಯ:

ಬೃಹತ್ ಕೈಗಾರಿಕೆ ಸಚಿವಾಲಯದ ಸಭೆಯಲ್ಲಿ ಕೇಂದ್ರ ಸಚಿವರು ಎಲೆಕ್ಟ್ರಿಕ್ ವಾಹನಗಳ ಬಳಕೆ ಕುರಿತಾದ ಪಿಎಂ ಇ ಡ್ರೈವ್ ಹಾಗೂ ಉತ್ಪಾದನಾ ಸಂಪರ್ಕ ಸೌಲಭ್ಯ ಕಾರ್ಯಕ್ರಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕೆಲ ನಿರ್ದಿಷ್ಟ ಸೂಚನೆಗಳನ್ನು ನೀಡಿದರು.

ರಸ್ತೆ ಸಾರಿಗೆ ಕ್ಷೇತ್ರದಲ್ಲಿ ವಾಯು ಮಾಲಿನ್ಯವನ್ನು ಗಣನೀಯ ಪ್ರಮಾಣದಲ್ಲಿ ಕುಗ್ಗಿಸಬೇಕಾಗಿದ್ದು, ಆ ದಿಸೆಯಲ್ಲಿ ಪ್ರಧಾನಿಗಳು ನಿಗದಿ ಮಾಡಿರುವ ಗುರಿಗಳನ್ನು ಮುಟ್ಟುವ ಬಗ್ಗೆ ಸಚಿವರು ಅಧಿಕಾರಿಗಳ ಜತೆ ಚರ್ಚಿಸಿದರು. ಹೆಚ್ಚೆಚ್ಚು ಪ್ರಮಾಣದಲ್ಲಿ ಎಲೆಕ್ಟ್ರಿಕ್ ವಾಹಗಳ ಬಳಕೆಯನ್ನು ಉತ್ತೇಜಿಸುವುದು, ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ, ಇನ್ನಿತರೆ ಮೂಲಸೌಕರ್ಯ ಅಭಿವೃದ್ಧಿ ಕುರಿತೂ ಅಧಿಕಾರಗಳು ಸಚಿವರಿಗೆ ಮಾಹಿತಿ ನೀಡಿದರು. ಮೇಕ್ ಇನ್ ಇಂಡಿಯಾ ಹಾಗೂ ಆತ್ಮನಿರ್ಭರ ಭಾರತ ಯೋಜನೆಗಳ ಅಡಿಯಲ್ಲಿ ದೇಶಿಯವಾಗಿ ಎಲೆಕ್ಟ್ರಿಕ್ ವಾಹನಗಳನ್ನು ಅಗತ್ಯ ಪ್ರಮಾಣದಲ್ಲಿ ತಯಾರಿಸುವುದಕ್ಕೆ ಸಚಿವಾಲಯ ಹೆಚ್ಚು ಉತ್ತೇಜನ ನೀಡಬೇಕು ಎಂದು ಸಚಿವರು ಒತ್ತಿ ಹೇಳಿದರು.

### ಉಕ್ಕು ಸಚಿವಾಲಯ:

ಉಕ್ಕು ಸಚಿವಾಲಯದ ಸಭೆಯಲ್ಲಿ ವಿಶೇಷವಾಗಿ ಸಾರ್ವಜನಿಕ ವಲಯದ ಸ್ಥಾವರಗಳ ಕಾರ್ಯನಿರ್ವಹಣೆ ಬಗ್ಗೆ ಸಚಿವರು ಹೆಚ್ಚು ಮಾಹಿತಿ ಪಡೆದುಕೊಂಡರು. ಈಗಾಗಲೇ ಭಾರತೀಯ ಉಕ್ಕು ಪ್ರಾಧಿಕಾರದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಉಕ್ಕು ಉತ್ಪಾದಕ ಕಂಪನಿಗಳ ಪ್ರಗತಿ ಹಾಗೂ ಉತ್ಪಾದಕತೆಯ ಕ್ಷಮತೆ ಬಗ್ಗೆ ಸಚಿವ ಕುಮಾರಸ್ವಾಮಿ ಅವರು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಅಲ್ಲದೆ, ಉಕ್ಕು SAIL ವಿಸ್ತರಣೆ ಹಾಗೂ ವಿಶಾಖಪಟ್ಟಣದ ರಾಷ್ಟ್ರೀಯ ಉಕ್ಕು ಕಾರ್ಖಾನೆ ಕಾರ್ಯಕ್ಷಮತೆ ಬಗ್ಗೆ ಸಚಿವರು ಮಾಹಿತಿ ಪಡೆದುಕೊಂಡರು.

11,400 ಕೋಟಿ ಪರಿಹಾರ ಪ್ಯಾಕೇಜ್ ನೀಡಿದ ನಂತರ ಕಾರ್ಖಾನೆ ಹೇಗೆ ಕಾರ್ಯ ನಿರ್ವಹಿಸುತ್ತದೆ ಎಂಬ ಬಗ್ಗೆ ಸಚಿವರು ಸಮಗ್ರ ಮಾಹಿತಿಯನ್ನು ಪಡೆದುಕೊಂಡರು.

ಅಲ್ಲದೆ; ಉಕ್ಕು ಕ್ಷೇತ್ರದಲ್ಲಿ ಮಾಲಿನ್ಯವನ್ನು ಶೂನ್ಯಮಟ್ಟಕ್ಕೆ ಇಳಿಸಲೇಬೇಕೆಂಬ ಪ್ರಧಾನಿಗಳ ಸಂಕಲ್ಪವನ್ನು ಸಾಕಾರ ಮಾಡುವ ನಿಟ್ಟಿನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿಗೆ ಇನ್ನೂ ಹೆಚ್ಚಿನ ಒತ್ತು ಕೊಡಬೇಕು. ಮತ್ತೂ ಗ್ರೀನ್ ಸ್ಟೀಲ್ ತಯಾರಿಕೆಗೆ ಹೆಚ್ಚಿನ ಮಾರ್ಗೋಪಾಯಗಳನ್ನು ಕಂಡುಕೊಂಡು ಸಹಯೋಗಗಳನ್ನು ಬಲಪಡಿಸಬೇಕು ಎಂದು ಸಚಿವರು ನಿರ್ದೇಶನ ನೀಡಿದರು. ಲೋಹಶಾಸ್ತ್ರದಲ್ಲಿ ಅದರಲ್ಲಿಯೂ ಪ್ರಮುಖವಾಗಿ ಕಬ್ಬಿಣ, ಉಕ್ಕು ವಲಯದಲ್ಲಿ ಆಗುತ್ತಿರುವ ಸಂಶೋಧನೆ ಮತ್ತು ಅಭಿವೃದ್ಧಿಯ ಬಗ್ಗೆ ಅಧಿಕಾರಿಗಳು ಸಚಿವರಿಗೆ ವಿವರಣೆ ನೀಡಿದರು. ಲೋಹ ತಂತ್ರಜ್ಞಾನ ಸಂಶೋಧನೆ ಮತ್ತು ಅಭಿವೃದ್ಧಿ ಸೊಸೈಟಿಯನ್ನು ಕೇಂದ್ರವಾಗಿ ಇರಿಸಿಕೊಂಡು ಕಾರ್ಯಪ್ರವೃತ್ತವಾಗಿದ್ದೇವೆ. CSIRO ಮತ್ತು ನ್ಯೂ ಸೌತ್‌ವೇಲ್ಸ್ ವಿಶ್ವವಿದ್ಯಾಲಯ ಸೇರಿದಂತೆ ಆಸ್ಟ್ರೇಲಿಯಾದ ಸಂಸ್ಥೆಗಳೊಂದಿಗೆ ಸಹಯೋಗದ ಚರ್ಚೆಗಳನ್ನು ನಡೆಸುತ್ತಿದ್ದು, ಹೈಡ್ರೋಜನ್ ಆಧಾರಿತ ಗ್ರೀನ್ ಸ್ಟೀಲ್ ಉತ್ಪಾದನೆ ಮತ್ತು ಇಂಗಾಲರಹಿತೀಕರಣದ ಕಡೆಗೆ ವ್ಯೂಹಾತ್ಮಕ ಹೆಜ್ಜೆಗಳನ್ನು ಇಡಲಾಗುತ್ತಿದೆ ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.ಬೃಹತ್ ಕೈಗಾರಿಕೆ ಸಚಿವಾಲಯದ ಸಭೆಯಲ್ಲಿ ಕಾರ್ಯದರ್ಶಿ ಕಮರನ್ ರಿಜ್ವಿ, ಜಂಟಿ ಕಾರ್ಯದರ್ಶಿ ಸುನೀಲ್ ಮಿತ್ತಲ್ ಹಾಗೂ ಉಕ್ಕು ಸಚಿವಾಲಯದ ಸಭೆಯಲ್ಲಿ ಹಣಕಾಸು ಸಲಹೆಗಾರರೂ ಆಗಿರುವ ಹೆಚ್ಚುವರಿ ಕಾರ್ಯದರ್ಶಿ ಅಶಿಶ್ ಚಟರ್ಜಿ, ಜಂಟಿ ಕಾರ್ಯದರ್ಶಿ ಅಭಿಜಿತ್ ನರೇಂದ್ರ ಸಭೆಯಲ್ಲಿ ಭಾಗಿಯಾಗಿದ್ದರು.



ನವದೆಹಲಿಯ ಸೌತ್ ಬ್ಲಾಕ್‌ನಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಪಶ್ಚಿಮ ಗಡಿಯಲ್ಲಿ ಭದ್ರತಾ ಪರಿಸ್ಥಿತಿಯನ್ನು ವಿವರ ಪಡೆದರು.

## ಶೋಪಿಯಾನ್‌ನಲ್ಲಿ ಭದ್ರತಾ ಪಡೆಯೊಂದಿಗೆ ಗುಂಡಿನ ಚಕಮಕಿ ಮೂವರು ಉಗ್ರರು ಹತ

**ಶ್ರೀನಗರ,ಮೇ 13:** ಜಮ್ಮು ಮತ್ತು ಕಾಶ್ಮೀರದ ಶೋಪಿಯಾನ್ ಜಿಲ್ಲೆಯ ಶುಕ್ರೂ ಕೆಲ್ಲರ್ ಅರಣ್ಯ ಪ್ರದೇಶದಲ್ಲಿ ಮಂಗಳವಾರ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಮೂವರು ಹತನಾಗಿದ್ದಾರೆ. ಎನ್‌ಕೌಂಟರ್‌ನಲ್ಲಿ ಉನ್ನತ ಭಯೋತ್ಪಾದಕ ಕಮಾಂಡರ್ ಸೇರಿ ಮೂವರು ಉಗ್ರರು ಹತ್ಯೆಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಸ್ತುತ ಕಾರ್ಡನ್ ಮತ್ತು ಶೋಧ ಕಾರ್ಯಾಚರಣೆ (ಸಿಎಎಸ್‌ಒ) ನಡೆಯುತ್ತಿರುವ ಸ್ಥಳದಲ್ಲಿ ಭಯೋತ್ಪಾದಕರು ಸಿಕ್ಕಿಬಿದ್ದಿದ್ದರು ಎಂದು ಭದ್ರತಾ ಪಡೆಗಳು ತಿಳಿಸಿವೆ.

ದಕ್ಷಿಣ ಕಾಶ್ಮೀರ ಜಿಲ್ಲೆಯ ಶುಕ್ರೂ ಕೆಲ್ಲರ್ ಪ್ರದೇಶದಲ್ಲಿ ಭಯೋತ್ಪಾದಕರು ಇರುವ ಬಗ್ಗೆ ನಿರ್ದಿಷ್ಟ ಮಾಹಿತಿಯ ಆಧಾರದ ಮೇಲೆ ಭದ್ರತಾ ಪಡೆಗಳು ಅಲ್ಲಿ ಸುತ್ತುವರಿದು ಶೋಧ ಕಾರ್ಯಾಚರಣೆ ಪ್ರಾರಂಭಿಸಿದವು. ಭಯೋತ್ಪಾದಕರು ಪ್ರತಿದಾಳಿ ನಡೆಸಿದರು. ಇದು ಪರಸ್ಪರರ ನಡುವೆ ಗುಂಡಿನ ಚಕಮಕಿಗೆ ಕಾರಣವಾಯಿತು. ಏ.22 ರ



ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆಂದು ಶಂಕಿಸಲಾಗಿರುವ ಮೂವರು ಪಾಕಿಸ್ತಾನಿ ಭಯೋತ್ಪಾದಕರಾದ ಆದಿಲ್ ಹುಸೇನ್ ಥೋಕರ್, ಅಲಿ ಭಾಯ್ ಮತ್ತು ಹಾಶಿಮ್ ಮೂಸಾ ಪೋಸ್ಟರ್‌ಗಳನ್ನು ಭದ್ರತಾ ಪಡೆಗಳು ಪೋಸ್ಟ್ ಮಾಡಿದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.

## ಮತ್ತೆ 7 ನಗರಗಳಿಗೆ ವಿಮಾನ ಹಾರಾಟ ರದ್ದು

**ನವದೆಹಲಿ, ಮೇ 13:** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಇಂಡಿಗೋ ಮತ್ತು ಏರ್ ಇಂಡಿಯಾ ಮಂಗಳವಾರ ಉತ್ತರ ಮತ್ತು ಪಶ್ಚಿಮ ಭಾರತದ ಹಲವಾರು ನಗರಗಳಿಗೆ ವಿಮಾನ ಹಾರಾಟವನ್ನು ಸ್ಥಗಿತಗೊಳಿಸಿವೆ. ಸೋಮವಾರ ಸಂಜೆ ಗಡಿಯಲ್ಲಿ ಡ್ರೋನ್ ಚಟುವಟಿಕೆಯ ವರದಿಗಳ ನಂತರ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪಿಟಿಐ ವರದಿ ಮಾಡಿದೆ. ಜಮ್ಮು, ಲೇಹ್, ಜೋಧ್ಪುರ, ಅಮೃತಸರ, ಭುಜ್, ಜಾಮ್‌ನಗರ, ಚಂಡೀಗಢ ಮತ್ತು ರಾಜಕೋಟ್‌ಗಳಿಂದ ಏರ್ ಇಂಡಿಯಾ ತನ್ನ ದ್ವಿಮುಖ ಹಾರಾಟ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದೆ. ಎಕ್ಸ್ ಕುರಿತು ಹೇಳಿಕೆಯನ್ನು ಹಂಚಿಕೊಳ್ಳುವಾಗ, ವಿಮಾನಯಾನ ಸಂಸ್ಥೆಯು ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ಪ್ರಯಾಣಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಮೇ 13ರ ಮಂಗಳವಾರದಂದು ಜಮ್ಮು, ಲೇಹ್, ಜೋಧ್‌ಪುರ, ಅಮೃತಸರ, ಭುಜ್, ಜಾಮ್‌ನಗರ, ಚಂಡೀಗಢ ಮತ್ತು ರಾಜಕೋಟ್‌ಗೆ ಮತ್ತು ಅಲ್ಲಿಂದ ಹೊರಡುವ ವಿಮಾನಗಳನ್ನು



ರದ್ದುಗೊಳಿಸಲಾಗಿದೆ. ನಾವು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದೇವೆ ಮತ್ತು ನಿಮಗೆ ನವೀಕರಣಗಳನ್ನು ನೀಡುತ್ತೇವೆ ಎಂದು ಮಾಹಿತಿ ಹಂಚಿಕೊಂಡಿದೆ. ಇಂಡಿಗೋ ಕೂಡ ಶನಿವಾರ 11:59ರವರೆಗೆ (ಮೇ 17) ಜಮ್ಮು, ಅಮೃತಸರ, ಚಂಡೀಗಢ, ಲೇಹ್, ಶ್ರೀನಗರ ಮತ್ತು ರಾಜಕೋಟ್‌ಗೆ ಮತ್ತು ಅಲ್ಲಿಂದ ಹೊರಡುವ ವಿಮಾನಗಳ ಸಂಚಾರ ರದ್ದುಗೊಳಿಸಿದೆ. ಇದು ನಿಮ್ಮ ಪ್ರಯಾಣ ಯೋಜನೆಗಳಿಗೆ ಹೇಗೆ ಅಡ್ಡಿಯಾಗಬಹುದು ಎಂಬುದನ್ನು ನಾವು ಅರ್ಥಮಾಡಿಕೊಂಡಿದ್ದೇವೆ ಮತ್ತು ಉಂಟಾದ ಅನಾನುಕೂಲಕ್ಕೆ ವಿಷಾದಿಸುತ್ತೇವೆ. ನಮ್ಮ ತಂಡಗಳು ಪರಿಸ್ಥಿತಿಯನ್ನು ಸಕ್ರಿಯವಾಗಿ ಮೇಲ್ವಿಚಾರಣೆ ಮಾಡುತ್ತಿವೆ ಮತ್ತು ಹೆಚ್ಚಿನ ನವೀಕರಣಗಳ ಕುರಿತು ನಿಮಗೆ ತಕ್ಷಣ ತಿಳಿಸುತ್ತವೆ ಎಂದು ಇಂಡಿಗೋ ಪೋಸ್ಟ್ ಮಾಡಿದೆ. ಪಾಕಿಸ್ತಾನದೊಂದಿಗೆ ಕದನ ವಿರಾಮ ಒಪ್ಪಂದದ ನಂತರ ಮುಚ್ಚಲ್ಪಟ್ಟ 32 ವಿಮಾನ ನಿಲ್ದಾಣಗಳನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರವು ಮತ್ತೆ ತೆರೆದ ನಂತರ ಈ ನಿರ್ಧಾರ ಬಂದಿದೆ. ಆಧಂಪುರ್, ಅಂಬಾಲ, ಅವಂತಿಪುರ, ಬಟಿಂಡಾ, ಬಿಕಾನೇರ್, ಹಲ್ವಾರಾ, ಹಿಂದೋನ್, ಜೈಸಲ್ಮೇರ್, ಕಾಂಡ್ಲಾ, ಕಾಂಗ್ರಾ , ಕೆಶೋಡ್, ಕಿಶನ್‌ಗಢ, ಕುಲು, ಮನಾಲಿ , ಲುಧಿಯಾನ, ಮುಂದ್ರಾ, ನಲಿಯಾ, ಪಠಾಣ್‌ಕೋಟ್, ಪಟಿಯಾಲ, ಪೋರ್‌ಬಂದರ್, ಸರ್ಸಾವಾ, ಶಿಮ್ಲಾ, ಥೋಯಿಸ್ ಮತ್ತು ಉತ್ತರಲೈ ಸೇರಿದಂತೆ ಇತರ ವಿಮಾನ ನಿಲ್ದಾಣಗಳಿಗೆ ನಾಗರಿಕ ವಿಮಾನ ಕಾರ್ಯಾಚರಣೆಯನ್ನು ಮುಂದುವರಿಸಲು ಅನುಮತಿ ನೀಡಲಾಗಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕರ್ನಾಟಕ ರಾಜಕಾರಣದ ರೈಸಿಂಗ್ ಸ್ಟಾರ್, ಟ್ರಬಲ್ ಶೂಟರ್ ಡಿ.ಕೆ.ಶಿವಕುಮಾರ್



1ನೇ ಪುಟದಿಂದ...

■ 2018ರ ಚುನಾವಣೆಯ ನಂತರ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದನ್ನು ತಡೆದು, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಮತ್ತು ಜನತಾ ದಳ (ಜಾತ್ಯತೀತ) ಸಮ್ಮಿಶ್ರ ಸರ್ಕಾರ ರಚನೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿದ ಕೀರ್ತಿ ಡಿ.ಕೆ.ಶಿವಕುಮಾರ್ ಅವರಿಗೆ ಸಲ್ಲುತ್ತದೆ.



ಬಾಲ್ಯದಲ್ಲಿ ಡಿ.ಕೆ.ಸುರೇಶ್ ಮತ್ತು ಸೋದರಿ ಜತೆ

■ ಕಾಂಗ್ರೆಸ್ ಪಕ್ಷದ ನಿಷ್ಠೆ ಮತ್ತು ಪಕ್ಷವನ್ನು ಸಂಕಷ್ಟಗಳಿಂದ ಪಾರು ಮಾಡುವ ಮೂಲಕ ಡಿ.ಕೆ.ಶಿವಕುಮಾರ್ ಅವರು ಪಕ್ಷದ ನಾಯಕರಾದ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿಯವರ ಆಪ್ತರೆಂದು ಗುರುತಿಸಿಕೊಂಡವರು. ಜುಲೈ 6, 2020ರಂದು, ದಿನೇಶ್ ಗುಂಡೂರಾವ್ ಅವರ ನಂತರ ಡಿ.ಕೆ. ಶಿವಕುಮಾರ್ ಅಧಿಕೃತವಾಗಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು.

■ ಅನಂತರ 2023ರ ರಾಜ್ಯ ವಿಧಾನಸಭಾ ಚುನಾವಣೆಗೆ ಪಕ್ಷವನ್ನು ಸಂಘಟಿಸಿ, ಕಾರ್ಯಕರ್ತರಲ್ಲಿ ಉತ್ಸಾಹ ತುಂಬಿದ ಡಿ.ಕೆ.ಶಿವಕುಮಾರ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರುವಲ್ಲಿ ಶ್ರಮಿಸಿದರು. ಅನಂತರ ಅವರೇ ಮುಖ್ಯಮಂತ್ರಿಯಾಗ ಬಹುದಿತ್ತು. ಆದರೆ, ಕಾರಣಾಂತರಗಳಿಂದ ಸಿಎಂ ಸ್ಥಾನವನ್ನು ತ್ಯಾಗ ಮಾಡಿದ ಡಿ.ಕೆ. ಶಿವಕುಮಾರ್ 20 ಮೇ 2023ರಂದು ಪ್ರಭಾವಿ ಉಪಮುಖ್ಯಮಂತ್ರಿಯಾದರು.

### ಅಪಾರ ಆಡಳಿತಾನುಭವಿ

■ ಡಿ.ಕೆ.ಶಿವಕುಮಾರ್ ಅವರು ಪ್ರಥಮ ಬಾರಿಗೆ 1990 ರಿಂದ 1996ರವರೆಗೆ ಕಾರಾಗೃಹ ಮತ್ತು ಗೃಹರಕ್ಷಕ ಖಾತೆ ಸಚಿವರಾಗಿ ಮತ್ತು 1994 ರಿಂದ 1999ರ ವರೆಗೆ ಸಹಕಾರ ಮತ್ತು ನಗರಾಭಿವೃದ್ಧಿ ಸಚಿವರಾಗಿ ಸೇವೆ ಸಲ್ಲಿಸಿದರು.

■ 2008 ರಿಂದ 2013ರವರೆಗೆ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡು, 2013ರಲ್ಲಿ ಮತ್ತೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ತರುವಲ್ಲಿ ಶ್ರಮಿಸಿ, 2013ರಿಂದ 2018ರವರೆಗೆ ಇಂಧನ ಸಚಿವರಾಗಿ ಕಾರ್ಯ ನಿರ್ವಹಿಸಿ ಪಾವಗಡದಲ್ಲಿ ದೇಶದ ಅತಿದೊಡ್ಡ ಸೋಲಾರ್ ವಿದ್ಯುತ್ ಸ್ಥಾವರ ಸ್ಥಾಪಿಸಿದ ಕೀರ್ತಿ ಡಿ.ಕೆ. ಶಿವಕುಮಾರ್ ಅವರಿಗೆ ಸಲ್ಲುತ್ತದೆ. ಅನಂತರ ರಾಜ್ಯದ ಬಾರಿ ನೀರಾವರಿ ಮತ್ತು ವೈದ್ಯಕೀಯ ಶಿಕ್ಷಣ ಸಚಿವರಾಗಿಯೂ ಕಾರ್ಯ ನಿರ್ವಹಿಸಿದರು. ಅನಂತರ ಕೆಪಿಸಿಸಿ ಅಧ್ಯಕ್ಷರಾಗಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ತಂದ ಡಿ.ಕೆ. ಶಿವಕುಮಾರ್, ಬೃಹತ್ ನೀರಾವರಿ (ಜಲಸಂಪನ್ಮೂಲ) ಮತ್ತು ಬೆಂಗಳೂರು ನಗರಾಭಿವೃದ್ಧಿ ಖಾತೆಗಳನ್ನು ಹೊಂದಿರುವ ಉಪಮುಖ್ಯಮಂತ್ರಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ.



"ಭಾರತ್ ಜೋಡೋ' ಯಾತ್ರೆ ವೇಳೆ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಜತೆ



ಕಾಲೇಜು ದಿನಗಳಲ್ಲಿ ಸ್ನೇಹಿತರ ಜತೆಯಲ್ಲಿ ಡಿಕೆಶಿ

■ ಡಿ.ಕೆ.ಶಿವಕುಮಾರ್ ರಾಜಕೀಯ ಪ್ರವೇಶ ಮಾಡಿದಾಗಿನಿಂದಲೂ ಪಕ್ಷ ನಿಷ್ಠೆಯಿಂದಾಗಿ ಗಾಂಧಿ ಕುಟುಂಬದ ಅತ್ಯಂತ ಆಪ್ತವಲಯದಲ್ಲಿ ಗುರುತಿಸಿಕೊಂಡವರು. ಹೀಗಾಗಿ ಅವರು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುತ್ತಲೇ ಉಪಮುಖ್ಯಮಂತ್ರಿಯಂಥ ಮಹತ್ವದ ಸಚಿವ ಸ್ಥಾನದೊಂದಿಗೆ ಜಲಸಂಪನ್ಮೂಲ ಮತ್ತು ರಾಜಧಾನಿ ಬೆಂಗಳೂರು ಅಭಿವೃದ್ಧಿ ಖಾತೆಯನ್ನೂ ವಹಿಸಿಕೊಂಡರು. ಬೆಂಗಳೂರು ಅಭಿವೃದ್ಧಿ ಖಾತೆ ವಹಿಸಿಕೊಳ್ಳುತ್ತಲೇ ದೇಶದಲ್ಲಿ `ಬ್ರ್ಯಾಂಡ್ ಬೆಂಗಳೂರು' ಮಾಡುವ ಸಂಕಲ್ಪದ ಘೋಷಣೆ ಮಾಡಿದರು. ಈ ದಿಸೆಯಲ್ಲಿ ಸಮಗ್ರ ಬೆಂಗಳೂರು ಅಭಿವೃದ್ಧಿಯ ನೀಲನಕ್ಷೆಯನ್ನು ಸಿದ್ಧಪಡಿಸಿ ಬ್ರ್ಯಾಂಡ್ ಬೆಂಗಳೂರು ಯಶಸ್ವಿಗಾಗಿ ಶ್ರಮಿಸುತ್ತಿದ್ದಾರೆ.

■ ಇಡಿ ಪ್ರಕರಣದಿಂದ ಹಿನ್ನೆಡೆಯಾಗಿದ್ದರೂ ಅವರೆಂದೂ ಅದಕ್ಕೆ ಹೆದರದೇ ಎದುರಿಸಿ, ನನ್ನದೇನೂ ತಪ್ಪಿಲ್ಲವೆಂದು ಎಲ್ಲವನ್ನೂ ಎದುರಿಸುತ್ತ ಬಂದಿರುವ ಅವರಿಗೆ ಇದೀಗ ದೊಡ್ಡ ಶಕ್ತಿ ಬಂದಂತಾಗಿದ್ದು , ಯಾವುದೇ ಸವಾಲನ್ನು ನಿರ್ಭೀತಿಯಿಂದ ಎದುರಿಸುವ ಎದೆಗಾರಿಕೆಯಿಂದ ಎಲ್ಲವನ್ನೂ ಗೆದ್ದು ಸತ್ಯ ನನ್ನನ್ನು ಕಾಪಾಡಿದೆ ಎನ್ನುತ್ತಾರೆ.

■ ಗಾಂಧಿ ಕುಟುಂಬದ ಆಪ್ತರಾಗಿರುವುದರಿಂದಲೇ, ಡಿ.ಕೆ.ಶಿವಕುಮಾರ್ ಅವರಿಗೆ ತೆಲಂಗಾಣ ರಾಜ್ಯ ವಿಧಾನಸಭಾ ಚುನಾವಣೆಯ ಉಸ್ತುವಾರಿಯನ್ನೂ ವಹಿಸಲಾಗಿತ್ತು. ಈ ಸಂದರ್ಭದಲ್ಲೂ ಕೂಡ ತಾವೇ ಮುಂಚೂಣಿಯಲ್ಲಿ ನಿಂತು, ಚುನಾವಣೆ ಮುಗಿಯುವವರೆಗೂ ಮೇಲಿಂದ ಮೇಲೆ ತೆಲಂಗಾಣಕ್ಕೆ ಭೇಟಿ ನೀಡಿ, ಎಲ್ಲ ತಂತ್ರಗಾರಿಕೆಗಳನ್ನೂ ರೂಪಿಸುವ ಮೂಲಕ ಹತ್ತು ವರ್ಷಗಳಿಂದ ಅಧಿಕಾರದಲ್ಲಿ ಬೇರುಬಿಟ್ಟಿದ್ದ ಕೆ. ಚಂದ್ರಶೇಖರರಾವ್ ನೇತೃತ್ವದ ಬಿ.ಆರ್.ಎಸ್. ಪಕ್ಷವನ್ನು ಪರಾಭವಗೊಳಿಸಿ, ಪ್ರಚಂಡ ಬಹುಮತ ದೊಂದಿಗೆ ಕಾಂಗ್ರೆಸ್ ಸರ್ಕಾರ ಸ್ಥಾಪನೆ ಮಾಡುವಲ್ಲಿಯೂ ಡಿ.ಕೆ.ಶಿವಕುಮಾರ್ ಅವರು ಮಹತ್ವದ ಪಾತ್ರ ವಹಿಸಿದರು. ಕಾಂಗ್ರೆಸ್ ವರಿಷ್ಠರು ತಮಗೆ ಯಾವುದೇ ಕೆಲಸವನ್ನು ವಹಿಸಿದರೂ ಅದನ್ನು ಯಶಸ್ವಿಯಾಗಿ ಮಾಡಬಲ್ಲೆ ಎಂದು ತೋರಿಸಿಕೊಟ್ಟರು.

■ ಕಾಂಗ್ರೆಸ್ ಪಕ್ಷದ ಅತ್ಯಂತ ನಿಷ್ಠರಾಗಿರುವ ಮತ್ತು ಕಾಂಗ್ರೆಸ್ ವರಿಷ್ಠರಿಗೂ ಡಿ.ಕೆ.ಶಿವಕುಮಾರ್ ಅವರು, ಪಕ್ಷದ ಯಾವುದೇ ಕೆಲಸವನ್ನು ಅತ್ಯಂತ ನಿಷ್ಠೆಯಿಂದಲೇ ಮಾಡುತ್ತಾರೆಂಬ ವಿಶ್ವಾಸ ಇರುವುದರಿಂದಲೇ ಅವರು ಇಂದು ದೊಡ್ಡನಾಯಕರಾಗಿ ಬೆಳೆದಿದ್ದಾರೆ. ಅವರ ಈ ಪಕ್ಷ ನಿಷ್ಠ ಕಾಂಗ್ರೆಸ್ ಪಕ್ಷದಲ್ಲಿ ಬಹು ದೊಡ್ಡ ನಾಯಕರಾಗಿ ಬೆಳೆಯುವ ಎಲ್ಲ ಅವಕಾಶಗಳೂ ತೆರೆದುಕೊಂಡಿವೆ. ■

## ನಿತ್ಯ ಪಂಚಾಂಗ 14.05..2025 ಬುಧವಾರ



ಶ್ರೀ ವಿಶ್ವವಸಿ ನಾಮ ಸಂವತ್ಸರ, ದಕ್ಷಿಣಾಯನ-ಶರದ್ ಋತು, ಚಾಂದ್ರಮಾನ, ವೈಶಾಖ ಬಹುಳ

**ವೃಷಭ ಸಂಕ್ರಮಣ, ನಾರದ ಜಯಂತಿ, ಬಸವಾಪಟ್ಟಣ ಚಂದ್ರಶೇಖರ ಪುಣ್ಯತಿಥಿ, ಬೀಳೂರು ಜ್ಜನೋತ್ಸವ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಉಗ್ರರನ್ನು ನುಗ್ಗಿಸಿ ಭಾರತದಲ್ಲಿ ಶಾಂತಿ ಕದಡುವುದು ಪಾಕ್ ಕೆಲಸ

**ಹುಬ್ಬಳ್ಳಿ, ಮೇ.13–** ಭಾರತವು ಆರ್ಥಿಕವಾಗಿ ಅಭಿವೃದ್ಧಿ ಆಗುತ್ತಿರುವ ಹಿನ್ನೆಲೆಯಲ್ಲೇ ಉಗ್ರರನ್ನು ಬಿಟ್ಟು ಶಾಂತಿ ಕದಡುವ ಕೆಲಸವನ್ನು ಮಾಡಲಾಗುತ್ತಿದೆ. ವಿಶ್ವದ ಆರ್ಥಿಕತೆಯಲ್ಲಿ ಭಾರತ ಅಗ್ರಗಣ್ಯ ಸ್ಥಾನಕ್ಕೆ ಏರಲು ಪ್ರಯತ್ನಿಸುತ್ತಿದೆ. ಆದರೆ, ಮೂರನೇ ಸ್ಥಾನದಲ್ಲಿಯೇ ಉಳಿಯುವ ಕುತಂತ್ರದ ಕೆಲಸ, ಸಮಾಜವನ್ನು ಒಡೆಯುವ ಪ್ರಯತ್ನ ಹಾಗೂ ಉಗ್ರರನ್ನು ದೇಶದೊಳಗ್ಗೆ ನುಗ್ಗಿಸಿ ಶಾಂತಿ ಕದಡುವ ಕೆಲಸ ನಡೆಯುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರು ಹೇಳಿದರು.

ಹುಬ್ಬಳ್ಳಿಯ ಬಿವಿಬಿ ಇಂಜಿನಿಯರಿಂಗ್ ಕಾಲೇಜ್ ಸಭಾಂಗಣದಲ್ಲಿ ಅಖಿಲ ಭಾರತೀಯರ ವಿದ್ಯಾರ್ಥಿ ಪರಿಷತ್– ಕರ್ನಾಟಕ ಉತ್ತರ ಪ್ರಾಂತದವರು ಆಯೋಜಿಸಿದ್ದ "ಸಂವಿಧಾನ 75– ಬದಲಾಯಿಸಿದ್ದು ಯಾರು? ಬಲಪಡಿಸಿದ್ದು ಯಾರು" ಅತ್ಯಮೂಲ್ಯ ಕೃತಿಯನ್ನು ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ವಿವಿಧ ವಿಚಾರಗಳ ಬಗ್ಗೆ ಮಾತನಾಡಿದರು. ಈ ಸಂದರ್ಭದಲ್ಲಿ ಅವರು ಭಯೋತ್ಪಾದನೆ ಹಾಗೂ ಕಾಂಗ್ರೆಸ್ ಪಕ್ಷ ಮತ್ತು ಅದರ ನಾಯಕರ ಬಗ್ಗೆ ಮಾತನಾಡಿದರು.

ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಎರಡೆರಡು ಬಾರಿ ಸೋಲಿಸಿದರ ಬಗ್ಗೆ ಕಾಂಗ್ರೆಸ್ ಪಕ್ಷ ಇದೀಗ ಹೊಸ ಟ್ರೆಂಡ್ ಆರಂಭಿಸಿದೆ. ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರ ಮಗ ಪ್ರಿಯಾಂಕ ಖರ್ಗೆ ಇತಿಹಾಸವನ್ನು ಒಂದು ಬಾರಿ ಮೆಲಕು ಹಾಕಬೇಕಾದ ಅವಶ್ಯಕತೆಯಿದೆ. ಸಂವಿಧಾನದಲ್ಲಿ ಮೀಸಲಾತಿ ಬಿಜೆಪಿ ತೆಗೆದುಹಾಕುವ ಪ್ರಯತ್ನ ಮಾಡುತ್ತಿದೆ ಎಂದು ಕಾಂಗ್ರೆಸ್ ಪಕ್ಷ ಸುಳ್ಳು ಸುದ್ದಿ ಹಬ್ಬಿಸಿತು. ಆದರೆ ಇದೀಗ ಸುಮ್ಮನಾಗಿದೆ. ಕೇಂದ್ರ ಸರ್ಕಾರ ಮೀಸಲಾತಿಯ ವಿಚಾರವಾಗಿ ಗಂಭೀರವಾಗಿದೆ. ಮೀಸಲಾತಿಗೆ ಧಕ್ಕೆ ತರುವ ಕೆಲಸ ಮಾಡಿಲ್ಲ. ಪಂಡಿತ್ ನೆಹರು ಅವರು ಮೀಸಲಾತಿ ವಿರೋಧಿಸಿ ಎಲ್ಲಾ ರಾಜ್ಯಗಳಿಗೂ ಪತ್ರ ಬರೆದಿದ್ದರು. ಇದನ್ನು ಕಾಂಗ್ರೆಸ್ ಅಲ್ಲಗೆಳೆಯುತ್ತಾ? ಎಂದು ಅವರು ಪ್ರಶ್ನಿಸಿದ ಅವರು, ರಾಜೀವ್ ಗಾಂಧಿಯವರು ಲೋಕಸಭೆಯಲ್ಲಿ ಮಾಡಿದ ಅತಿ ದೊಡ್ಡ ಭಾಷಣ ಅಂದರೆ ಅದು ಮೀಸಲಾತಿ ವಿರುದ್ಧ. ಕಾಂಗ್ರೆಸ್ ಪಕ್ಷ ಏನ್ ಹೇಳುತ್ತೆ ಇದಕ್ಕೆ? ಬಾಬಾ ಸಾಹೇಬರಿಗೆ ಅಂತಿಮ ಸಂಸ್ಕಾರದ ವಿಚಾರ ತೋರಿದ ಕಾಂಗ್ರೆಸ್ ಸರ್ಕಾರದ ನಡೆ ಕರಾಳ ಸತ್ಯವಾಗಿದೆ ಎಂದಿದ್ದಾರೆ.

ಇದೇ ಸಂದರ್ಭದಲ್ಲಿ ಹನ್ನೊಂದು ಪ್ರಮುಖ ಲೇಖಕರಿಂದ ರಚಿಸಲ್ಪಟ್ಟ ಈ ಕೃತಿ ನಮ್ಮ ಶ್ರೇಷ್ಠ ಸಂವಿಧಾನವನ್ನು ಬಲಪಡಿಸಿದ ಮಹತ್ಕಾರ್ಯವನ್ನು ಜನರೆದುರು ತೆರೆದಿಡುವ ಪ್ರಯತ್ನ ಮಾಡಿದೆ. ಕಳೆದ 75 ವರ್ಷಗಳಲ್ಲಿ ಸಂವಿಧಾನದಲ್ಲಿ ಬದಲಾವಣೆ ಮಾಡಿದ ಮತ್ತು ಅದನ್ನು ಬಲಪಡಿಸಲು ಶ್ರಮಿಸಿದವರ ಕುರಿತು ವಿಸ್ತೃತವಾದ ವಿವರ ಈ ಪುಸ್ತಕದಲ್ಲಿದ್ದು, ಈ ಪುಸ್ತಕವನ್ನು ಪ್ರಕಟಿಸಿದ ನಮ್ಮ ಉತ್ತರ ಕರ್ನಾಟಕದ ಅಖಿಲ ಭಾರತ ವಿದ್ಯಾರ್ಥಿ ಪರಿಷತ್‌ಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದೂ ಅವರು ಹೇಳಿದರು.

ಚಿತ್ರದುರ್ಗದ ಡಾ.ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿಗಳು ಈ ಕಾರ್ಯಕ್ರಮದ ಸಾನ್ನಿಧ್ಯವನ್ನು ವಹಿಸಿದ್ದರು. ಸಾಮಾಜಿಕ ಕಾರ್ಯಕರ್ತ ಬೆಂಗಳೂರಿನ ವಾದಿರಾಜ್ ಅವರು ಕೃತಿಯ ಪರಿಚಯ ಮಾಡಿಕೊಟ್ಟರು. ರಾಜ್ಯ ಕಾನೂನು ವಿಶ್ವವಿದ್ಯಾಲಯದ



ಕುಲಪತಿ ಪ್ರೊ.ಡಾ.ಸಿ.ಬಸವರಾಜ, ಂಃಗಿಕ ರಾಷ್ಟ್ರೀಯ ಕಾರ್ಯದರ್ಶಿ ಶ್ರವಣ್ ಬಿ.ರಾಜ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಂಃಗಿಕ ರಾಜ್ಯಾಧ್ಯಕ್ಷ ಡಾ.ಆನಂದ ಹೊಸೂರ, ರಾಜ್ಯ ಕಾರ್ಯದರ್ಶಿ ಸಚಿನ ಕುಳಗೇರಿ ಹಾಗೂ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

# ಧರ್ಮಕ್ಕಿಂತ ದೇಶ ದೊಡ್ಡದು: ಸಂಕಷ್ಟ ಕಾಲದಲ್ಲಿ ಒಟ್ಟಾಗಿರೋಣ– ಮಲ್ಲಿಕಾರ್ಜುನ ಖರ್ಗೆ



## ಸರ್ವಪಕ್ಷ ಸಭೆ ಕರೆಯಲಿ

ಭಾರತ ಮ್ತು ಪಾಕಿಸ್ತಾನ ಕದಮ ವಿರಾಮ ಘೋಷಣೆಯಾಗಲು ಇತರರ ಒತ್ತಡವಿತ್ತೆ ಅಥವಾ ಇತರೇ ಕಾರಣಗಳಿವೆಯೇ ಎನ್ನುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸರ್ವ ಪಕ್ಷದ ಸಭೆ ಕರೆದು ವಿವರಣೆ ನೀಡುವಂತೆ ಮತ್ತು ಕದನ ವಿರಾಮಕ್ಕೆ ಪ್ರಯತ್ನ ಮಾಡಿರುವ ಕುರಿತು ಟೆಲಿಫೋನ್ ಕರೆಗಳ ಮಾಹಿತಿಯೂ ಕೂಡ ನಮ್ಮ ಬಳಿ ಇದೆ. ಈ ನಿಟ್ಟಿನಲ್ಲಿ ಷರ್ವ ಪಕ್ಷ ಸಭೆ ಕರೆದು ಪ್ರಧಾನ ಮಂತ್ರಿಯವರು ತಮ್ಮ ಹೇಳಿಕೆಯನ್ನು ನೀಡಲಿ. ಬಳಿಕ ನಾವು ನಮ್ಮ ಮಾಹಿತಿಯನ್ನು ಆಧರಿಸಿ ಅವರೊಂದಿಗೆ ಚರ್ಚಿಸುತ್ತೇವೆ. ಆಗ ನಿಜವಾದ ಮಾಹಿತಿ ದೇಶದ ಮುಂದೆ ಬರಲಿದೆ.

**ಕಲಬುರಗಿ, ಮೇ. 13–** ಯುದ್ಧ ಬೇಕೋ ಅಥವಾ ಬುದ್ದನ ಶಾಂತಿ ಮಂತ್ರ ಬೇಕೋ ಎಂಬ ಸಂಕಷ್ಟದ ಸಮಯದಲ್ಲಿ ಇಂದು ನಾವಿದ್ದೇವೆ. ಸ್ವಾಭಿಮಾನಕ್ಕೆ, ದೇಶದ ಭದ್ರತೆಗೆ ಧಕ್ಕೆಯಾದಾಗ ಜಾತಿ–ಧರ್ಮ ಮೀರಿ ದೇಶ ಪ್ರೇಮ ಮೆರೆಯಬೇಕು. ಧರ್ಮಕ್ಕಿಂತ ದೇಶ ದೊಡ್ಡದು ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೇಶ ಉಳಿದಲ್ಲಿ ಸಂವಿಧಾನ, ಪ್ರಜಾಪ್ರಭುತ್ವ, ಧರ್ಮ ಉಳಿಯಲು ಮತ್ತು ನಾವೆಲ್ಲ ಉಳಿಯಲು ಸಾಧ್ಯ. ಹೀಗಾಗಿ ಯುದ್ಧೋನ್ಮಾದದ ಈ ಸಂದರ್ಭದಲ್ಲಿ ದೇಶದ ಜನತೆ ಯಾವುದಕ್ಕೂ ದೃತಿಗೆಡಬಾರದು. ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು. ಎಲ್ಲರು ಒಂದಾಗಿ ಸಂಕಷ್ಟದ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಬೇಕು ಎಂದು ಕರೆ ನೀಡಿದರು.

ಇತ್ತೀಚೆಗೆ ಜಮ್ಮು ಕಾಶ್ಮೀರ ಪೆಹಲ್ಗಾಂನಲ್ಲಿ ನಡೆದ ಭಯೋತ್ಪಾದಕರ ದುಷ್ಕೃತ್ಯ ಘಟನೆ ನೆನೆದ ಅವರು, ಪಾಕಿಸ್ತಾನ ಕಾಲ್ಕೆರೆದು ಜಗಳ ಮಾಡುತ್ತಿದೆ. ಹಿಂದೆ 3–4 ಯುದ್ಧಗಳಲ್ಲಿ ಅವರಿಗೆ ನಾವು ಸೋಲಿಸಿದ್ದೇವೆ. ನಾವು ಶಾಂತಿ ಪ್ರಿಯರು. ಯಾವುದೇ ಯುದ್ಧವಾದಲ್ಲಿ ಹಾನಿಕಾರಿಕ ತಪ್ಪಿದಲ್ಲ. ಜನಜೀವನ ತೊಂದರೆ ಅನುಭವಿಸ ಬೇಕಾಗುತ್ತದೆ. ಕೆಲ ಪರಿಸ್ಥಿತಿಯಲ್ಲಿ ಯುದ್ಧ ಅನಿವಾರ್ಯ ಎಂದರೆ ಒಪ್ಪಿಕೊಳ್ಳಲೆ ಬೇಕಾಗುತ್ತದೆ. ಗಡಿಯಲ್ಲಿ ದೇಶ ಕಾಯುತ್ತಿರುವ ಸೈನಿಕರ ನಿರಂತರ ಹೋರಾಟ, ತ್ಯಾಗ ಕೊಂಡಾಡಿದ ಅವರು ಆರ್ಮಿಗೆ ದೇಶದ ಸಂಪೂರ್ಣ ಬೆಂಬಲ ಇದೆ. ಅವರು ತೆಗೆದುಕೊಳ್ಳುವ ನಿರ್ಧಾರಕ್ಕೆ ದೇಶ ತಲೆಬಾಗುತ್ತದೆ. ಡಾ.ಮಲ್ಲಿಕಾರ್ಜುನ ಖರ್ಗೆ ಪುನರುಚ್ಚಿಸಿ ಸೈನಿಕರ ಕೆಚ್ಚೆದೆಯ ಹೋರಾಟ ಸ್ಮರಿಸಿದರು. ಗಡಿಯಲ್ಲಿ ದೇಶದ ರಕ್ಷಣೆ ಮಾಡುತ್ತಾ ಹುತಾತ್ಮರಾದ ಸೈನಿಕರು ಮತ್ತು ಪೆಹಲ್ಗಾಂ ಘಟನೆಯಲ್ಲಿ ಜೀವ ಕಳೆದುಕೊಂಡ 26 ಜನರ ಆತ್ಮಕ್ಕೆ ಶಾಂತಿ ಕೋರಿ ಬುದ್ಧ ವಿಹಾರದಲ್ಲಿ ಎರಡು ನಿಮಿಷ ನಿಮಿಷ ಮೌನಾಚರಣೆ ಮಾಡಲಾಯಿತು ಎಂದರು.

## ಪಹಲ್ಗಾಮ್ ಪ್ರಕರಣ: ಮೃತಪಟ್ಟವರಿಗೆ ನ್ಯಾಯ ಸಿಕ್ಕಿಲ್ಲ– ಜಾರಕಿಹೊಳಿ ಆರೋಪ

**ಬೆಳಗಾವಿ, ಮೇ.13–** ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ದಾಳಿಯಲ್ಲಿ ಮೃತಪಟ್ಟ ಪ್ರವಾಸಿಗರಿಗೆ ನ್ಯಾಯ ಸಿಕ್ಕಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ ನೀಡಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಅವರು ಭಾರತ– ಪಾಕ್ ನಡುವೆ ಕದನ ವಿರಾಮ ಹಿನ್ನೆಲೆ ಈಗ ಯುದ್ಧ ಸ್ಥಗಿತಗೊಂಡಿದೆ.ಮುಂದೆ ಏನು ಮಾಡಬೇಕು ಎಂಬ ಚಿಂತನೆ ಮಾಡಬೇಕು. ಪಹಲ್ಗಾಮ್ ನಲ್ಲಿ ಮೃತಪಟ್ಟ 26 ಜನರಿಗೆ ನ್ಯಾಯ ಸಿಕ್ಕಿಲ್ಲ. ಅದಕ್ಕಾಗಿ ಮತ್ತೆ ಕಾಯ ಬೇಕಾಗುತ್ತದೆ ಎಂದು ಹೇಳಿದ್ದಾರೆ.

ಪೂರ್ಣ ಪ್ರಮಾಣದ ಯುದ್ಧ ಆಗುತ್ತದೆ ಎಂದು ಎಲ್ಲರೂ ನಿರೀಕ್ಷೆ ಮಾಡಿದ್ದರು. ಆದರೆ ಅದು ಆಗಿಲ್ಲ, ಇಷ್ಟಕ್ಕೆ ಸ್ಥಗಿತಗೊಂಡಿದೆ. ಮುಂದೆ ದೇಶವನ್ನು ಯಾವ ರೀತಿ ಕಟ್ಟಬೇಕು ಎನ್ನುವುದು ಮುಂದಿರುವ ಸವಾಲಾಗಿದೆ ಎಂದರು.1971ರಲ್ಲಿ ಇಂದಿರಾ ಗಾಂಧಿ ಮಾದರಿಯಲ್ಲಿ ಪಾಕ್ ಕಟ್ಟಿ ಹಾಕುವ ವಿಚಾರದ ಬಗ್ಗೆ ಬಿಜೆಪಿಯವರೇ ಸಾಮಾಜಿಕ ಜಾಲತಾಣದಲಿ ಹಾಕಿದ್ದಾರೆ. ಬಿಜೆಪಿಯವರು ಸೇರಿ ಎಲ್ಲರೂ ಯುದ್ಧ ನಿಲ್ಲಿಸಬಾರದು ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಆದರೆ, ಈಗ ಯುದ್ಧ ನಿಂತಿದೆ. ಹಾಗಾಗಿ, ಏನೂ ಮಾಡಲು ಆಗುವುದಿಲ್ಲ ಎಂದು ಜಾರಕಿಹೊಳಿ ಹೇಳಿದರು. ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಧ್ಯಸ್ಥಿಕೆ ವಹಿಸಿದ್ದಕ್ಕೆ ಆಕ್ಷೇಪ ವ್ಯಕ್ತವಾಗಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು ಅದು ಅಂತಾರಾಷ್ಟ್ರೀಯ ವಿಚಾರ. ಟ್ರಂಪ್ ಯಾಕೆ ಮಧ್ಯಸ್ಥಿಕೆ ವಹಿಸಿದರು ಮತ್ತು ಅವರಿಗೆ ಯಾರು ಮನವಿ ಮಾಡಿಕೊಂಡರು ಎಂಬ ವಿಚಾರ ಒಂದು ದಿನ ಹೊರಗೆ ಬರುತ್ತದೆ. ಅಲ್ಲಿಯವರೆಗೆ ನಾವೆಲ್ಲಾ ಕಾಯಬೇಕು ಎಂದರು.

# ಪಾಕ್ ವಿರುದ್ಧ ಯುದ್ಧ: ಇಂದಿರಾ ಗಾಂಧಿ ಹೋರಾಟ ಸ್ಮರಣೀಯ

**ಬೆಂಗಳೂರು, ಮೇ. 13:** ಪಾಕಿಸ್ತಾನವನ್ನು ಎರಡು ಭಾಗ ಮಾಡಿ ಸದೆಬಡೆದ ಅಂದಿನ ಪ್ರಧಾನ ಮಂತ್ರಿ ಇಂದಿರಾ ಗಾಂಧಿ ಅವರ ಹೋರಾಟವನ್ನು ಇಂದು ದೇಶದ ಪ್ರತಿಯೊಬ್ಬ ನಾಗರಿಕರು ಸ್ಮರಿಸುತ್ತಿದ್ದಾರೆ , ಅವರ ದಿಟ್ಟತನದ ಕ್ರಮಗಳು ಇಂದಿಗೂ ಅವಿಸ್ಮರಣೀಯ ಹಾಗೂ ಭಾರತದ ಸೈನಿಕರಿಗೆ .ಇಂದಿರಾಗಾಂಧಿ ಜಿ ರವರು ನೀಡಿದ ನೈತಿಕ ಬೆಂಬಲದಿಂದ ಇಡೀ ಪಾಕಿಸ್ತಾನವನ್ನು ನಾಶ ಮಾಡಿದ್ದನ್ನು ಇಂದು ದೇಶದ ಜನತೆ ಹೆಮ್ಮೆಯಿಂದ ಹೇಳಿಕೊಳ್ಳುತ್ತಿದ್ದಾರೆ, ಪ್ರಧಾನಿ ನರೇಂದ್ರ ಮೋದಿ ಅವರೇ ಕೊನೆಗೂ ನೀವು ದೇಶವನ್ನು ಉದ್ದೇಶಿಸಿ ಮಾತನಾಡಿದ ಭಾಷಣದ ಸಾರಾಂಶಗಳನ್ನು ಗಮನಿಸಿದರೆ ನಿಮ್ಮ ದುರ್ಬಲ ಮನಸ್ಥಿತಿ ಬಹಿರಂಗವಾಗಿದೆ ಆದ್ದರಿಂದ ತಾವುಗಳು ಗೌರವಯುತವಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಬಿಜೆಪಿ ಅಧ್ಯಕ್ಷರಾಗುವುದು ಸೂಕ್ತ. ಸೋಮವಾರ ರಾತ್ರಿ ದೂರದರ್ಶನದಲ್ಲಿ ನಿಮ್ಮ ಭಾಷಣವನ್ನು ಗಮನಿಸಿದರೆ ದೇಶಕ್ಕಾಗಿ ಹೋರಾಡಿ ಮಡಿದ ವೀರ ಯೋಧರಿಗೆ ಅಪಮಾನಿಸಿದಂತಾಗಿದೆ. ನಮ್ಮ ಬಲಿಷ್ಠ ಸೇನೆ ಹಾಗೂ ರಾಷ್ಟ್ರದ ಒಗ್ಗಟ್ಟನ್ನು ಮೂರನೇ ರಾಷ್ಟ್ರದ ಮಧ್ಯಸ್ಥಿಕೆಯಲ್ಲಿ ತಾವು ಕಾರ್ಯನಿರ್ವಹಿಸುತ್ತಿರುವುದು ತಮ್ಮ ನಿಷ್ಕ್ರಿಯತೆಯನ್ನು ಎತ್ತಿ ತೋರುತ್ತದೆ. ಭಾರತದ ಸೈನಿಕರು ಪಾಕಿಸ್ತಾನದಲ್ಲಿ ಅಡಗಿರುವ ಉಗ್ರರ ನೆಲೆಗಳನ್ನು ಧ್ವಂಸ ಮಾಡಿದ್ದಾರೆ ಪಾಕಿಸ್ತಾನದ ಬೆಂಬಲಿತ ಉಗ್ರರು ಭಾರತದ ಮುಗ್ಧ ನಾಗರೀಕರನ್ನ ಕೊಂದ ಸಂದರ್ಭದಲ್ಲಿ ತಾವು ವಿದೇಶದಲ್ಲಿ ಇದ್ದು ನಂತರ ದೇಶಕ್ಕೆ ಆಗಮಿಸಿ ಉಗ್ರರಿಂದ ಬಲಿಯಾದ ಕುಟುಂಬಗಳಿಗೆ ಸಾಂತ್ವಾನ ಹೇಳುವುದಾಗಲಿ ಅಥವಾ ಮೃತಪಟ್ಟ ಕುಟುಂಬಳಿಗೆ ಪರಿಹಾರ ಘೋಷಿಸುವುದಾಗಲಿ ಏನನ್ನು ಮಾಡದೆ ಕೇವಲ ಸಭೆಗಳನ್ನು ನಡೆಸಿ ಹೈ ವೋಲ್ಟೇಜ್ ಮೀಟಿಂಗ್ ಎಂದು ಪ್ರಚಾರ ಪಡೆದಿದ್ದು ಮಾತ್ರ ನಿಮ್ಮ ಸಾಧನೆಯಾಗಿದೆ. ಅಮೇರಿಕಾದ ಅಧ್ಯಕ್ಷರ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಪರವಾಗಿ ತಾವು ಪ್ರಚಾರ ಮಾಡಿದ್ದಕ್ಕೆ ಇಂದು ಟ್ರಂಪ್ ಭಾರತವನ್ನು ತನ್ನ ಹಿಡಿತದಲ್ಲಿ ಇಟ್ಟುಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ.

ಕದನ ವಿರಾಮಕ್ಕೆ ಭಾರತ ಪಾಕಿಸ್ತಾನಕ್ಕಿಂತ ಮೊದಲೇ ತನ್ನ ಎಕ್ಸ್ ಖಾತೆಯಲ್ಲಿ ಸರ್ವಾಧಿಕಾರಿಯಂತೆ ಆದೇಶ ಮಾಡಿದ್ದನ್ನು ಗಮನಿಸಿದರೆ ನೀವು ಡೊನಾಲ್ಡ್ ಟ್ರಂಪ್ ನ ಮಾತಿನ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಎತ್ತಿ ತೋರುತ್ತದೆ. ಟ್ರಂಪ್ ನೀಡುತ್ತಿರುವ ಹೇಳಿಕೆ ನೋಡಿದರೆ ನೀವು ದುರ್ಬಲ ಪ್ರಧಾನ ಮಂತ್ರಿ ಎಂಬುದು ಸಾಕ್ಷಿ ಸಮೇತ ಸಾಬೀತಾಗಿದೆ,

ನೀವು ಅದಾನಿ ಕಂಪನಿಗೆ ಹಾಗೂ ಅದಾನಿ ಬಗ್ಗೆ ಇರುವ ಕಾಳಜಿ ದೇಶದ ಸೈನಿಕರ ಹೋರಾಟದ ಬಗ್ಗೆ ನಿಮಗೆ ಇಲ್ಲಾ. ಮುಗ್ಧ ಭಾರತೀಯರು ಕ್ರೂರ ಉಗ್ರರ ದಾಳಿಗೆ ಬಲಿಯಾದರೂ ಆ ಸ್ಥಳಕ್ಕೆ ಹೋಗಿ ಪರಿಶೀಲನೆ ಮಾಡುವ ಧೈರ್ಯವು ಸಹ ನಿಮಗೆ ಇಲ್ಲ, ಅಮೇರಿಕಾದ ಸ್ಟಾಕ್ ಮಾರ್ಕೆಟ್



ಹಗರಣದಲ್ಲಿ ಸಿಲುಕಿರುವ ಅದಾನಿಯನ್ನ ರಕ್ಷಿಸುದಕ್ಕಾಗಿ ಟ್ರಂಪ್ ಅವರ ಸೂಚನೆಯನ್ನು ತಾವು ಪಾಲಿಸುತ್ತಿದ್ದೀರಾ

ಪ್ರಧಾನಿ ಮೋದಿ ಅವರೇ ನೀವು ದೇಶದ ರಕ್ಷಣೆಗಿಂತ ತನ್ನ ಮಿತ್ರನ ರಕ್ಷಣೆಗೆ ಮುಂದಾಗಿರುವುದು ಈಗ ಜಗಜ್ಜಾಹೀರಾಗಿದೆ. ತಮ್ಮ ನಿರಾಶಕ್ತಿಯ ಭಾಷಣವನ್ನು ಗಮನಿಸಿದರೆ ದೇಶದ ಸೈನಿಕರ ಆತ್ಮಸ್ಥೈರ್ಯವು ಕುಗ್ಗುತ್ತದೆ ನಮ್ಮ ಸೈನಿಕರ ದಿಟ್ಟತನದ ಹೋರಾಟವನ್ನು ಇಂದು ದೇಶದ ಪ್ರಜೆಗಳು ಅತ್ಯಂತ ಅಭಿಮಾನದಿಂದ ಸ್ವಾಗತಿಸಿ ಅವರ ಬೆಂಬಲಕ್ಕೆ ನಿಂತಿದ್ದಾರೆ. ನಿಮ್ಮ ದುರಾಡಳಿತದಲ್ಲಿ ದೇಶದ ಜನರು ನೆಮ್ಮದಿಯಿಂದ ಇರಲು ಸಾಧ್ಯವಿಲ್ಲ ಎಂಬುದನ್ನ ನಿಮ್ಮ ಹನ್ನೊಂದು ವರ್ಷದ ಬೇಜವಾಬ್ದಾರಿ ಆಡಳಿತದಿಂದ ಸಾಬೀತಾಗಿದೆ ಕೂಡಲೇ ದೇಶದ ಜನರ ಕ್ಷಮೆಯನ್ನು ಕೋರಿ ಪ್ರಧಾನಮಂತ್ರಿ ಸ್ಥಾನದಿಂದ ಇಳಿಯಬೇಕೆಂದು ಮನೋಹರ್ ಆಗ್ರಹಿಸಿದ್ದಾರೆ.

# ರಾಜ್ಯದ ಯೋಜನೆಗಳಿಗೆ ಕೇಂದ್ರದ ಅನುದಾನ ಬಿಡುಗಡೆ: ಮಹತ್ವದ ಸಭೆ

**ಬೆಂಗಳೂರು, ಮೇ. 13:** 2024–25 ಹಾಗೂ 2025–2026 ನೇ ಸಾಲಿಗೆ ರಾಜ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರದ ಅನುದಾನ ಬಿಡುಗಡೆ ಮಾಹಿತಿ ಕುರಿತಂತೆ ಸರ್ಕಾರದ ನವ ದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಹಾಗೂ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ .ಆರ್ ಪಾಟೀಲ್ ನೇತೃತ್ವದಲ್ಲಿ ವಿಧಾನಸೌಧದಲ್ಲಿ ಮಹತ್ವದ ಸಭೆ ನಡೆಯಿತು.

ಸಂಪೂರ್ಣ ಕೇಂದ್ರ ಪ್ರಾಯೋಜಿತ ಯೋಜನೆಗಳಿಗೆ ಕೇಂದ್ರದ ಅನುದಾನ ಹಂಚಿಕೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಭಾಗಿತ್ವದ ಯೋಜನೆಗಳಿಗೆ ಕೇಂದ್ರದ ಪಾಲಿನ ಅನುದಾನ ಹಂಚಿಕೆ ಬಗ್ಗೆ ಸಭೆಯಲ್ಲಿ ಮಾಹಿತಿ ಪಡೆಯಲಾಯಿತು. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ ಮಾತನಾಡಿ, ಕೇಂದ್ರ ಸರ್ಕಾರ ರೈಲ್ವೆ ಯೋಜನೆಗಳಿಗೆ ತನ್ನ ಬಜೆಟ್ ನಲ್ಲಿ ಪ್ರಸಕ್ತ ಸಾಲಿನಲ್ಲಿ 2.5 ಲಕ್ಷ ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದ್ದು ರಾಜ್ಯದ ರೈಲ್ವೆ ಯೋಜನೆಗಳಿಗೆ ಯಾವುದೇ ರೀತಿ ಹಣಕಾಸಿನ ಕೊರತೆ ಇಲ್ಲ. ಅದೇ ರೀತಿ ಕೇಂದ್ರ ಭೂಸಾರಿಗೆ ಹಾಗೂ ರಸ್ತೆ ಅಭಿವೃದ್ಧಿ ಇಲಾಖೆ ಸಹ ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಹಾಗೂ ಮೇಲ್ದರ್ಜೆಗೆ ಅಗತ್ಯದಷ್ಟು ಹಣವನ್ನು ಬಿಡುಗಡೆ ಮಾಡುತ್ತಿದೆ. ಈ ಎರಡು ಇಲಾಖೆಗಳಲ್ಲಿ ಯೋಜನೆಗಳನ್ನ ಕೈಗೆತ್ತಿಕೊಳ್ಳಲು ಹಣಕಾಸಿನ ಕೊರತೆ ಇಲ್ಲ ಎಂದು ಹೇಳಿದರು. ಆದರೆ ಜಲಸಂಪನ್ಮೂಲ ಹಾಗೂ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರದಿಂದ ಘೋಷಿತ ಅನುದಾನ ಬಿಡುಗಡೆ ಆಗುತ್ತಿಲ್ಲ. ಹೀಗಾಗಿ ರಾಜ್ಯದ ನೀರಾವರಿ ಯೋಜನೆಗಳು ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿವೆ. ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಕೇಂದ್ರ ಸರ್ಕಾರ ಘೋಷಣೆ ಮಾಡಿದರು ಸಹ ಯೋಜನೆಗೆ ಅಗತ್ಯವಿರುವ 5600 ಕೋಟಿಯಲ್ಲಿ ಒಂದು ರೂಪಾಯಿಯನ್ನು ಇದುವರೆಗೆ ಬಿಡುಗಡೆ ಮಾಡಿಲ್ಲ ಎಂದರು.

ಕೃಷ್ಣಾ ಹಾಗೂ ತುಂಗಭದ್ರಾ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ನೆರೆಯ ತೆಲಂಗಾಣ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸುತ್ತಿದ್ದು ಆಂಧ್ರಪ್ರದೇಶ ನಕಾರಾತ್ಮಕ ಧೋರಣೆ ತಾಳಿದೆ. ಹೀಗಾಗಿ ನೀರಾವರಿ ಯೋಜನೆ ವಿಳಂಬವಾಗಿದೆ. ಕೇಂದ್ರ ಜಲಸಂಪನ್ಮೂಲ ಸಚಿವರು ಸಭೆ ಕರೆದರೂ ಸಹ ಆಂಧ್ರ ಪ್ರದೇಶದಿಂದ ಯಾರು ಭಾಗವಹಿಸಿಲ್ಲ. ಆಂಧ್ರ ಮತ್ತು ತಮಿಳುನಾಡು ಕರ್ನಾಟಕದ ಯೋಜನೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಿಲ್ಲ. ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ ಆಂಧ್ರಪ್ರದೇಶ ಹಾಗೂ ತಮಿಳುನಾಡು ಸರ್ಕಾರಗಳು ರಾಜ್ಯದ ಯೋಜನೆಗಳಿಗೆ ಒಪ್ಪಿಗೆ ಸೂಚಿಸುವಂತೆ ಮಾಡಬೇಕು ಎಂದರು .

ಇದೇ ವೇಳೆ ಮಾತನಾಡಿದ ಸಣ್ಣ ನೀರಾವರಿ ಇಲಾಖೆ ಕಾರ್ಯದರ್ಶಿಗಳು 2024 –25 ನೇ ಸಾಲಿಗೆ ಸಂಬಂಧಿಸಿದಂತೆ ಪಿಎಂಕೆಎಸ್ ವೈ ಯೋಜನೆಯಡಿ 1036 ಯೋಜನೆಗಳಿಗೆ 2434ಕೋಟಿ ಹಣವನ್ನ ಕೇಂದ್ರ ಸರ್ಕಾರ ನೀಡಬೇಕು. ಅಷ್ಟೇ ಅಲ್ಲ ರಾಜ್ಯ ಸರ್ಕಾರದ ಪ್ರಸ್ತಾವಿತ ಹೊಸ 172 ಹೊಸ ಯೋಜನೆಗಳಿಗೆ 475 ಕೋಟಿ ಹಣ ಸಹ ಬರಬೇಕಾಗಿದೆ ಕೇಂದ್ರ ಸರ್ಕಾರ ಸಕಾಲದಲ್ಲಿ ಹಣ ಬಿಡುಗಡೆ ಮಾಡದ ಕಾರಣ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಭಾಗಿತ್ವದ ಯೋಜನೆಗಳಿಗೆ ಹಿನ್ನಡೆಯಾಗಿದೆ ಎಂದು ಹೇಳಿದರು.

ಲೋಕೋಪಯೋಗಿ ಇಲಾಖೆ ಹೆಚ್ಚುವರಿ ಕಾರ್ಯದರ್ಶಿ ಶಾಂತಕುಮಾರ್ ಮಾತನಾಡಿ, ರಾಜ್ಯದಲ್ಲಿ 28 ರಾಷ್ಟ್ರಿಯ ಹೆದ್ದಾರಿಗಳ ಅಭಿವೃದ್ಧಿ ಪ್ರಗತಿಯಲ್ಲಿದೆ. 13 ಕೈಗಾರಿಕಾ ವಲಯಗಳಿಗೆ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಗಳಿದ್ದು ಅವುಗಳನ್ನು ಸಹ ಮೇಲ್ದರ್ಜೆಗೆ ಏರಿಸಲಾಗುತ್ತಿದೆ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಯಾವುದೇ ಅನುದಾನದ ಕೊರತೆ ಇಲ್ಲ ಕೇಂದ್ರ ಸರ್ಕಾರ ನಿಗದಿತ ಸಮಯದಲ್ಲಿ ಹಣ ಬಿಡುಗಡೆ ಮಾಡುತ್ತಿದೆ. ಕೆಲವು ಭಾಗಗಳಲ್ಲಿ ಭೂಸ್ವಾಧೀನ ಸಮಸ್ಯೆಯಾಗಿದ್ದು ಕೆಲವು ಕಡೆ ರಸ್ತೆ ಅಭಿವೃದ್ಧಿ ಯೋಜನೆ ನಿಧನವಾಗುತ್ತಿದೆ ಎಂದರು.

ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ, ದೀಪ ಚೋಳನ್





ಮಾತನಾಡಿ, ಕೇಂದ್ರ ಸರ್ಕಾರದ ಅಮೃತ್ ಯೋಜನೆ ಹಾಗೂ ಸ್ವಚ್ಛ ಭಾರತ್ ಮಿಷನ್ ಒಂದು ಹಾಗೂ ಎರಡು ಯೋಜನೆಗಳ ಅನುಷ್ಠಾನಕ್ಕೆ ರಾಜ್ಯ ಸರ್ಕಾರಕ್ಕೆ 5000 ಕೋಟಿ ರೂಪಾಯಿಗಳ ಅನುದಾನವನ್ನು ಐದು ವರ್ಷಗಳ ಅವಧಿಗೆ ಕೇಂದ್ರ ಸರ್ಕಾರ ನೀಡಿದ್ದು ಕಾಮಗಾರಿಗಳು ಪ್ರಗತಿಯಲ್ಲಿವೆ. ಕೆಲವು ನಗರ ಪ್ರದೇಶಗಳಲ್ಲಿ ಸ್ಥಳೀಯ ಸಮಸ್ಯೆಗಳಿಂದ ಕೆಲವು ಕಾಮಗಾರಿಗಳು ವಿಳಂಬವಾಗುತ್ತಿದೆ ರಾಜ್ಯ ಸರ್ಕಾರ ಕಳುಹಿಸಿರುವ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಅನುದಾನ ನೀಡಿದೆ. ಇದೇ ವೇಳೆ ಮಾತನಾಡಿದ ದೆಹಲಿ ವಿಶೇಷ ಪ್ರತಿನಿಧಿ ಜಯಚಂದ್ರ ಅವರು ರಾಜ್ಯದಲ್ಲಿ ನಿರ್ಮಾಣ ಆಗುತ್ತಿರುವ 5 ಆಹಾರ ಪಾರ್ಕ್ ಗಳಿಗೆ ಅಗತ್ಯ ಹಣಕಾಸಿನ ನೆರವನ್ನು ನೀಡಿ ಯೋಜನೆಗಳನ್ನು ಪೂರ್ಣಗೊಳಿಸಬೇಕು . ಕಲ್ಬುರ್ಗಿ, ಹಿರಿಯೂರು, ಜೇವರ್ಗಿ, ಮಾಲೂರು ಹಾಗೂ ಕೆ.ಆರ್.ಪೇಟೆ ಯಲ್ಲಿ ನಿರ್ಮಾಣವಾಗುತ್ತಿರುವ ಫುಡ್ ಪಾರ್ಕ್ ಗಳ ಕಾಮಗಾರಿಗಳು ದಶಕದಿಂದ ನೆನೆಗುದಿಗೆ ಬಿದ್ದಿದ್ದು, ಆದಷ್ಟು ಬೇಗ ಆ ಕಾಮಗಾರಿಗಳನ್ನು ಮುಗಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು. ಜಲಜೀವನ ಮಿಷನ್ ಯೋಜನೆಗೆ ಕೇಂದ್ರ ಸರ್ಕಾರದಲ್ಲಿ ಬಾಕಿ ಇರುವ ಹಣ ತರಲು ಕೇಂದ್ರ ಸಚಿವರ ಮೇಲೆ ಒತ್ತಡ ತರುವುದಾಗಿ ತಿಳಿಸಿದರು

ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ ಆರ್ ಪಾಟೀಲ್ ಮಾತನಾಡಿ, ರಾಜ್ಯದ ಗಡಿ ಪ್ರದೇಶಗಳಿಗೆ ಹೊಂದಿಕೊಂಡಿರುವ ಎಲ್ಲ ರಾಷ್ಟ್ರೀಯ ಹೆದ್ದಾರಿಗಳನ್ನು ನಿಗದಿತ ಕಾಲಮಿತಿಯಲ್ಲಿ ಅಭಿವೃದ್ಧಿಪಡಿಸಬೇಕು. ಕೇಂದ್ರದ ಯಾವುದೇ ಯೋಜನೆಗಳಿಗೆ ಅನುದಾನ ನೀಡುವುದು ಬಾಕಿ ಇದ್ದರೆ ತಮ್ಮ ಗಮನಕ್ಕೆ ತಂದರೆ ತಾವು ಹಾಗೂ ದೆಹಲಿ ವಿಶೇಷ ಪ್ರತಿನಿಧಿ ಜಯಚಂದ್ರ ಅವರು ಕೇಂದ್ರ ಸಚಿವರನ್ನು ಭೇಟಿ ಮಾಡಿ ತ್ವರಿತವಾಗಿ ಅನುದಾನ ಬಿಡುಗಡೆ ಮಾಡಿಕೊಡಿಸುವುದಾಗಿ ಅಧಿಕಾರಿಗಳಿಗೆ ಸೂಚಿಸಿದರು.

# ನಾಳೆ ಭಾರತದ ಸೇನೆ ಜೊತೆ ನಾವೆಲ್ಲರೂ ಇದ್ದೇವೆ ಸಂದೇಶ ನೀಡುವ ತಿರಂಗಾ ಯಾತ್ರೆ: ಆರ್.ಅಶೋಕ್

**ಬೆಂಗಳೂರು, ಮೇ.13–** ರಾಷ್ಟ್ರ ರಕ್ಷಣೆಗಾಗಿ ನಾಗರಿಕರು ಅಡಿಯಲ್ಲಿ ಆಪರೇಷನ್ ಸಿಂದೂರದ ಜೊತೆ ನಾವಿದ್ದೇವೆ; ಭಾರತದ ಸೇನೆ ಜೊತೆ ನಾವೆಲ್ಲರೂ ಇದ್ದೇವೆ ಎಂದು ಸಂದೇಶ ನೀಡುವ ಸಲುವಾಗಿ ಗುರುವಾರ (ಮೇ15) ಬೆಳಗ್ಗೆ 11.00 ಗಂಟೆಗೆ ಬೆಂಗಳೂರಿನಲ್ಲಿ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾ ಗುವುದು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ತಿಳಿಸಿದರು. ಮಾಧ್ಯಮ ಗೋಷ್ಠಿಯಲ್ಲಿ, ನಗರದ ಮಲ್ಲೇಶ್ವರ ಮಂತ್ರಿಮಾಲ್‌ನ ಸಂಪಿಗೆ ರಸ್ತೆಯ ಸಿರೂರು ಆಟದ ಮೈದಾನದಿಂದ ಪ್ರಾರಂಭವಾಗಿ 18ನೇ ಕ್ರಾಸ್‌ವರೆಗೂ ರಾಷ್ಟ್ರಧ್ವಜ ದೊಂದಿಗೆ ತಿರಂಗಾ ಯಾತ್ರೆ ಜರುಗಲಿದೆ. ಪಕ್ಷಾತೀತವಾಗಿ ನಡೆಯುವ ಈ ಯಾತ್ರೆಯಲ್ಲಿ ಪಕ್ಷದ ಯಾವುದೇ ಬ್ಯಾನರ್‌ಗಳು ಇರುವುದಿಲ್ಲ. ಈ ಯಾತ್ರೆಯಲ್ಲಿ ವೈದ್ಯರು, ಇಂಜಿನಿಯರ್‌ಗಳು, ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಎಲ್ಲರೂ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮೇ 16 ಮತ್ತು 17 ರಂದು ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ಮೇ 18 ರಿಂದ 23 ರವರೆಗೆ ತಾಲ್ಲೂಕು ಕೇಂದ್ರಗಳಲ್ಲಿ ತಿರಂಗಾ ಯಾತ್ರೆಯನ್ನು ಮಾಡಲಾಗುತ್ತದೆ. ಪ್ರತಿಹಳ್ಳಿಗಳಲ್ಲಿ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಪಕ್ಷದ ಬ್ಯಾನರ್ ಇಲ್ಲದೆ ಯಾತ್ರೆಯನ್ನು ಕೈಗೊಳ್ಳಲು ನಮ್ಮ ಕಾರ್ಯಕರ್ತರಿಗೆ ಸೂಚನೆ ಯನ್ನು ಕೊಡಲಾಗಿದೆ ಎಂದು ವಿವರಿಸಿದರು.

ಭಾರತದ ತಾಯಂದಿರ ಸಿಂದೂರ ಅಳಿಸಿದರೆ ಏನು ಆಗುತ್ತದೆ ಎಂಬುದನ್ನು ನಮ್ಮ ಸೇನೆಯು ಇಡೀ ವಿಶ್ವಕ್ಕೆ ತೋರಿಸಿಕೊಟ್ಟಿದೆ ಮತ್ತು ಪಾಕಿಸ್ತಾನಕ್ಕೆ ಬುದ್ಧಿ ಕಲಿಸಿದ್ದಾರೆ. ಸುಮಾರು 100 ಕ್ಕೂ ಹೆಚ್ಚು ಭಯೋತ್ಪಾದಕರು ಹತರಾಗಿದ್ದಾರೆ. ಪಾಕಿಸ್ತಾನದ ಉಗ್ರರ ಸ್ಥಳಗಳನ್ನು ಈಗಾಗಲೇ ಧ್ವಂಸಗೊಳಿಸಲಾಗಿದೆ. ಪಾಕಿಸ್ತಾನವು ಕೊನೆಗೆ ಈ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಅಂಗಲಾಚುವ ಸ್ಥಿತಿಗೆ ನಮ್ಮ ಸೈನಿಕರು ತಂದಿದ್ದಾರೆ. ಭಾರತ ಎಂದೂ ಉಗ್ರವಾದವನ್ನು ಸಹಿಸಲ್ಲ ಅನ್ನುವ ಸಂದೇಶವನ್ನು ಇಡೀ ಪ್ರಪಂಚಕ್ಕೆ ನೀಡಿರುತ್ತಾರೆ ಎಂದು ವಿಶ್ಲೇಷಿಸಿದರು.

ಸಿಂಧೂ ನದಿ ನೀರಿನ ವಿಚಾರವಾಗಿ ಈ ಹಿಂದೆ ಶೇ 90% ನೀರು ಪಾಕಿಸ್ತಾನಕ್ಕೆ ಶೇ 10% ಮಾತ್ರ ಭಾರತಕ್ಕೆ ಎಂಬ ಒಪ್ಪಂದವನ್ನು ಪ್ರಧಾನ ಮೋದಿ ರದ್ದುಪಡಿಸಿರುವುದು ಒಂದು ಸಾಧನೆಯಾಗಿದೆ. ನ್ಯೂಕ್ಲಿಯರ್ ಬಾಂಬ್ ಬೆದರಿಕೆಗೆ ನಾವು ಹೆದರುವುದಿಲ್ಲ ಎಂಬ ಸಂದೇಶವನ್ನು ನಮ್ಮ ಪ್ರಧಾನಿಯವರು ಪಾಕಿಸ್ತಾನಕ್ಕೆ ನೀಡಿರುತ್ತಾರೆ ನಮ್ಮ ಸೈನಿಕರು ದಾಳಿ ಮಾಡಿರುವುದಕ್ಕೆ ಸಾಕ್ಷಿ ಇದೆಯೇ ಎಂದು ಪ್ರಶ್ನಿಸುತ್ತಿದ್ದರು. ಅಲ್ಲಿನ ಸೈನಿಕರು ಮತ್ತು ಭಯೋ ತ್ಪಾದಕರು ಎಷ್ಟು ಜನ ಹತರಾಗಿದ್ದಾರೆ ಎಂದು ಪಾಕಿಸ್ತಾನವು ಈಗಾಗಲೇ ಒಪ್ಪಿಕೊಂಡಿದೆ. ನಮ್ಮ ಸೇನಾ ಅಧಿಕಾರಿಗಳೇ ಪತ್ರಿಕಾಗೋಷ್ಠಿ ನೀಡಿ, ಪಾಕಿಸ್ತಾನದ ಮೇಲೆ ದಾಳಿ ಮಾಡಿರುವುದಕ್ಕೆ ಸಾಕ್ಷಿ ಸಮೇತ ಉತ್ತರ ನೀಡಿದ್ದಾರೆ. ಆದರೂ ಪಾಕಿಸ್ತಾನ ಜಿಂದಾಬಾದ್ ಎಂಬುವವರಿಗೆ ನಂಬಲು ಆಗುತಿಲ್ಲ ಮತ್ತು ಭಾರತದ ಕಾರ್ಯಾಚರಣೆಯನ್ನು ಸಹಿಸಲು ಆಗುತ್ತಿಲ್ಲ. ಇಂದು ನಮ್ಮ ಸೈನಿಕರು ಕಾಶ್ಮೀರ ಮತ್ತು

ಪಾಕಿಸ್ತಾನ ಆಕ್ರಮಿತ ಕಾಶ್ಮೀರವು ನಮ್ಮದು ಎಂದು ತೋರಿಸಿಕೊಟ್ಟಿದ್ದಾರೆ. ಅಲ್ಲದೆ ನಮ್ಮ ಪ್ರಧಾನ ಮೋದಿ ಜೀ ರವರು ಸಹ ಹೇಳಿದ್ದಾರೆ. ಪಾಕಿಸ್ತಾನ ಅಕ್ರಮಿತ ಕಾಶ್ಮೀರವನ್ನು ನಾವು ವಾಪಸ್ ಪಡೆಯುತ್ತೇವೆ ಹಾಗೂ ಸಿಂಧೂ ನದಿಯ ಯಾವುದೇ ಒಪ್ಪಂದವನ್ನು ಮಾಡುವುದಿಲ್ಲ ಎಂದು ಹೇಳಿದ್ದಾರೆ ಎಂದರು. ಪಾಕಿಸ್ತಾನದ ಭಯೋತ್ಪಾದಕರಿಗೆ ಮತ್ತು ಪಾಕಿಸ್ತಾನಕ್ಕೆ ಬುದ್ಧಿ ಕಲಿಸಿರುವ ನಮ್ಮ ಸೈನಿಕರಿಗೆ ಗೌರವ ನೀಡುವ ಸಲುವಾಗಿ ಈ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.



**ಕಾಂಗ್ರೆಸ್ಸಿನವರು ಒಡಕು ಮಾತು ನಿಲ್ಲಿಸಲು ಆಗ್ರಹ:** ದೇಶವು ಒಗ್ಗಟ್ಟಿನಲ್ಲಿರುವ ಸಂದರ್ಭದಲ್ಲಿ ಕಾಂಗ್ರೆಸ್ಸಿನವರು ಮೊದಲು ಒಡಕು ಮಾತುಗಳನ್ನು ನಿಲ್ಲಿಸಬೇಕು. ಆಪರೇಷನ್ ಸಿಂದೂರ ಕಾರ್ಯಾಚರಣೆಗೆ ಮೊದಲು ಕಾಂಗ್ರೆಸ್ ನವರು ಮೊದಲು ಯುದ್ಧ ಬೇಡ, ಅವಶ್ಯಕತೆ ಇದೆಯೇ ಎಂದು ಹೇಳಿದರು; ಆಪರೇಷನ್ ಸಿಂದೂರ ಪ್ರಾರಂಭವಾದ ಮೇಲೆ ಶಾಂತಿ ಸ್ಥಾಪನೆ ಮಾಡಬೇಕೆಂದು ಹೇಳಿಕೆ ನೀಡಿದರು:

ಆಪರೇಷನ್ ಸಿಂದೂರ ಸಂಬಂಧ ಕದನ ವಿರಾಮವಾದ ಮೇಲೆ ಏತಕ್ಕೆ ಯುದ್ಧ ನಿಲ್ಲಿಸಿದ್ದಾರೆ ಎಂದು ಪ್ರಶ್ನಿಸಿದ್ದಾರೆ ಎಂದು ಆರ್. ಅಶೋಕ್ ಅವರು ಟೀಕಿಸಿದರು. ಕಾಂಗ್ರೆಸ್ ಹೇಳಿಕೆಯಲ್ಲಿನ ನಿಲುವು ಮತ್ತು ಉದ್ದೇಶ ಏನು ಎಂಬುದು ಮೊದಲು ತಿಳಿಸಬೇಕು. ಪಾಕಿಸ್ತಾನವು ಭಯೋತ್ಪಾದನೆ ಮೂಲಕ ಭಾರತದ ಮೇಲೆ ದಾಳಿ ಮಾಡಿರುವುದಕ್ಕೆ ತಕ್ಕ ಉತ್ತರ ನೀಡುವ ಸಂದರ್ಭದಲ್ಲಿ ಸಂಸತ್ತಿನಲ್ಲಿ ಅಧಿವೇಶನ ಕರೆಯಬೇಕು, ಚರ್ಚೆಯಾಗಬೇಕು ಎಂದು ನೀಡುವ ಹೇಳಿಕೆಗಳನ್ನು ನಿಲ್ಲಿಸಬೇಕು ಎಂದು ಅವರು ಆಗ್ರಹಿಸಿದರು.

# ಆದಂಪುರ ವಾಯುನೆಲೆಗೆ ಮೋದಿ ಭೇಟಿ: ದೇಶದ ಸೈನಿಕರ ಆತ್ಮಬಲ, ಶತ್ರುಗಳನ್ನು ಹಿಮ್ಮೆಟ್ಟಿಸುವ ಕೆಚ್ಚು ಇಮ್ಮಡಿ– ಸಂಸದ ಕ್ಯಾ.ಬ್ರಿಜೇಶ್ ಚೌಟ

**ಮಂಗಳೂರು, ಮೇ.13–** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಪಂಜಾಬ್‌ನ ಆದಂ ಪುರ ವಾಯು ನೆಲೆಗೆ ಭೇಟಿ ನೀಡಿ ವಾಯುಸೇನೆಯ ಯೋಧರು, ಸೇನಾಧಿಕಾರಿಗಳನ್ನು ಅಭಿನಂದಿಸಿ ಬೆನ್ನು ತಟ್ಟಿರುವುದು 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ ದೇಶದ ಸೈನಿಕರ ಆತ್ಮಸ್ಥೈರ್ಯವನ್ನೇ ಇಮ್ಮಡಿ ಗೊಳಿಸುವ ಜೊತೆಗೆ ಪಾಕಿ ಸ್ತಾನಕ್ಕೂ ದೊಡ್ಡ ಎಚ್ಚರಿಕೆ ಸಂದೇಶ ರವಾನಿಸಿ ದೆಂದು ದಕ್ಷಿಣ ಕನ್ನಡ ಸಂಸದ ಕ್ಯಾ.ಬ್ರಿಜೇಶ್ ಚೌಟ ಹೇಳಿದ್ದಾರೆ.

ಪ್ರಧಾನಮಂತ್ರಿ ಮೋದಿ ಅವರು ದೇಶದ ಪ್ರಮುಖ ವಾಯುನೆಲೆಗೆ ಪಾಕಿಸ್ತಾನದ ವಿರುದ್ಧ ಸಂಘರ್ಷ ನಡೆಯುತ್ತಿದ್ದು, ಆಗಲೇ ಭೇಟಿ ನೀಡಿರುವುದು ಗಮನಾರ್ಹ ಬೆಳವಣಿಗೆ. ಒಂದು ರೀತಿಯಲ್ಲಿ ದೇಶದ ನಾಯಕನೇ ಯುದ್ಧಭೂಮಿ ಯಲ್ಲಿ ಕಾಣಿಸಿಕೊಂಡು ಕಾರ್ಯಾಚರಣೆ ಮುಂಚೂಣಿಯಲ್ಲಿರುವ ನಮ್ಮ ಸೈನಿಕರು, ಸೇನಾಧಿಕಾರಿಗಳಿಗೆ ಮತ್ತಷ್ಟು, ಆತ್ಮಬಲವನ್ನು ತುಂಬಿದ್ದಾರೆ ಧೈರ್ಯ. ದೇಶ ಯೋಧನಿಗೆ ಶತ್ರುಗಳನ್ನು ಹಿಮ್ಮೆಟ್ಟಿಸುವ ವೇಳೆ ದೇಶದ ಆಡಳಿತದ ಚುಕ್ಕಾಣಿ ಹಿಡಿದ ನಾಯಕ ಬೆನ್ನುತಟ್ಟಿದಾಗ , ಆತನಿಗೆ ಸಿಗುವ ಹುಮ್ಮಸ್ಸು ಅಷ್ಟಿಷ್ಟಲ್ಲ. ಅದು ಆತನ ಧೈರ್ಯವನ್ನು ಇಮ್ಮಡಿಗೊಳಿಸಿದೆ , ಕರ್ತವ್ಯದ ಆಯ್ಕೆ ಮತ್ತು ದೇಶಕ್ಕಾಗಿ ಹೆಚ್ಚಿನ ತ್ಯಾಗ ಮಾಡಲು ಪ್ರೇರೇಪಿಸುತ್ತದೆ ಎಂಬುವುದನ್ನು ಸೈನಿಕನಾಗಿ ನಾನು ಸ್ಪಷ್ಟವಾಗಿ ಹೇಳಬಲ್ಲೆ ಎಂದು ಕ್ಯಾ . ಬ್ರಿಜೇಶ್ ಅಭಿಪ್ರಾಯಪಟ್ಟಿದ್ದಾರೆ.

"ಯುದ್ಧಭೂಮಿಯಲ್ಲಿ ತಮ್ಮ ಜೀವವನ್ನೇ ಮುಡುಪಾಗಿಟ್ಟು ಹೋರಾಡುವ ಯೋಧರು ಶೌರ್ಯ, ತ್ಯಾಗ ಮತ್ತು ಪರಿಶ್ರಮವನ್ನು ಗುರುತಿಸಿ ಗೌರವಿಸಿದಾಗ ಸೈನಿಕರ ಮತ್ತು ಸೇನೆಯ ಆತ್ಮವಿಶ್ವಾಸ ಮತ್ತಷ್ಟು ವೃದ್ಧಿಸುತ್ತದೆ ಎನ್ನುವುದರಲ್ಲಿ ಎರಡು ಮಾತಿಲ್ಲ . ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ನಮ್ಮ ಸಶಸ್ತ್ರ ಪಡೆಗಳು ಮತ್ತಷ್ಟು ಬಲಶಾಲಿ ಮತ್ತು ಸನ್ನದ್ಧವಾಗಿದ್ದು , ವಿಶ್ವದಲ್ಲಿ ಶ್ರೇಷ್ಠ ಮಟ್ಟದಲ್ಲಿವೆ . ಆದಂಪುರ ವಾಯುನೆಲೆಗೆ ಭೇಟಿ ನೀಡುವ ಮೂಲಕ ಪ್ರಧಾನಮಂತ್ರಿಗಳು ವಾಯು ಯೋಧರಿಗೆ ಆತ್ಮಸ್ಥೈರ್ಯ ಹೆಚ್ಚಿಸಿದ್ದಾರೆ ಅತ್ತ , ಪಾಕಿಸ್ತಾನದಂತಹ ಶತ್ರುಗಳಲ್ಲಿ ನಡುಕ ಹುಟ್ಟಿಸಿದ್ದಾರೆ ನಮ್ಮ ಸೇನಾ ಪಡೆಗಳು ವಿಶ್ವದ ಅತ್ಯುತ್ತಮ ಮಿಲಿಟರಿ ಸಾಧನಗಳನ್ನು ಹೊಂದಿದ್ದು, ನಾವು



'ಆಪರೇಷನ್ ಸಿಂಧೂರ್' ಮೂಲಕ ನಮ್ಮ ಮಿಲಿಟರಿ ಸಾಮರ್ಥ್ಯ, ಶಕ್ತಿ ಹಾಗೂ ತಂತ್ರಜ್ಞಾನವನ್ನು ಇಡೀ ಜಗತ್ತಿಗೆ ತೋರಿಸಿದ್ದೇವೆಂದು ಹೇಳಿದ್ದಾರೆ.

# ಆನೆ ಸೆರೆಹಿಡಿಯುವುದರಲ್ಲಿ ರಾಜ್ಯವೇ ಮೊದಲು: ಈಶ್ವರ ಖಂಡ್ರೆ

**ಬೆಂಗಳೂರು, ಮೇ.13–** ಆನೆ ಸೆರೆ ಹಿಡಿಯುವುದು, ಪಳಗಿಸುವುದರಲ್ಲಿ ಕರ್ನಾಟಕ ರಾಜ್ಯ ದೇಶದಲ್ಲೇ ಮುಂಚೂಣಿಯಲ್ಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಬೇಲೂರು ತಾಲೂಕು ಬಿಕ್ಕೋಡಿನಲ್ಲಿ ಆನೆ ಕಾರ್ಯಪಡೆಯ ಕಚೇರಿ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ವನ್ಯಜೀವಿ ಸಂರಕ್ಷಣಾ ಕಾಯಿದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಕ್ಕೆ ತಂದಿರುವ ಹಿನ್ನೆಲೆಯಲ್ಲಿ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. ಆನೆಗಳ ಸಂಖ್ಯೆಯಲ್ಲಿ ರಾಜ್ಯ ನಂ.1 ಆಗಿದ್ದು, 6395 ಆನೆಗಳಿವೆ. ಹೀಗಾಗಿ ಮಾನವ–ವನ್ಯಜೀವಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದರು. ಹಾಸನ ಜಿಲ್ಲೆಯಲ್ಲಿ ಕಳೆದ 10–20 ವರ್ಷಗಳಲ್ಲಿ ಆನೆಗಳ ಹಾವಳಿ ಹೆಚ್ಚಳವಾಗಿದ್ದು, ಆನೆಗಳನ್ನು ಸ್ಥಳಾಂತರ ಮಾಡಿದರೂ ಮತ್ತೆ ಅಲ್ಲಿಗೇ ಬರುತ್ತವೆ. ಹಾಸನದ ತೋಟಗಳಲ್ಲಿಯೇ 50–60 ಆನೆಗಳಿವೆ. ಇದೇ ಸಮಸ್ಯೆ ಚಿಕ್ಕಮಗಳೂರು ಮತ್ತು ಕೊಡಗಿನಲ್ಲೂ ಇದೆ ಎಂದರು. ಅರಣ್ಯ ಹಾಗೂ ಈ ಭಾಗದ ತೋಟಗಳು ಒಂದೇ ರೀತಿ ಇರುವ ಕಾರಣ ಆನೆಗಳು ಇಲ್ಲಿ ಸ್ವಚ್ಛಂದವಾಗಿ ವಿಹರಿಸುತ್ತವೆ.



ಹೀಗಾಗಿ ಆನೆಗಳು ನಾಡಿಗೆ ಬಾರದಂತೆ ತಡೆಯಲು ರೈಲ್ವೆ ಬ್ಯಾರಿಕೇಡ್, ಆನೆ ಕಂದಕ, ಸೌರ ತಂತಿಬೇಲಿಯೇ ಮೊದಲಾದ ವಿವಿಧ ಕ್ರಮಗಳನ್ನು ಕಾರ್ಯಗತಗೊಳಿಸಲಾಗಿದೆ ಎಂದರು. ಹಾಸನ ಜಿಲ್ಲೆಯಲ್ಲಿ ಜನರಿಗೆ ತೊಂದರೆ ನೀಡುತ್ತಿರುವ ಪುಂಡಾನೆಗಳ ಸೆರೆಗೆ ಕಾರ್ಯಾಚರಣೆ ಮಾಡಲು ಸೂಚನೆ ನೀಡಲಾಗಿದ್ದು, ಅರಣ್ಯ ಇಲಾಖೆ ಯಶಸ್ವಿಯಾಗಿ ಆನೆ ಸೆರೆ ಹಿಡಿಯುತ್ತಿದೆ ಎಂದರು.

ಆನೆಗಳ ಸಮಸ್ಯೆ ಹೆಚ್ಚಾಗಿರುವ ಬಿಕ್ಕೋಡು ಭಾಗದಲ್ಲಿ ಒಂದು ಆನೆ ಕಾರ್ಯಪಡೆ ಶಿಬಿರವನ್ನೇ ರಚಿಸಲಾಗಿದೆ. ಇಲ್ಲಿ ಡಿಸಿಎಫ್ ದರ್ಜೆಯ ಅಧಿಕಾರಿ ನೇತೃತ್ವದಲ್ಲಿ ಆನೆಗಳ ಚಲನವಲನದ ಬಗ್ಗೆ ನಿಗಾ ಇಟ್ಟು ಸಾರ್ವಜನಿಕರಿಗೆ ಸಕಾಲಿಕ ಮಾಹಿತಿ ನೀಡಬೇಕು ಎಂದು ಸೂಚಿಸಿದ್ದು, ಇಲ್ಲಿ ತಾತ್ಕಾಲಿಕ ಶಿಬಿರ ಮಾಲಾಗಿದೆ. ಈಗ ಇಲ್ಲಿ ಕಟ್ಟಡವನ್ನೇ ನಿರ್ಮಾಣ ಮಾಡುತ್ತಿದ್ದು, ಇದನ್ನು ತಾವೇ ಉದ್ಘಾಟನೆ ಮಾಡುವುದಾಗಿ ಹೇಳಿದರು.

**ಆನೆ ಧಾಮ ಎಂಬ ಹೊಸ ಕಲ್ಪನೆ:** ಆನೆ ಧಾಮ ಅಥವಾ ಸಾಫ್ಟ್ ರಿಲೀಸ್ ಸೆಂಟರ್ ಹೊಸ ಪರಿಕಲ್ಪನೆ ಮತ್ತು ಪ್ರಯೋಗವಾಗಿದ್ದು, ಕರ್ನಾಟಕದಲ್ಲಿ ಮೊದಲ ಬಾರಿಗೆ ರಚಿಸಲಾಗುತ್ತಿದೆ. ಇದು ಸಮರ್ಥವಾಗಿ ಆನೆ ಸಮಸ್ಯೆಗೆ ಪರಿಹಾರ ಒದಗಿಸುತ್ತದೆ ಎಂಬುದು ಶೇ.80ರಷ್ಟು ಅಧಿಕಾರಿಗಳ ಅಭಿಪ್ರಾಯವಾಗಿದ್ದರೆ ಉಳಿದ 20ರಷ್ಟು ಅಧಿಕಾರಿಗಳು ಇದು ಸೂಕ್ತವಾದ ಕ್ರಮವಲ್ಲ ಎಂದೂ ಹೇಳುತ್ತಾರೆ. ರಾಜ್ಯ ಸರ್ಕಾರ ಈ ಹೊಸ ಪ್ರಯೋಗ ಮಾಡಲು ಕ್ರಮ ವಹಿಸಿದೆ ಎಂದರು.

ಆನೆ ಧಾಮ ಸ್ಥಾಪಿಸಲು 15–20 ದಿನಗಳ ಒಳಗಾಗಿ ಟೆಂಡರ್ ಕರೆದು, 2 ತಿಂಗಳ ಒಳಗಾಗಿ ಶಂಕುಸ್ಥಾಪನೆ ನೆರವೇರಿಸಿ ಕಾಮಗಾರಿ ಆರಂಭಿಸಲಾಗುವುದು ಎಂದು ಈಶ್ವರ ಖಂಡ್ರೆ ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

**ಜಾಗೃತಿ, ಸಹಬಾಳ್ವೆ ಅನಿವಾರ್ಯ:** ಪ್ರಸಕ್ತ ಸನ್ನಿವೇಶದಲ್ಲಿ ಕಾಡಿನಂಚಿನ ಜನರಿಗೆ ವನ್ಯಜೀವಿಗಳೊಂದಿಗೆ ಸಹಬಾಳ್ವೆ ನಡೆಸುವ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ. ಅದೇ ವೇಳೆ ರೈತರ ಬೆಳೆ ಮತ್ತು ಅಮೂಲ್ಯ ಜೀವಹಾನಿ ಆಗದಂತೆ ತಡೆಯುವ ಅಗತ್ಯವೂ ಇದೆ. ಈ ಕಾರ್ಯವನ್ನು ಅರಣ್ಯ ಇಲಾಖೆ ಪ್ರಾಮಾಣಿಕವಾಗಿ ಮಾಡಲಿದೆ ಎಂದು ತಿಳಿಸಿದರು. ಶಂಕುಸ್ಥಾಪನೆ ಸಮಾರಂಭದಲ್ಲಿ ಸಂಸದ ಶ್ರೇಯಸ್ ಪಟೇಲ್, ಶಾಸಕ ಸುರೇಶ್, ಅರಣ್ಯಾಧಿಕಾರಿಗಳಾದ ಏಳುಕೊಂಡಲ, ಸೌರಭ್, ಕ್ಷೀರಸಾಗರ್ ಮತ್ತಿತರರು ಪಾಲ್ಗೊಂಡಿದ್ದರು.



ಧಾರವಾಡದಲ್ಲಿ ಮಂಗಳವಾರ ಮಾವು ಮೇಳವನ್ನು ಜಿಲ್ಲಾಧಿಕಾರಿ ಡಿಆರ್‌ಜೆ ದಿವ್ಯಾ ಪ್ರಭು ಉದ್ಘಾಟಿಸಿದರು.

### ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವ್ಯಾಪ್ತಿ

# ಎರಡು ತಿಂಗಳಿನಿಂದ ವೇತನವನ್ನೇ ನೀಡದ ಸರ್ಕಾರ: ಬಿ.ವೈ.ವಿಜಯೇಂದ್ರ ವಾಗ್ದಾಳಿ

**ಬೆಂಗಳೂರು, ಮೇ.13–** ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವ್ಯಾಪ್ತಿಯಲ್ಲಿ ಸಾವಿರಾರು ನೌಕರರು ಕೆಲಸ ಮಾಡುತ್ತಿದ್ದಾರೆ. ಅವರ ಉದ್ಯೋಗ ಭದ್ರತೆ ಕಲ್ಪಿಸಬೇಕಾದ ರಾಜ್ಯ ಸರ್ಕಾರ ಎರಡು ತಿಂಗಳಿನಿಂದ ವೇತನವನ್ನೇ ನೀಡಿಲ್ಲ. ಹೀಗಾಗಿ ಸಂಘ ಮನವಿ ಮಾಡಿದೆ. ಇದಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಹ ಒತ್ತಾಯಿಸಿದ್ದಾರೆ.

ದಪ್ಪ ಚರ್ಮದ ಸರ್ಕಾರ ವೇತನ ವಿತರಣೆ ಮಾಡದೇ ನೌಕರರು ಕೆಲಸ ಕಳೆದುಕೊಳ್ಳುವಂತ ಸ್ಥಿತಿಗೆ ತಂದಿಟ್ಟಿದೆ ಎಂದು ದೂರಿದ್ದಾರೆ. ಮಂಗಳವಾರ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿ.ವೈ. ವಿಜಯೇಂದ್ರ ಅವರು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. "ಭ್ರಷ್ಟ ಕಾಂಗ್ರೆಸ್ ಸರ್ಕಾರಕ್ಕೆ ಓಊಬ ನೌಕರರ ಹಿಡಿಶಾಪ" ಹಾಕುತ್ತಿದ್ದಾರೆ. ಅವರಿಗೆ ವೇತನ ನೀಡದೇ ಸರ್ಕಾರ ದುಡಿಸಿಕೊಳ್ಳುತ್ತಿದೆ. NHM ನೌಕರರನ್ನು ಜೀತದಾಳುಗಳಂತೆ ನಡೆಸಿಕೊಳ್ಳುತ್ತಿರುವುದು ದುರಾದೃಷ್ಟಕರ ಸಂಗತಿ ಎಂದು ಸರ್ಕಾರದ ವಿರುದ್ಧ ಹರಿಹಾಯ್ದರು.

ಕಾಂಗ್ರೆಸ್ ಅಧಿಕಾರಕ್ಕೆ ಬರುವ ಮುನ್ನ ತನ್ನ ಪ್ರಣಾಳಿಕೆಯಲ್ಲಿ NHM ನೌಕರರನ್ನು ಖಾಯಂಗೊಳಿಸುವ ವಾಗ್ದಾನ ನೀಡಿತ್ತು, ವಾಗ್ದಾನ ಈಡೇರಿಸುವುದಿರಲಿ ಸದ್ಯ ಸಂಬಳವನ್ನೂ ನೀಡದೇ, ಉದ್ಯೋಗ ಅಭದ್ರತೆ ಸೃಷ್ಟಿಸಿದೆ. ಆರೋಗ್ಯ ಇಲಾಖೆ ವ್ಯಾಪ್ತಿಯಲ್ಲಿ ದುಡಿಯುವ ಸಾವಿರಾರು ನೌಕರರು ನಿತ್ಯವೂ ನರಳುವಂತೆ ಮಾಡಿರುವ ಈ ದಪ್ಪಚರ್ಮದ ಸರ್ಕಾರದ ತಾತ್ಸಾರ



ಧೋರಣೆ ಖಂಡನೀಯ ಎಂದರು. ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆಯನ್ನೂ ಹಾಗೂ ಇಲಾಖೆಯ ನೌಕರರನ್ನು ಈ ಪರಿಯಾಗಿ ನಿರ್ಲಕ್ಷಿಸುವುದನ್ನು ಗಮನಿಸಿದರೆ ಆರೋಗ್ಯ ಕ್ಷೇತ್ರದ ಕುರಿತು ಈ ಸರ್ಕಾರಕ್ಕಿರುವ ತಾತ್ಸಾರ ಧೋರಣೆಯನ್ನು ಸಾಕ್ಷೀಕರಿಸುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂ ರಾವ್‌ಗೂ ಟಾಂಗ್ ಕೊಟ್ಟಿದ್ದಾರೆ.

### ಸಂಗೀತ ಕಾರ್ಯಕ್ರಮದಲ್ಲಿ ಕನ್ನಡಿಗರ ಭಾವನೆ ಕೆರಳಿಸಿದ ಹೇಳಿಕೆ ಪ್ರಕರಣ

# ಸೋನು ನಿಗಮ್ ಸಲ್ಲಿಸಿದ ಅರ್ಜಿ ವಿಚಾರಣೆ ನಾಳೆ

**ಬೆಂಗಳೂರು, ಮೇ.13–** ಕನ್ನಡಾಭಿಮಾನವನ್ನು ಪಹಲ್ಗಾಮ್ ಘಟನೆಗೆ ತಳುಕು ಹಾಕಿದ ಆರೋಪಕ್ಕೆ ಸಂಬಂಧಿಸಿದಂತೆ ನೀಡಲಾಗಿರುವ ದೂರು ಮತ್ತು ಆನಂತರ ಪೊಲೀಸರು ದಾಖಲಿಸಿರುವ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಗಾಯಕ ಸೋನು ನಿಗಮ್ ಸಲ್ಲಿಸಿರುವ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಮೇ 15ಕ್ಕೆ ಮುಂದೂಡಿದೆ.

ಬೆಂಗಳೂರಿನ ಅವಲಹಳ್ಳಿ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ರದ್ದತಿ ಕೋರಿ ಸೋನು ನಿಗಮ್ ಸಲ್ಲಿಸಿರುವ ಅರ್ಜಿಯನ್ನು ನಾಯಮೂರ್ತಿ ಶಿವಶಂಕರ್ ಅಮರಣ್ಣವರ್ ಅವರ ರಜಾಕಾಲೀನ ಏಕಸದಸ್ಯ ಪೀಠ ಮಂಗಳವಾರ ನಡೆಸಿತು. ಅರ್ಜಿದಾರ ಸೋನು ನಿಗಮ್ ಪರ ವಕೀಲೆ ಕವಿತಾ ದಾಮೋದರನ್ ವಾದ ಮಂಡಿಸಲು ಮುಂದಾದರು. ಆಗ ಪೀಠವು ಕಚೇರಿ ಆಕ್ಷೇಪಣೆಗೆ ಸಂಬಂಧಿಸಿದಂತೆ ವಕೀಲೆಯ ವಾದವನ್ನು ದಾಖಲಿಸ



ಲಾಗಿದ್ದು, ವಿಚಾರಣೆಯನ್ನು ಮೇ 15ಕ್ಕೆ ಮುಂದೂಡಲಾಗಿದೆ ಎಂದು ಆದೇಶಿಸಿತು.

ಸೋನು ನಿಗಮ್ ಅರ್ಜಿಯಲ್ಲಿ ದೂರುದಾರ ಕರ್ನಾಟಕ ರಕ್ಷಣಾ ವೇದಿಕೆಯ (ನಾರಾಯಣಗೌಡ ಬಣ) ಬೆಂಗಳೂರು ನಗರ ಜಿಲ್ಲಾ ಘಟಕದ ಅಧ್ಯಕ್ಷ ಟಿ ಎ ಧರ್ಮರಾಜ ಮತ್ತು ರಾಜ್ಯ ಸರ್ಕಾರವನ್ನು ಪ್ರತಿವಾದಿಯನ್ನಾಗಿಸಿದ್ದಾರೆ. ಮೇ 5ರಂದು ಎಫ್‌ಐಆರ್ ಸಂಬಂಧ ತನಿಖೆಗೆ ಹಾಜರಾಗುವಂತೆ ಗಾಯಕ ಸೋನು ನಿಗಮ್‌ಗೆ ಅವಲಹಳ್ಳಿ ಪೊಲೀಸರು ನೋಟಿಸ್ ಜಾರಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಸೋನು ನಿಗಮ್ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ.

ಏಪ್ರಿಲ್ 25 ಮತ್ತು 26ರಂದು ಸೋನು ನಿಗಮ್ ಅವರು ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಎಂಜಿನಿಯರಿಂಗ್ ಅಂಡ್ ಟೆಕ್ನಾಲಜಿಯಲ್ಲಿ ನಡೆದಿದ್ದ ಸಂಗೀತ ಕಾರ್ಯಕ್ರಮದಲ್ಲಿ ಆಕ್ಷೇಪಾರ್ಹ ಮತ್ತು ಕನ್ನಡಿಗರ ಭಾವನೆ ಕೆರಳಿಸುವ ಹೇಳಿಕೆ ನೀಡಿದ್ದಾರೆ ಎಂದು ಮೇ 2ರಂದು ದೂರು ನೀಡಲಾಗಿತ್ತು. ಇದನ್ನು ಆಧರಿಸಿ ಪೊಲೀಸರು ಮೇ 3ರಂದು ಎಫ್‌ಐಆರ್ ದಾಖಲಿಸಿದ್ದಾರೆ.

ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್‌ಗಳಾದ 351 (2) (ಕ್ರಿಮಿನಲ್ ಬೆದರಿಕೆ), 353 (ಸಾರ್ವಜನಿಕವಾಗಿ ಕಿರಿಕಿರಿ ಉಂಟು ಮಾಡುವ ಹೇಳಿಕೆ), 352(1) (ಉದ್ದೇಶಪೂರ್ವಕವಾಗಿ ಅವಮಾನ) ಅಡಿ ಧರ್ಮರಾಜ ನೀಡಿದ ದೂರಿನ ಅನ್ವಯ ಎಫ್‌ಐಆರ್ ದಾಖಲಿಸಲಾಗಿದೆ.

### ಚಿನ್ನ ಕಳ್ಳಸಾಗಣೆ ಮಾಡಿದ ಆರೋಪದ ಮೇಲೆ ಬಂಧನ

# ನಟಿ ರನ್ಯಾರಾವ್ ಜಾಮೀನು ತೀರ್ಪು ವಿಚಾರಣೆ ಮೇ 16ಕ್ಕೆ

**ಬೆಂಗಳೂರು, ಮೇ.13–** ಅಕ್ರಮ ಚಿನ್ನ ಸಾಗಾಟ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟಿ ರನ್ಯಾರಾವ್ ಜಾಮೀನು ತೀರ್ಪು ಅನ್ನು ನಗರದ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ಮೇ 16ಕ್ಕೆ ಮುಂದೂಡಿದೆ. ನಟಿ ರನ್ಯಾರಾವ್ ತನ್ನ ಪರ ವಕೀಲರ ಮೂಲಕ ಮತ್ತೊಮ್ಮೆ ಆರ್ಥಿಕ ಅಪರಾಧ ನ್ಯಾಯಾಲಯಕ್ಕೆ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದು, ಅರ್ಜಿಯಲ್ಲಿ ಗುಪ್ತಚರ ನಿರ್ದೇಶನಾಲಯ(ಡಿಆರ್‌ಐ) ಅಧಿಕಾರಿಗಳು ನಿಗದಿತ ಅವಧಿಯಲ್ಲಿ ಚಾರ್ಜ್‌ಶೀಟ್ ಸಲ್ಲಿಸದೆ, ವಿನಾ ಕಾರಣ ದಿನ ಮುಂದೂಡುತ್ತಿದ್ದಾರೆ.ಆದ್ದರಿಂದ ಜಾಮೀನು ನೀಡಬೇಕೆಂದು ರನ್ಯಾರಾವ್ ಕೋರಿದ್ದರು. ಅರ್ಜಿ ವಿಚಾರಣೆ ಸಂಬಂಧ ಈ ಹಿಂದೆ ವಾದ–ಪ್ರತಿವಾದ ಆಲಿಸಿದ್ದ ಕೋರ್ಟ್, ಸೋಮವಾರ(ಮೇ 12) ಕ್ಕೆ ತೀರ್ಪು ಕಾಯ್ದಿರಿಸಿತ್ತು.ಆದರೆ, ಇದೀಗ ಮೇ 16ರಂದು ತೀರ್ಪು ಪ್ರಕಟಿಸುವುದಾಗಿ ಹೇಳಿ ಮುಂದೂಡಿದೆ. ಹಿರಿಯ



ಐಪಿಎಸ್ ಅಧಿಕಾರಿ ರಾಮಚಂದ್ರ ರಾವ್ ಅವರ ಪುತ್ರಿ ರನ್ಯಾ ಅವರನ್ನು ಮಾ.3 ರಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯದ ಅಧಿಕಾರಿಗಳು, ದುಬೈನಿಂದ ಚಿನ್ನವನ್ನು ಕಳ್ಳಸಾಗಣೆ ಮಾಡಿದ ಆರೋಪದ ಮೇಲೆ ಬಂಧಿಸಿದರು. ಆಕೆಯಿಂದ 14.2 ಕೆ.ಜಿ. ಚಿನ್ನವನ್ನು ವಶಪಡಿಸಿಕೊಂಡಿತು. ನಂತರ, ಡಿಆರ್‌ಐ ಅವರ ಇಬ್ಬರು ಸಹಚರರನ್ನು ಬಂಧಿಸಿತ್ತು. ಈ ಹಿಂದೆ ರನ್ಯಾರಾವ್ ವಿಶೇಷ ನ್ಯಾಯಾಲಯ ಹಾಗೂ ಹೈಕೋರ್ಟ್‌ನಲ್ಲಿ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಆದರೆ, ಜಾಮೀನು ಸಿಕ್ಕಿರಲಿಲ್ಲ.

# ಕುತೂಹಲ ಮೂಡಿಸಿದ ಡಿ.ಕೆ.ಶಿವಕುಮಾರ್ ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ್ ಭೇಟಿ

**ಬೆಂಗಳೂರು, ಮೇ.13–** ಬಿಜೆಪಿ ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ್ ಇಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿರುವುದು ಕುತೂಹಲ ಕೆರಳಿಸಿತು.

ಮಂಗಳವಾರ ಬೆಳಗ್ಗೆ ಡಿ.ಕೆ.ಶಿವಕುಮಾರ್ ಅವರ ಮನೆಗೆ ಕೆಲ ಆಪ್ತರೊಂದಿಗೆ ಆಗಮಿಸಿದ ಜಿ.ಎಂ.ಸಿದ್ದೇಶ್ವರ್ ಸುಮಾರು ಹೊತ್ತು ಚರ್ಚೆ ನಡೆಸಿದರು.

ಸುದ್ದಿಗಾರರೊಂದಿಗೆ, ಇದು ಕೇವಲ ಸೌಜನ್ಯದ ಭೇಟಿ. ಇದರಲ್ಲಿ ವಿಶೇಷತೆ ಏನೂ ಇಲ್ಲ ಎಂದರು. ನಾನು ಬಿಜೆಪಿಯಲ್ಲಿಯೇ ಇದ್ದೇನೆ. ಪಕ್ಷಾಂತರ ಮಾಡುವ ಯಾವ ಚರ್ಚೆಗಳೂ ಇಲ್ಲ. ಈ ಮೊದಲು ಎರಡು ಬಾರಿ ಡಿ.ಕೆ.ಶಿವಕುಮಾರ್



ಅವರನ್ನು ಭೇಟಿ ಮಾಡಿದ್ದೆ. ಇದು ನನ್ನ ಮೂರನೇ ಭೇಟಿ. ಬಿಜೆಪಿಯಿಂದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ರನ್ನು ಉಚ್ಚಾಟಿಸಿದ ಬಳಿಕ ಅವರು ಎಲ್ಲಿಯೂ ಹೋಗಿಲ್ಲ, ನಾನೂ ಎಲ್ಲಿಗೂ ಹೋಗಿಲ್ಲ. ಯತ್ನಾಳ್ ಮತ್ತೆ ಬಿಜೆಪಿಗೆ ಸೇರುತ್ತಾರೆ ಎಂದು ಹೇಳಿದ್ದಾರೆ. ಇದೇ ವೇಳೆ ವಿಧಾನಸಭೆಯ ಉಪಸಭಾಪತಿ ರುದ್ರಪ್ಪ ಲಮಾಣಿ ಅವರು ಡಿ. ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದರು. ಈ ಹಿಂದೆ ಅಪಘಾತಕ್ಕೊಳಗಾಗಿದ್ದ ರುದ್ರಪ್ಪ ಲಮಾಣಿ ಸುದೀರ್ಘ ಕಾಲ ಎಲ್ಲಿಯೂ ಹೊರಗೆ ಕಾಣಿಸಿಕೊಳ್ಳದೆ ವಿಶ್ರಾಂತಿಯಲ್ಲಿದ್ದರು ಎಂದರು.

ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾದ ಅವರು ಅಪಘಾತದಿಂದಾಗಿ ಹೊರಗಡೆ ಓಡಾಡುತ್ತಿರಲಿಲ್ಲ. ಈಗ ಆರೋಗ್ಯ ಸುಧಾರಿಸಿದೆ. ವಿಧಾನಸೌಧಕ್ಕೆ ಭೇಟಿ ನೀಡಿ ದೈನಂದಿನ ಕಾರ್ಯಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುತ್ತೇನೆ ಎಂದು ಹೇಳಿದರು.

# ಇಂದಿರಾಗಾಂಧಿ ಅವರ ಮಾರ್ಗ ಅನುಸರಿಸಿ ಶತ್ರುಗಳಿಗೆ ಸ್ಪಷ್ಟ ಉತ್ತರ ನೀಡಲು ಸಚಿವ ಮಧು ಬಂಗಾರಪ್ಪ ಸಲಹೆ

**ಬೆಂಗಳೂರು, ಮೇ 13–**ಭಾರತದ ಸೈನಿಕರು ಪಾಕಿಸ್ತಾನದಲ್ಲಿ ಅಡಗಿರುವ ಉಗ್ರರ ನೆಲೆಗಳನ್ನು ಧ್ವಂಸ ಮಾಡಿದ್ದಾರೆ ಪಾಕಿಸ್ತಾನದ ಬೆಂಬಲಿತ ಉಗ್ರರು ಭಾರತದ ಮುಗ್ಧ ನಾಗರಿಕರನ್ನ ಕೊಂದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ವಿದೇಶದಲ್ಲಿ ಇದ್ದು ನಂತರ ದೇಶಕ್ಕೆ ಆಗಮಿಸಿ ಉಗ್ರರಿಂದ ಬಲಿಯಾದ ಕುಟುಂಬಗಳಿಗೆ ಸಾಂತ್ವಾನ ಹೇಳುವುದಾಗಲಿ ಅಥವಾ ಮತಪಟ್ಟ ಕುಟುಂಬಳಿಗೆ ಪರಿಹಾರ ಘೋಷಿಸುವುದಾಗಲಿ ಏನನ್ನು ಮಾಡದೆ ಕೇವಲ ಸಭೆಗಳನ್ನು ನಡೆಸಿ ಹೈ ವೋಲ್ಟೇಜ್ ಮೀಟಿಂಗ್ ಎಂದು ಪ್ರಚಾರ ಪಡೆದಿದ್ದು ಮಾತ್ರ ನಿಮ ಸಾಧನೆಯಾಗಿದೆ ಎಂದು ಟೀಕಿಸಿದ್ದಾರೆ.ನಿನ್ನೆ ತಾವು ದೇಶವನ್ನುದ್ದೇಶಿಸಿ ಮಾಡಿದ ಭಾಷಣವನ್ನು ನೈತಿಕ ಸ್ಥೈರ್ಯ ತುಂಬಿಸುವ ಕೆಲಸ ಮಾಡಿಲ್ಲ. ನಮ ದೇಶದ ಆಂತರಿಕ ವಿಚಾರದಲ್ಲಿ ಮೂರನೇಯವರು ಹಸ್ತಕ್ಷೇಪ ಖಂಡನೀಯ ಅಮೆರಿಕಾ ಅಧ್ಯಕ್ಷ ಟ್ರಂಪ್ ಭಾರತವನ್ನು ತನ್ನ ಹಿಡಿತದಲ್ಲಿ ಇಟ್ಟುಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.ಕಾಶೀರ ವಿಷಯ ಬಗ್ಗೆ ಮೂರನೇಯವರು ಮೂಗು ತೂರಿಸುವ ಪರಿಸ್ಥಿತಿ ನಿರ್ಮಾಣವಾಗಬಾರದು. ಈ ಸಂಬಂಧ ಟ್ರಂಪ್ ಹೇಳಿಕೆಯನ್ನ ಬಹಿರಂಗವಾಗಿ ಖಂಡಿಸಬೇಕು ಎಂದು ಹೇಳಿದರು. ಭಾರತದ ತಂಟೆಗೆ ಬಂದವರಿಗೆ ತಕ್ಕ ಪಾಠ ಕಲಿಸಿದ್ದು ಇಂದಿರಾಗಾಂಧಿ ಭಾರತದ ತಂಟೆಗೆ ಬಂದವರಿಗೆ ತಕ್ಕ ಪಾಠ ಕಲಿಸಿದ್ದು ಇಂದಿರಾಗಾಂಧಿ ಅವರ ಮಾರ್ಗಗಳನ್ನು ಅನುಸರಿಸಿ ಶತ್ರುಗಳಿಗೆ ಸ್ಪಷ್ಟ ಉತ್ತರ ನೀಡಬೇಕು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಸಲಹೆ ನೀಡಿದ್ದಾರೆ.



ಸುದ್ದಿಗಾರರೊಂದಿಗೆ, ಕದನ ವಿರಾಮ ಘೋಷಣೆಗೆ ಅಮೆರಿಕದ ಅಧ್ಯಕ್ಷ ಡೊನಾಲ್?ಡ ಟ್ರಂಪ್ ಸೂಚಿಸಿದ್ದರು ಎಂಬುದು ವ್ಯಾಪಕವಾಗಿ ಚರ್ಚೆಯಾಗುತ್ತಿದೆ. ಕದನ ವಿರಾಮದ ಸಂದೇಶ ದಲ್ಲಿ ಸಾಮಾನ್ಯಜ್ಞಾನ ಎಂಬ ಒಂದು ಪದ ಇದೆ. ಅದು ಇಡೀ ದೇಶಕ್ಕೆ ಅನ್ವಯವಾಗುತ್ತದೆ. ಹೀಗಾಗಿ ಕೇಂದ್ರ ಸರ್ಕಾರ ತಕ್ಕ ಉತ್ತರ ಕೊಡಲೇಬೇಕು ಎಂದು ಆಗ್ರಹಿಸಿದರು.ದೇಶದ ಭದ್ರತೆ ವಿಚಾರವಾಗಿ ರಾಜಕೀಯ ಹೇಳಿಕೆ ಗಳನ್ನು ನೀಡಬಾರದು ಎಂಬ ಕಾರಣಕ್ಕೆ ನಾವು ಹೆಚ್ಚು ಮಾತನಾಡಲು ಬಯಸು ವುದಿಲ್ಲ. ಭಾರತೀಯರಿಗೆ ಸಾಮಾನ್ಯಜ್ಞಾನ ಇದೆಯೋ, ಇಲ್ಲವೋ ಎಂಬುದನ್ನು ಜಗತ್ತಿಗೇ ಗೊತ್ತಿದೆ. ಆದರೆ ಈ ರೀತಿಯ ಪದಬಳಕೆ ಮಾಡುವುದು ಸರಿಯಲ್ಲ. ಪಾಕಿಸ್ತಾನಕ್ಕೆ ಸಾಮಾನ್ಯ ಜ್ಞಾನ ಇಲ್ಲ. ಎರಡೂ ದೇಶಗಳು ಸಾಮಾನ್ಯ ಜ್ಞಾನದಿಂದ ನಡೆದುಕೊಳ್ಳಬೇಕು ಎಂದು ಮೋದಿ ಹೇಳುವ ವ್ಂಊಲಕ್ ಪಾಕಿಸ್ತಾನದ ಜ್ಊತ್ಗ್ ನಮನ್ನು ಹೋಲಿಕೆ ಮಾಡಿದ್ದಾರೆ. ಇದು ಸರಿಯಲ್ಲ ಎಂದರು. ಈ ಪದವನ್ನು ಯಾರೂ ಒಪ್ಪಿಕೊಳ್ಳಲಾಗುವುದಿಲ್ಲ. ಗಡಿಯ ಕುರಿತು ಸಂಘರ್ಷ ನಡೆಯುವಾಗ ಆಂತರಿಕವಾಗಿ ನಾವು ಭಿನ್ನ ಹೇಳಿಕೆಗಳನ್ನು ನೀಡುವುದು ಸರಿಯಲ್ಲ. ಪ್ರಧಾನಮಂತ್ರಿಯವರ ಜೊತೆಗೆ ದೇಶದ ಪ್ರತಿಯೊಬ್ಬರೂ ಇರುತ್ತಾರೆ ಎಂದು ಹೇಳಿದರು.ನಮ್ಮ ಯೋಧರು ಶ್ರಮ ವಹಿಸಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಸೈನಿಕರ ರಕ್ಷಣೆ ಕೂಡ ನಮ ಜವಾಬ್ದಾರಿ. ಸುರಕ್ಷತೆ ಮತ್ತು ರಕ್ಷಣೆ ವಿಚಾರವಾಗಿ ಯಾವುದೇ ವ್ಯತಿರಿಕ್ತ ಹೇಳಿಕೆಗಳನ್ನು ನೀಡುವುದಿಲ್ಲ ಎಂದರು.ಪ್ರತಿ ಬಾರಿಯೂ ಪಾಕಿಸ್ತಾನದ ಹೆಸರನ್ನು ತೆಗೆದುಕೊಂಡು ರಾಜಕೀಯ ಮಾತನಾಡುತ್ತಾರೆ. ನಾವು ರಾಜಕೀಯ ಮಾಡುವುದಿಲ್ಲ. ಪಾಕಿಸ್ತಾನಕ್ಕೆ ಪಾಠ ಕಲಿಸಬಾರದು ಎಂದು ಯಾರೂ ಹಿಡಿದುಕೊಂಡಿಲ್ಲ. ಈ ಹಿಂದೆ ಇಂದಿರಾಗಾಂಧಿಯವರು ಸಾಕಷ್ಟು ಸಂದರ್ಭದಲ್ಲಿ ದಿಟ್ಟ ನಿರ್ಧಾರ ತೆಗೆದುಕೊಂಡಿದ್ದರು. ಈಗಲೂ ಅದೇ ರೀತಿಯ ಕ್ರಮಗಳಾಗಬೇಕು ಎಂದು ಒತ್ತಾಯಿಸಿದರು.

### ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸದೆ ವಿಳಂಬ ಧೋರಣೆ

# ಎಲ್ ಅಂಡ್ ಟಿ ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸಲು ವರದಿಗೆ ಅವಿನಾಶ ಶಿಂಧೆ ಆಗ್ರಹ

**ಬೆಂಗಳೂರು, ಮೇ.13– :** ನಗರಕ್ಕೆ ನಿರಂತರ ಕುಡಿಯುವ ನೀರು ಯೋಜನೆ ಕಾಮಗಾರಿ ಕಾಲಮಿತಿಯಲ್ಲಿ ಪೂರ್ಣಗೊಳಿಸದೇ ವಿಳಂಬ ಧೋರಣೆ ತಾಳುತ್ತಿರುವ ಎಲ್ & ಟಿ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಲು ಕೂಡಲೆ ವರದಿ ಸಲ್ಲಿಸುವಂತೆ ಮಹಾನಗರ ಪಾಲಿಕೆ ಅಯುಕ್ತ ಅವಿನಾಶ ಶಿಂಧೆ ಅವರಿಗೆ ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಲಬುರಗಿ ನಗರದಲ್ಲಿ 24 ಗಂಟೆ ನಿರಂತರ ಕುಡಿಯುವ ನೀರು ಯೋಜನೆ ಪ್ರಗತಿ ಪರಿಶೀಲನೆ ನಡೆಸಿದ ಅವರು, ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಎಲ್ & ಟಿ ಕಂಪನಿ ಕೆಲಸಗಳು ಕಾಲಮಿತಿಯಲ್ಲಿ ಪೂರ್ಣವಾಗುತ್ತಿಲ್ಲ.

ಇದರ ಮೇಲುಸ್ತುವಾರಿ ಮಾಡಬೇಕಾದ ಪಾಲಿಕೆ ಮತ್ತು ಕೆ.ಂಖಿಂ.ಐ.ಡಿ.ಎಫ್.ಸಿ



ಇಂಜಿನೀಯರ್ ಗಳು ನೀವೇನು ಮಾಡುತ್ತಿದ್ದಿರಿ ಎಂದು ಇಂಜಿನೀಯರ್‌ಗಳನ್ನು ತರಾಟೆಗೆ ತೆಗೆದುಕೊಂಡರು.

# ಮೋದಿ ವಿರುದ್ಧ ಟೀಕೆ ನಿಲ್ಲಿಸಿ: ಬಿಜೆಪಿ ಎಚ್ಚರಿಕೆ

**ಬೆಂಗಳೂರು, ಮೇ.13–** ಆಪರೇಷನ್ ಸಿಂಧೂರ್ 2025 ಕಾರ್ಯಾಚರಣೆ 1971ರ ಸಾಂಪ್ರದಾಯಿಕ ಯುದ್ಧಕ್ಕಿಂತ ಸಂಪೂರ್ಣವಾಗಿ ಭಿನ್ನವಾಗಿದೆ, ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ಪಕ್ಷವು ಸುಖಾ ಸುಮ್ಮನೆ ಟೀಕೆ ಮಾಡುವುದನ್ನು ನಿಲ್ಲಿಸಬೇಕು ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಹೇಳಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ದಿವಂಗತ ಪ್ರಧಾನಿ ಇಂದಿರಾ ಗಾಂಧಿಯವರೊಂದಿಗೆ ಹೋಲಿಸುವ ಮೂಲಕ ಅವರನ್ನು ಕೆಟ್ಟದಾಗಿ ತೋರಿಸಲು ಕಾಂಗ್ರೆಸ್ ನಾಯಕರು ಮಾಡುತ್ತಿರುವ ಪ್ರಯತ್ನಗಳು, ಆರೋಪಗಳು ಸಂಪೂರ್ಣವಾಗಿ ಅರ್ಥಹೀನವಾಗಿವೆ. ಪ್ರಧಾನಿ ವಿರುದ್ಧದ ಆರೋಪಗಳು ನ್ಯಾಯ ಸಮ್ಮತವಲ್ಲ ಮತ್ತು ಇದು ಈಗ ಅಪ್ರಸ್ತುತ ಕೇಂದ್ರ.

ಈ ಹಿಂದೆ 1971 ಡಿಸೆಂಬರ್ ನಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿ ನೇತೃತ್ವದಲ್ಲಿ ಭಾರತವು ಪಾಕಿಸ್ತಾನದ ಪೂರ್ಣ ಪ್ರಮಾಣದ ಸಾಂಪ್ರದಾಯಿಕ ಯುದ್ಧವನ್ನು ನಡೆಸಿತ್ತು ಮತ್ತು ಅದು ಭಾರತ ವಿಜಯಶಾಲಿಯಾಗಿತ್ತು. ನಮ್ಮ ಸೇನೆಯು ಈ ಕಾರ್ಯಾಚರಣೆ ನಡೆಸುವುದರಲ್ಲಿ ನಿರ್ದಿಷ್ಟ ಉದ್ದೇಶ ಮತ್ತು ಗುರಿ ಹೊಂದಿದೆ ಪಾಕ್ ಭಯೋತ್ಪಾದಕರನ್ನು ಮತ್ತು ಅವರ ಅಡಗುತಾಣಗಳನ್ನು, ಅವರು ನಡೆಸುತ್ತಿರುವ ಶಿಬಿರಗಳನ್ನು ಸಂಪೂರ್ಣ ನಿರ್ಮೂಲನೆ ಮಾಡುವ ಪಾತ್ರದಲ್ಲಿ ಮಾತ್ರ ಆಪರೇಷನ್ ಸಿಂಧೂರ ಸೀಮಿತವಾಗಿದೆ. "ಇದು ಪೂರ್ಣ ಪ್ರಮಾಣದ ಸಾಂಪ್ರದಾಯಿಕ ಯುದ್ಧವಾಗಿ, ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ನಾಯಕತ್ವದಲ್ಲಿ ಭಾರತವು ಪೂರ್ಣ ಪ್ರಮಾಣದ ಯುದ್ಧವನ್ನು ಮಾಡಿ ಗೆಲ್ಲುತ್ತೇವೆ. ಅದರ ಬಗ್ಗೆ ಯಾರಿಗೂ, ಯಾವುದೇ ಸಂದೇಹವಿಲ್ಲ ಮತ್ತು ಸಂಶಯವಿಲ್ಲ ಎಂ ರವಿಕುಮಾರ್ ಹೇಳಿದ್ದಾರೆ.

ಆಪರೇಷನ್ ಸಿಂಧೂರ್ ನಲ್ಲಿ ನಮ್ಮ ಮೂರು ಸೇನೆಯು ಬಹಳ ಯಶಸ್ಸು ಕಂಡಿದೆ. ಪಾಕ್ ನ ಸುಮಾರು ಒಂಬತ್ತು ಭಯೋತ್ಪಾದಕರ ಶಿಬಿರಗಳನ್ನು ಸಂಪೂರ್ಣವಾಗಿ ನಾಶಪಡಿಸಲಾಗಿದೆ. ಸುಮಾರು 100ಕ್ಕೂ ಹೆಚ್ಚು ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ. ಜೊತೆಗೆ ಹೇಡಿ ಪಾಕಿಸ್ತಾನದ ನಿರ್ಣಾಯಕ ವಾಯುಪಡೆಯ ರಕ್ಷಣಾ ವ್ಯವಸ್ಥೆಗಳನ್ನು ನಾಶಪಡಿಸಲಾಗಿದೆ. ಈ ಹೇಡಿ ಪಾಕಿಸ್ತಾನವು



ಕದನ ವಿರಾಮಕ್ಕಾಗಿ ಬೇರೆ ಬೇರೆ ದೇಶಗಳ ಮುಂದೆ ದಯನೀಯವಾಗಿ ಪರಿಯಾಗಿ ಬೇಡಿಕೊಳ್ಳುವಂತೆ ಮಾಡೋಣ ನಮ್ಮ ಭಾರತೀಯ ಸೇನೆಯು ಹೆಗ್ಗಳಿಕೆ ಸಾಧಿಸಿದೆ. ಯಾವುದೇ ಸಂದರ್ಭದಲ್ಲಿ ಈ ಒಂದು ಯುದ್ಧವನ್ನು ನೋಡಿದರೂ, ಇದು ಭಾರತದ ಕಡಿಮೆ ಸಾಧನೆಯಲ್ಲ. ನಮ್ಮ ಭಾರತೀಯ ರಕ್ಷಣಾ ಪಡೆಗಳು ನಡೆಸಿದ ನಿಖರವಾದ, ನಿರ್ದಿಷ್ಟವಾದ ಆಪರೇಷನ್ ಆಗಿದೆ. ಈ ಕಾರ್ಯಾಚರಣೆಯನ್ನು ನಾವು ಕೇವಲ ಮೂರು ದಿನಗಳಲ್ಲಿ ಸಂಭವಿಸಿದೆ ಎಂದರು.

# ಅತ್ಯಾಧುನಿಕ ತಂತ್ರಜ್ಞಾನ ಆಧಾರಿತ ಸ್ಮಾರ್ಟ್ ಎಲೆಕ್ಟ್ರಾನಿಕ್ ಟಿಕೆಟ್ ಯಂತ್ರ ಅಳವಡಿಸಲು ಟೆಂಡರ್ ಆಹ್ವಾನ

**ಬೆಂಗಳೂರು, ಮೇ.13–** ಎಲ್ಲವೂ ಅಂದುಕೊಂಡಂತಾದರೆ ಮುಂದಿನ 5 ತಿಂಗಳಲ್ಲಿ ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡ್ಗಳು ಮಾತ್ರವಲ್ಲ; 'ನಮ್ಮ ಮೆಟ್ರೋ ಕಾರ್ಡ್'ಗಳನ್ನೂ ತೋರಿಸಿ 'ನಮ್ಮ ಬಿಎಂಟಿಸಿ' ಬಸ್‌ಗಳಲ್ಲಿ ಪ್ರಯಾಣಿಸಬಹುದು. ನಗದು ರಹಿತ ಟಿಕೆಟ್ ವ್ಯವಸ್ಥೆ ಜಾರಿಯ ಭಾಗವಾಗಿ ಸುಮಾರು 10 ಸಾವಿರ ಅತ್ಯಾಧುನಿಕ ತಂತ್ರಜ್ಞಾನ ಆಧಾರಿತ ಸ್ಮಾರ್ಟ್ ಎಲೆಕ್ಟ್ರಾನಿಕ್ ಟಿಕೆಟ್ ಯಂತ್ರ (ಇಟಿಎಂ)ಗಳನ್ನು ಅಳವಡಿಸಿಕೊಳ್ಳಲು ಬಿಎಂಟಿಸಿ ಮುಂದಾಗಿದ್ದು, ಈ ಸಂಬಂಧ ಟೆಂಡರ್ ಆಹ್ವಾನಿಸಿದೆ. ಹಲವು ಕಂಪನಿಗಳು ಇದರಲ್ಲಿ ಭಾಗವಹಿಸಿದ್ದು, ಮಂಗಳವಾರ ಟೆಂಡರ್ ಕೊನೆಗೊಳ್ಳಲಿದೆ. ಟೆಂಡರ್ ಪ್ರಕ್ರಿಯೆ ಮುಗಿಯುತ್ತಿದ್ದಂತೆ ಇಟಿಎಂಗಳ ತಯಾರಿಕೆ ಮತ್ತು ಪೂರೈಕೆ ಪ್ರಕ್ರಿಯೆ ಶುರುವಾಗಲಿದೆ. ಬರುವ ಅಕ್ಟೋಬರ್–ನವೆಂಬರ್ ವೇಳೆಗೆ ಈ ಯಂತ್ರಗಳು ಬಸ್ ನಿರ್ವಾಹಕರ ಕೈಸೇರಲಿವೆ. ಈಗಾಗಲೇ ಈ ವ್ಯವಸ್ಥೆಯನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಜಾರಿಗೊಳಿಸಿದೆ.

ಬಿಎಂಟಿಸಿಯಲ್ಲಿ ಕೂಡ ಈಗಾಗಲೇ ಸ್ಟಾಟಿಕ್ ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ ಟಿಕೆಟ್ ಪಾವತಿಸಿ ಪ್ರಯಾಣಿ ಸುವ ವ್ಯವಸ್ಥೆಯನ್ನು ಜಾರಿಗೊಳಿಸಿದೆ. ಈ ವ್ಯವಸ್ಥೆಯಲ್ಲಿ ಯಾವುದೇ ಕೆಡಿಟ್ ಅಥವಾ ಡೆಬಿಟ್ ಕಾರ್ಡ್‌ಗಳನ್ನು ಬಳಸಿ ಟಿಕೆಟ್ ನೀಡುವ ವ್ಯವಸ್ಥೆ ಇಲ್ಲ. ಈ ಹಿನ್ನೆಲೆಯಲ್ಲಿ ಇದೇ ಮೊದಲ ಬಾರಿಗೆ ಬಿಎಂಟಿಸಿ ಆಯಂಡ್ರಾಯ್ಡ್ ಸೌಲಭ್ಯದ ವಿದ್ಯುನ್ಮಾನ ಟಿಕೆಟ್ ಯಂತ್ರ (ಗಳನ್ನು ನೀಡಲಾಗುತ್ತಿದ್ದು, ಇದಕ್ಕೆ ಗೂಗಲ್ ಪೇ, ಫೋನ್ ಪೇ, ಭೀಮ್‌ನಂತಹ ಯುಪಿಐ ಡೈನಮಿಕ್ ಕ್ಯೂ ಆರ್ ಕೋಡ್ ವ್ಯವಸ್ಥೆ ಜತೆಗೆ ಮೆಟ್ರೋ ಕಾರ್ಡ್, ಡೆಬಿಟ್, ಕ್ರೆಡಿಟ್, ವೀಸಾ, ಕೇಂದ್ರ ಸೇರಿದಂತೆ ಎಲ್ಲ ಬಗೆಯ ಕಾರ್ಡ್ಗಳಿಂದ ಟಿಕೆಟ್ ಪಡೆಯಬಹುದು. ವಿಶೇಷವೆಂದರೆ ಟಿಕೆಟ್ ವೇಗವಾಗಿ ಮುದ್ರಣವಾಗುತ್ತದೆ. ಟಚ್ ಸ್ಕ್ರೀನ್ ಮತ್ತು ವೇಗದ ಪ್ರಕ್ರಿಯೆ ವ್ಯವಸ್ಥೆಗಳನ್ನು ಈ ಸ್ಮಾರ್ಟ್ ಇಟಿಎಂ ಹೊಂದಿರಲಿದ್ದು, ಡೈನಮಿಕ್ ಕ್ಯೂ ಆರ್ ಕೋಡ್ ಆಧಾರಿತ ಪಾವತಿ ಸುಲಭವಾಗಿ ಟಿಕೆಟ್ ನೀಡುವುದಕ್ಕೆ ಅನುಕೂಲವಾಗಲಿದೆ. ಈ ಟೆಂಡರ್‌ನಲ್ಲಿ ಹಲವು ಕಂಪನಿಗಳು ಭಾಗವಹಿಸಿದ್ದು, ಯಾರು ಕಡಿಮೆ ದರದಲ್ಲಿ ಯಂತ್ರ ನೀಡಲು ಮುಂದಾಗುವ ಕಂಪನಿ ಬಳಿ ಸ್ಮಾರ್ಟ್ ಇಟಿಎಂ ಯಂತ್ರವನ್ನು ಪಡೆಯಲಾಗುವುದು. ಬಾಡಿಗೆ ಆಧಾರದಲ್ಲಿ ಈ ಯಂತ್ರಗಳ ಸೇವೆ ಇರಲಿದೆ ಎಂದು ಬಿಎಂಟಿಸಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದರು.

# ಶೆಲ್ ದಾಳಿಗೆ ಒಳಗಾದ ಜನರ ಪುನರ್ವಸತಿಗಾಗಿ ಪ್ರಧಾನಿ ಪ್ಯಾಕೇಜ್‌ಗೆ ಜಮ್ಮು-ಕಾಶ್ಮೀರ ಕಾಂಗ್ರೆಸ್ ಮುಖ್ಯಸ್ಥರ ಒತ್ತಾಯ



**ಜಮ್ಮು, ಮೇ 13:** ಜಮ್ಮು ಮತ್ತು ಕಾಶ್ಮೀರ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ತಾರಿಕ್ ಹಮೀದ್ ಕರ್ರಾ ಮಂಗಳವಾರ ಪ್ರಧಾನಿಯವರು ಸಂತ್ರಸ್ತ ಜನಸಂಖ್ಯೆಯ ಪರಿಹಾರ ಮತ್ತು ಪುನರ್ವಸತಿಗಾಗಿ ವಿಶೇಷ ಸಮಗ್ರ ಪ್ಯಾಕೇಜ್ ಘೋಷಿಸಬೇಕು ಎಂದು ಹೇಳಿದ್ದಾರೆ.

ಪೂಂಚ್, ರಾಜೌರಿ ಮತ್ತು ಇತರೆಡೆಗಳಲ್ಲಿ ನಾಗರಿಕರನ್ನು ಗುರಿಯಾಗಿಸಿಕೊಂಡಿದ್ದಕ್ಕಾಗಿ ಪಾಕಿಸ್ತಾನವನ್ನು ಖಂಡಿಸಿದ ಕರ್ರಾ, ಜಾನುವಾರು ಮತ್ತು ಆಸ್ತಿಪಾಸ್ತಿಗಳಿಗೆ ಇತರ ನಷ್ಟಗಳನ್ನು ಅನುಭವಿಸುವುದರ ಜೊತೆಗೆ ಕೊಲ್ಲಲ್ಪಟ್ಟ ಅಥವಾ ಗಾಯ ಗೊಂಡವರ ಕುಟುಂಬಗಳೊಂದಿಗೆ ದುಃಖ ಮತ್ತು ದುಃಖವನ್ನು ಹಂಚಿಕೊಂಡರು.

ಕರ್ರಾ ಇತರ ನಾಯಕರೊಂದಿಗೆ ಪೂಂಚ್‌ನ ಮಂಡಿ ಪ್ರದೇಶದ ಬೈಲಾಗೆ ಭೇಟಿ ನೀಡಿ ಇಸ್ಲಾಮಿಕ್ ವಿದ್ವಾಂಸ ಖಾರಿ ಮೊಹಮ್ಮದ್ ಇಕ್ಬಾಲ್ ಅವರ ಕುಟುಂಬಕ್ಕೆ ಮತ್ತು ಬಂಡಿಚೆಚಿಯನ್ನಲ್ಲಿ ಶೆಲ್ ದಾಳಿಯಲ್ಲಿ ಹುತಾತ್ಮರಾದ ಇನ್ನೊಬ್ಬ ವ್ಯಕ್ತಿಗೆ ಸಂತಾಪ ಸೂಚಿಸಿದರು. ರಾಷ್ಟ್ರೀಯ ಮಾಧ್ಯಮದ ಒಂದು ಭಾಗವು ಹುತಾತ್ಮರನ್ನು ಭಯೋತ್ಪಾದಕ ಎಂದು ಹಣೆಪಟ್ಟಿ ಕಟ್ಟಿದ್ದಕ್ಕೆ ಕರ್ರಾ ವಿಷಾದ ವ್ಯಕ್ತಪಡಿಸಿದರು, ಇದು ಅತ್ಯಂತ ಖಂಡನೀಯ ಮತ್ತು ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಕಾಂಗ್ರೆಸ್ ನಾಯಕರು ಚಾಜ್ ಟ್ರೋಹ್‌ಗೆ ಭೇಟಿ ನೀಡಿ, ಅಲ್ಲಿ ಇಬ್ಬರು ಮಕ್ಕಳನ್ನು ಹುತಾತ್ಮರಾದ ನಂತರ ಸಮಾಧಿ ಮಾಡಲಾಯಿತು.

ಕ್ರೈಸ್ಟ್ ಶಾಲೆಯ ಬಳಿಯ ಡಂಗಾಸ್ನಲ್ಲಿ. ಕರ್ರಾ ಶ್ರೀ ಬುದ್ಧ ಅಮರನಾಥ ದೇವಸ್ಥಾನ ಮತ್ತು ಡೇರಾ ನಂಗಾಲಿ ಸಾಹಿಬ್‌ಗೆ ಭೇಟಿ ನೀಡಿ ಶಾಂತಿ, ಸಾಮರಸ್ಯ ಮತ್ತು ಸಹೋದರತ್ವಕ್ಕಾಗಿ ಪ್ರಾರ್ಥನೆ ಸಲ್ಲಿಸಿದರು. ನಂತರ ಅವರು ಬಾಗ್ಯಾಲ ಮಸೀದಿ ಜಿಯಾ ಉಲ್ ಅಲೂಮ್, ಪೂಂಚ್ ನಗರ, ಗೀತಾ ಭವನ, ಗುರುದಾವರಾ ಸಿಂಗ್ ಸಭಾ ಮೊಹಲ್ಲಾ, ಹುತಾತ್ಮ ಸುರ್ಜನ್ ಸಿಂಗ್ ಅವರ ಮನೆ ಮತ್ತು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಬಗ್ಗೆ ವಿಚಾರಿಸಿದರು. ಪೂಂಚ್ ಜಿಲ್ಲೆ ಇಡೀ ದೇಶದಲ್ಲಿ ಹೆಚ್ಚು ಹಾನಿಗೊಳಗಾಗಿದೆ ಎಂದು ಭಲ್ಲಾ ಹೇಳಿದರು ಮತ್ತು ಹೆಚ್ಚಿನ ಸಮುದಾಯ ಮತ್ತು ವೈಯಕ್ತಿಕ ಬಂಕರ್‌ಗಳ ನಿರ್ಮಾಣದ ಜೊತೆಗೆ ಪ್ಯಾರಾ ಮಿಲಿಟರಿ ಪಡೆಗಳಲ್ಲಿ ಗಡಿ ಯುವಕರಿಗೆ ವಿಶೇಷ ನೇಮಕಾತಿ ಪ್ಯಾಕೇಜ್ ಜೊತೆಗೆ ಜನರಿಗೆ ಪರಿಹಾರ ನೀಡಲು ಪ್ರಧಾನಿಯಿಂದ ವಿಶೇಷ ಕೇಂದ್ರ ಪ್ಯಾಕೇಜ್ ಅನ್ನು ಒತ್ತಾಯಿಸಿದರು. ಪಹಲ್ಗಾಮ್ ಹತ್ಯಾಕಾಂಡದಿಂದ ಮೂರನೇ ದೇಶದಿಂದ ಕದನ ವಿರಾಮ ಉಲ್ಲಂಘನೆಯವರೆಗಿನ ಪರಿಸ್ಥಿತಿಯ ವಿವರಗಳನ್ನು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನವನ್ನು ಆಯೋಜಿಸುವ ಸರ್ವಪಕ್ಷ ಸಭೆಯ ಅಧ್ಯಕ್ಷತೆ ವಹಿಸುವ ಕಾಂಗ್ರೆಸ್ ಬೇಡಿಕೆಯನ್ನು ಪ್ರಧಾನಿ ಒಪ್ಪಿಕೊಳ್ಳಬೇಕು ಎಂದು ಅವರು ಹೇಳಿದರು.



ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್ ಅವರು ಮಂಗಳವಾರ ಜಮ್ಮುವಿನ ಆಸ್ಪತ್ರೆಗೆ ಭೇಟಿ ನೀಡಿ ಪೂಂಚ್ ಪ್ರದೇಶದಲ್ಲಿ ಪಾಕಿಸ್ತಾನ ಶೆಲ್ ದಾಳಿಯಲ್ಲಿ ಗಾಯಗೊಂಡವರ ಯೋಗಕ್ಷೇಮವನ್ನು ವಿಚಾರಿಸಿದರು.

# ಪ್ರಧಾನಿ ಭಾಷಣ ನಿರಾಶಾದಾಯಕ: ಕಾಂಗ್ರೆಸ್



ನವದೆಹಲಿ, ಮೇ 13 : ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ರಾತ್ರಿ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣವನ್ನು "ತೀವ್ರ ನಿರಾಶಾದಾಯಕ" ಎಂದು ಕಾಂಗ್ರೆಸ್ ಮಂಗಳವಾರ ಬಣ್ಣಿಸಿದೆ ಮತ್ತು ದೇಶವು ಉತ್ತರಗಳಿಗಾಗಿ ಕಾಯುತ್ತಿದ್ದ ಅನೇಕ ವಿಷಯಗಳನ್ನು ಅವರು ಸ್ಪಷ್ಟಪಡಿಸಲಿಲ್ಲ ಎಂದು ಆರೋಪಿಸಿದೆ.

ಹಠಾತ್ ಕದನ ವಿರಾಮ ಮತ್ತು ಅಮೆರಿಕ ಅಧ್ಯಕ್ಷರು ಘೋಷಿಸಿದ ಕದನ ವಿರಾಮದಿಂದ ದೇಶಾದ್ಯಂತ ಆಘಾತ ಮತ್ತು ಆಶ್ಚರ್ಯ ಉಂಟಾಗಿದೆ ಎಂದು ಪಕ್ಷ ಆರೋಪಿಸಿದೆ. "ಸರ್ಕಾರವು ನೈತಿಕ ಧೈರ್ಯ ಮತ್ತು ನೈತಿಕ ಅಧಿಕಾರ ಎರಡನ್ನೂ ಕಳೆದುಕೊಂಡಿದೆ" ಎಂದು ಪಕ್ಷದ ಹಿರಿಯ ನಾಯಕ ಮತ್ತು ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಇಲ್ಲಿನ ಎಐಸಿಸಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು. ಅಮೆರಿಕ ಅಧ್ಯಕ್ಷರ ಹೇಳಿಕೆಗಳು ಗೊಂದಲಮಯ ಮತ್ತು ಅಪಾಯಕಾರಿ ಎಂದು ಹೇಳಿದ ಗೆಹ್ಲೋಟ್, "ಕಾಶ್ಮೀರ ಸಮಸ್ಯೆಯನ್ನು ಪರಿಹರಿಸುವಲ್ಲಿ ಮಧ್ಯಸ್ಥಿಕೆ ವಹಿಸುವಂತೆ ಸೂಚಿಸಿದ್ದಕ್ಕೆ" ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. (ಡೊನಾಲ್ಡ್) ಟ್ರಂಪ್ ಆ ಹೇಳಿಕೆಗಳನ್ನು ಸ್ವತಃ ಮಾಡುತ್ತಿದ್ದಾರೆಯೇ ಅಥವಾ ಅವರಿಗೆ ಭಾರತ ಸರ್ಕಾರದ ಒಪ್ಪಿಗೆ ಇದೆಯೇ ಎಂದು ಅವರು ಕೇಳಿದರು. ಎಲ್ಲವೂ ಚೆನ್ನಾಗಿ ನಡೆಯುತ್ತಿರುವಾಗ ಮತ್ತು ರಕ್ಷಣಾ ಪಡೆಗಳು ಮೇಲುಗೈ ಸಾಧಿಸಿ ಪಾಕಿಸ್ತಾನಿ ಪಡೆಗಳನ್ನು ಧೂಳಿಪಟ ಮಾಡುವಂತೆ ಮಾಡಿದಾಗ, ಇದ್ದಕ್ಕಿದ್ದಂತೆ ಕದನ ವಿರಾಮ ಘೋಷಿಸಲಾಯಿತು ಎಂಬುದನ್ನು ಪ್ರಧಾನಿ ರಾಷ್ಟ್ರದ ಮುಂದೆ ವಿವರಿಸಬೇಕು ಮತ್ತು ಸ್ಪಷ್ಟಪಡಿಸಬೇಕು ಎಂದು ಮಾಜಿ ರಾಜಸ್ಥಾನ ಮುಖ್ಯಮಂತ್ರಿ ಹೇಳಿದರು.

ಪಾಕಿಸ್ತಾನದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಸಂಪೂರ್ಣವಾಗಿ ನಾಶಮಾಡಲು ಒಂದು ಸುವರ್ಣ ಅವಕಾಶ ಕಳೆದುಹೋಗಿದೆ ಎಂದು ಅವರು ಹೇಳಿಕೊಂಡರು ಮತ್ತು ಪಹಲ್ಗಾಮ್ ಮತ್ತು ಪುಲ್ವಾಮಾದಂತಹ ಭಯೋತ್ಪಾದಕ ಕೃತ್ಯಗಳನ್ನು ಪಾಕಿಸ್ತಾನ ಮತ್ತೆ ಆಶ್ರಯಿಸುವುದಿಲ್ಲ ಎಂಬುದಕ್ಕೆ ಯಾವುದೇ ಗ್ಯಾರಂಟಿ ಇಲ್ಲ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪ್ರಧಾನಿಯವರು ರಾಷ್ಟ್ರವನ್ನುದ್ದೇಶಿಸಿ ಮಾತನಾಡುವ ಮೊದಲು ಮಾತನಾಡಿದ ಟ್ರಂಪ್ ಅವರನ್ನು ಮತ್ತು ಎರಡೂ ದೇಶಗಳು ಕದನ ವಿರಾಮಕ್ಕೆ ಹೋಗದಿದ್ದರೆ ವ್ಯಾಪಾರವನ್ನು ನಿಲ್ಲಿಸಲಾಗುವುದು ಎಂದು ಬೆದರಿಕೆ ಹಾಕಿದ್ದಕ್ಕಾಗಿ ಗೆಹ್ಲೋಟ್ ಟೀಕಿಸಿದರು.

ಭಯೋತ್ಪಾದನೆ ಮತ್ತು ಮಾತುಕತೆ ಮತ್ತು ರಕ್ತ ಮತ್ತು ನೀರು ಒಟ್ಟಿಗೆ ಹರಿಯಲು ಸಾಧ್ಯವಿಲ್ಲ ಎಂಬ ಪ್ರಧಾನಿಯವರ ಹೇಳಿಕೆಗಳ ಬಗ್ಗೆ ಮಾತನಾಡಿದ ಗೆಹ್ಲೋಟ್, ಪ್ರಧಾನಿಯವರು ಅಂತಹ ಹೇಳಿಕೆಗಳಿಗೆ ಹೆಸರುವಾಸಿಯಾಗಿದ್ದಾರೆ, ಆದರೆ ಅವರು ನಿನ್ನೆ ರಾತ್ರಿ ಹೇಳಿದ ದೊಡ್ಡ ವಿಷಯಗಳನ್ನು ಭವಿಷ್ಯದಲ್ಲಿ ಜಾರಿಗೆ ತರಲಾಗುತ್ತದೆಯೇ ಎಂಬುದು ವಾಸ್ತವವಾಗಿ ಮುಖ್ಯ ಎಂದು ಹೇಳಿದರು.

ಹಿರಿಯ ಕಾಂಗ್ರೆಸ್ ನಾಯಕರು ನಾಗರಿಕರ ವಿವಿಧ ಕಳವಳಗಳನ್ನು ಪರಿಹರಿಸಲು ಸರ್ವಪಕ್ಷ ಸಭೆ ಮತ್ತು ಸಂಸತ್ತಿನ ವಿಶೇಷ ಅಧಿವೇಶನಕ್ಕಾಗಿ ತಮ್ಮ ಪಕ್ಷದ ಬೇಡಿಕೆಯನ್ನು ಪುನರುಚ್ಚರಿಸಿದರು.

# ಆಪರೇಷನ್ ಸಿಂಧೂರ: 17 ಶಿಶುಗಳಿಗೆ ಸಿಂಧೂರ ಹೆಸರು ನಾಮಕರಣ ಉ.ಪ್ರ.ಕುಶೀನಗರದಲ್ಲಿ ಖುಷಿ



**ಲಖನೌ,ಮೇ 13:** ಭಾರತೀಯ ಸೇನೆ ನಡೆಸಿದ 'ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಯಶಸ್ಸಿನ ಹೆಮ್ಮೆಯಿಂದಾಗಿ ಉತ್ತರ ಪ್ರದೇಶದ ಕುಷಿನಗರದಲ್ಲಿ 17 ನವಜಾತ ಶಿಶುಗಳಿಗೆ 'ಸಿಂಧೂರ ಎಂದು ನಾಮಕರಣ ಮಾಡಿದ್ದಾರೆ. ಏ.22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ್ದರು. ಇದಕ್ಕೆ ಪ್ರತೀಕಾರವಾಗಿ ಮೇ 7ರಂದು ಭಾರತೀಯ ಸೇನೆ 'ಆಪರೇಷನ್ ಸಿಂಧೂರ ಕಾರ್ಯಾಚರಣೆ ಅಡಿಯಲ್ಲಿ ಪಾಕ್‌ನ 9 ಭಯೋತ್ಪಾದಕರ ನೆಲೆಗಳ ಮೇಲೆ ದಾಳಿ ನಡೆಸಿತು.

ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆದ ಎರಡು ದಿನಗಳ ಬಳಿಕ ಮೇ 9 ಮತ್ತು 10ರಂದು ಜನಿಸಿದ 17 ಮಕ್ಕಳಿಗೆ 'ಸಿಂಧೂರ ಎಂದು ಹೆಸರಿಟ್ಟಿದ್ದು, ಆಪರೇಷನ್ ಸಿಂಧೂರದ ಯಶಸ್ಸು ಭಾರತೀಯರ ಹೆಮ್ಮೆ ಎಂದು ತಿಳಿಸಿದ್ದಾರೆ. ಈ ಕುರಿತು ನವಜಾತ ಶಿಶುವಿನ ತಾಯಿ ನೇಹಾ ಗುಪ್ತಾ ಮಾತನಾಡಿ, ಉತ್ತರ ಪ್ರದೇಶದ ಪೂರ್ವ ಭಾಗದಲ್ಲಿ ಈ ರೀತಿ ಹೆಸರಿಡುವುದು ಹಿಂದೂ ಸಂಪ್ರದಾಯಕ್ಕೆ ವಿರುದ್ಧವಾಗಿದೆ. ಇಲ್ಲಿ ನವಜಾತ ಶಿಶುಗಳಿಗೆ ತಂದೆಯ ಚಿಕ್ಕಮ್ಮ ಹೆಸರಿಡುತ್ತಾರೆ. ಆದರೆ ಹೆಣ್ಣುಮಕ್ಕಳ ಸಂಕೇತ ಈ 'ಸಿಂಧೂರ ಈಗ ಒಗ್ಗಟ್ಟಿನ ಸಂಕೇತವಾಗಿದೆ.

ನಮ್ಮ ಸೈನಿಕರು ಪಹಲ್ಗಮ್ ದಾಳಿಗೆ ಪ್ರತೀಕಾರ ತೀರಿಸಿಕೊಂಡ ಎರಡು ದಿನಗಳ ನಂತರ, ಮೇ 9 ರಂದು ನನ್ನ ಮಗು ಜನಿಸಿತು. ಮೃತ ಕುಟುಂಬಸ್ಥರ ನೋವಿನ ಬಗ್ಗೆ ನನಗೆ ಕಾಳಜಿಯಿದೆ. ಆದರೆ ಇದಕ್ಕೆ ಸೇಡು ತೀರಿಸಿಕೊಂಡ ನಮ್ಮ ಗಡಿ ಕಾಯುವ ಸೈನಿಕರಿಗೂ ನಾನು ಧನ್ಯವಾದ ಹೇಳಲು ಬಯಸುತ್ತೇನೆ. ಹೀಗಾಗಿ ಅವರನ್ನು ಗೌರವಿಸುವ ಉದ್ದೇಶದಿಂದ ನನ್ನ ಮಗಳಿಗೆ 'ಸಿಂಧೂರ ಎಂದು ಹೆಸರಿಟ್ಟಿದ್ದೇನೆ ಎಂದು ತಿಳಿಸಿದರು.

ಕುಶಿನಗರದ ಸರ್ಕಾರಿ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ.ಆರ್. ಕೆ.ಶಾಹಿ ಮಾತನಾಡಿ, ಆಸ್ಪತ್ರೆಯಲ್ಲಿ ಜನಿಸಿದ 17 ಶಿಶುಗಳಿಗೆ 'ಸಿಂಧೂರ ಎಂದು ನಾಮಕರಣ ಮಾಡಿದ್ದಾರೆ. ಇದು ಜನರು ರಾಷ್ಟ್ರದ ಮೇಲಿನ ಪ್ರೀತಿ ಯನ್ನು ಯಾವ ರೀತಿ ತೋರಿಸುತ್ತಾರೆ ಎನ್ನುವುದನ್ನು ಪ್ರತಿಬಿಂಬಿಸುತ್ತದೆ. ಆಪರೇಷನ್ ಸಿಂಧೂರ ತ್ಯಾಗ ಮತ್ತು ರಾಷ್ಟ್ರೀಯ ಏಕತೆಯ ಸಂಕೇತ ವಾಗಿದೆ ಎಂದು ಸಂತಸ ವ್ಯಕ್ತಪಡಿ ಸಿದರು. ಸಾಮಾಜಿಕ ಕಾರ್ಯಕರ್ತ ರಾಜೇಶ್ ಮಣಿ ಮಾತನಾಡಿ, ಕುಶೀನಗರ ಮತ್ತು ಉತ್ತರ ಪ್ರದೇಶದ ಕೆಲವು ಜಿಲ್ಲೆಗಳ ಅನೇಕ ಕುಟುಂಬಗಳಲ್ಲಿ ಸೇನೆಯಲ್ಲಿ ಸೇವೆ ಸಲ್ಲಿಸಿದವರಿದ್ದಾರೆ. ನನ್ನ ಮಗುವಿನ ಜನನಕ್ಕೂ ಮುಂಚೆಯೇ 'ಸಿಂಧೂರ ಎಂಬುದು ಹೆಸರಾಗಿರಬೇಕು ಎಂದು ನಿರ್ಧರಿಸಿದ್ದೆ, ಇದು ಧೈರ್ಯವನ್ನು ಸೂಚಿಸುತ್ತದೆ ಎಂದು ಹೇಳಿದರು.

# ಜಮ್ಮು-ಕಾಶ್ಮೀರದ ಗಡಿಯೇತರ ಜಿಲ್ಲೆಗಳಲ್ಲಿ ಶಾಲೆಗಳು ಮತ್ತೆ ಆರಂಭ



**ಶ್ರೀನಗರ,ಮೇ 13:** ಭಾರತ ಹಾಗೂ ಪಾಕಿಸ್ತಾನ ಕದನ ವಿರಾಮ ಘೋಷಿಸಿದ ಬಳಿಕ ಇದೀಗ ಜಮ್ಮು ಮತ್ತು ಕಾಶ್ಮೀರದ ಗಡಿಯೇತರ ಜಿಲ್ಲೆಗಳಲ್ಲಿ ಶಾಲೆಗಳು ಪುನರಾರಂಭಗೊಂಡಿದ್ದು ಶ್ರೀನಗರ ಸಹಜ ಸ್ಥಿತಿಯತ್ತ ಮರಳುತ್ತಿದೆ.

ಏ.22ರಂದು ಪಹಲ್ಗಾಮ್‌ನಲ್ಲಿ ನಡೆದ ಹಿಂದೂಗಳ ನರಮೇಧದ ಬಳಿಕ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗಿತ್ತು. ಮೇ 7ರಂದು ಭಾರತೀಯ ಸೇನೆ 'ಆಪರೇಷನ್ ಸಿಂಧೂರ ಹೆಸರಿನಲ್ಲಿ ಪಾಕ್ನ 9 ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿ ಸೇಡು ತೀರಿಸಿಕೊಂಡಿತ್ತು. ಅದಾದ ಬಳಿಕ ಭಾರತ -ಪಾಕ್ ಯುದ್ಧ ಭೀತಿಯಿಂದಾಗಿ ಅಲ್ಲಿನ ಶಾಲೆಗಳನ್ನು ಬಂದ್ ಮಾಡಲಾಗಿತ್ತು.

ಈ ಕುರಿತು ಜಮ್ಮು ವಿಭಾಗೀಯ ಆಯುಕ್ತರು ಮಾತನಾಡಿ, ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಘೋಷಿಸಿದ ಬಳಿಕ ಗಡಿಯೇತರ ಜಿಲ್ಲೆಗಳಲ್ಲಿ ಶಾಲೆಗಳನ್ನು ಪುನರಾರಂಭಿಸಲಾಗುತ್ತಿದೆ. ಜಮ್ಮು, ಸಾಂಬಾ, ಕಥುವಾ, ರಾಜೌರಿ ಮತ್ತು ಪೂಂಚ್ ಜಿಲ್ಲೆಗಳನ್ನು ಗಡಿ ಜಿಲ್ಲೆಗಳೆಂದು ಗುರುತಿಸಲಾಗಿದ್ದು, ಈ ಜಿಲ್ಲೆಗಳಲ್ಲಿ ಶಾಲೆಗಳು ಸದ್ಯಕ್ಕೆ ಪುನರಾರಂಭಗೊಳ್ಳುವುದಿಲ್ಲ ಎಂದು ತಿಳಿಸಿದರು.

ಪ್ರಸ್ತುತ ಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ವೈದ್ಯಕೀಯ ಕಾಲೇಜುಗಳನ್ನು ಹೊರತುಪಡಿಸಿ, ಜಮ್ಮು ಪ್ರಾಂತ್ಯದ ಯಾವುದೇ ಸರ್ಕಾರಿ ಮತ್ತು ಖಾಸಗಿ ಶಾಲಾ-ಕಾಲೇಜುಗಳು, ಶಿಕ್ಷಣ ಸಂಸ್ಥೆಗಳು ಪುನರಾರಂಭಿಸಲಾಗುವುದಿಲ್ಲ ಎಂದರು. ಭಾರತ-ಪಾಕ್ ಉದ್ವಿಗ್ನತೆಯಿಂದಾಗಿ ಮುಚ್ಚಲ್ಪಟ್ಟಿದ್ದ ಕೆಲವು ವಿಮಾನ ನಿಲ್ದಾಣಗಳು ಕಾರ್ಯಾರಂಭಿಸಿದ್ದು, ಈಗಾಗಲೇ ಏರ್ ಇಂಡಿಯಾ ಜಮ್ಮು, ಶ್ರೀನಗರ, ಲೇಹ್, ಜೋಧಪುರ, ಅಮೃತಸರ, ಭುಜ್, ಜಾಮ್‌ನಗರ, ಚಂಡೀಗಢ ಮತ್ತು ರಾಜಕೋಟ್‌ಗಳಿಗೆ ವಿಮಾನಗಳನ್ನು ಪ್ರಾರಂಭಿಸುವತ್ತ ಕೆಲಸ ಮಾಡುತ್ತಿದೆ. ಸದ್ಯ ಎರಡು ದಿನಗಳಿಂದ ಯಾವುದೇ ದಾಳಿಯಾಗದ ಹಿನ್ನೆಲೆ ಶ್ರೀನಗರ ಸಹಜ ಸ್ಥಿತಿಗೆ ಮರಳುತ್ತಿದ್ದು, ಪ್ರಮುಖ ಪ್ರವಾಸಿ ಸ್ಥಳಗಳನ್ನು ಪುನರಾರಂಭಿಸಲಾಗುತ್ತಿದೆ. ಅಲ್ಲಲ್ಲಿ ಪ್ರವಾಸಿಗರು ಕಂಡು ಬರುತ್ತಿದ್ದು, ಸಾಮಾನ್ಯ ವ್ಯಾಪಾರ ವಹಿವಾಟು ಮತ್ತೆ ಆರಂಭಗೊಂಡಿದೆ.



ಜಮ್ಮು ಮತ್ತು ಕಾಶ್ಮೀರದ ಕುಪ್ವಾರಾ ಜಿಲ್ಲೆಯ ತಂಗ್ಧರ್‌ನಲ್ಲಿ ಮಂಗಳವಾರ ಶೆಲ್ ದಾಳಿ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಕುಟುಂಬಗಳನ್ನು ಭೇಟಿಯಾಗಿದ್ದರು.

# ಕಳ್ಳಭಟ್ಟಿ ಸೇವನೆ: 15 ಸಾವು, 10 ಜನರ ಪರಿಸ್ಥಿತಿ ಗಂಭೀರ



**ಅಮೃತಸರ, ಮೇ 13:** ಪಂಜಾಬ್‌ನ ಅಮೃತಸರದ ಮಜಿತಾ ಪ್ರದೇಶದ ಐದು ಹಳ್ಳಿಗಳಲ್ಲಿ ವಿಷಕಾರಿ ನಕಲಿ ಮದ್ಯ ಸೇವಿಸಿ 15 ಜನರು ಸಾವನ್ನಪ್ಪಿದ್ದಾರೆ ಮತ್ತು 10 ಜನರ ಸ್ಥಿತಿ ಗಂಭೀರವಾಗಿದೆ ಎಂದು ವರದಿಯಾಗಿದೆ. ಘಟನೆ ಸಂಬಂಧ ಪಂಜಾಬ್ ಪೊಲೀಸರು ಪ್ರಮುಖ ಮದ್ಯ ಸರಬರಾಜುದಾರ ಸೇರಿದಂತೆ ಆರು ಜನರನ್ನು ಬಂಧಿಸಿದ್ದಾರೆ. ನಕಲಿ ಮದ್ಯದ ಮೂಲದ ಬಗ್ಗೆ ತನಿಖೆ ನಡೆಯುತ್ತಿದೆ. ಗಂಭೀರ ಸ್ಥಿತಿಯಲ್ಲಿರುವವರನ್ನು ಅಮೃತಸರದ ಸಿವಿಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ವರದಿಗಳು ಹೇಳಿವೆ.

ಅಮೃತಸರದ ಭಂಗಲಿ, ಪಾತಾಳಪುರಿ, ಮರಾರಿ ಕಲಾನ್, ಥೆರೆವಾಲ್ ಮತ್ತು ತಲ್ವಾಂಡಿ ಘುಮಾನ್ ಗ್ರಾಮಗಳ ಯುವಕರು ಸಾವಿಗೀಡಾಗಿದ್ದಾರೆ. ಭುಲ್ಲರ್, ತಂಗ್ರಾ ಮತ್ತು ಸಂಧಾ ಗ್ರಾಮಗಳ ನಿವಾಸಿಗಳೂ ನಕಲಿ ಮದ್ಯ ಸೇವಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಈ ಗ್ರಾಮಗಳ ಅನೇಕ ಮಂದಿ ಅಸ್ವಸ್ಥರಾಗಿದ್ದಾರೆ. ಅಕ್ರಮ ಮದ್ಯ ವಿತರಣಾ ಜಾಲದ ಕಿಂಗ್ಪಿನ್ ಸಾಹಿಬ್ ಸಿಂಗ್ ಮತ್ತು ಮುಖ್ಯ ಪೂರೈಕೆದಾರ ಪ್ರಭ್ಜಿತ್ ಸಿಂಗ್, ಇತರ ಆರೋಪಿಗಳಾದ ಕುಲ್ಬೀರ್ ಸಿಂಗ್, ಗುರ್ಜಂತ್ ಸಿಂಗ್ ಮತ್ತು ನಿಂದರ್ ಕೌರ್ ಅನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸಾಹಿಬ್ ಸಿಂಗ್ ಅನ್ನು ಅಮೃತಸರದ ರಾಜಸಾನ್ಸಿ ಪ್ರದೇಶದಲ್ಲಿ ಬಂಧಿಸಲಾಗಿದೆ. ಶಂಕಿತ ಅಕ್ರಮ ಮದ್ಯ ಪೂರೈಕೆದಾರರನ್ನು ಬಂಧಿಸಲು ಪೊಲೀಸ್ ತಂಡಗಳು ಅಕ್ಕ ಪಕ್ಕದ ರಾಜ್ಯಗಳಿಗೂ ತೆರಳಿವೆ ಎಂದು ವರದಿಯಾಗಿದೆ. ಅಮೃತಸರ (ಗ್ರಾಮೀಣ) ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಮಣೀಂದರ್ ಸಿಂಗ್ ಮಾತನಾಡಿ, ?ನಿನ್ನೆ (ಸೋಮವಾರ) ರಾತ್ರಿ 9:30ರ ಸುಮಾರಿಗೆ ಗ್ರಾಮಗಳ ಜನರು ನಕಲಿ ಮದ್ಯ ಸೇವಿಸಿದ್ದಾರೆ. ನಂತರ ಕೆಲವರಲ್ಲಿ ವಿಷ ಸೇವಿಸಿದ ಲಕ್ಷಣಗಳು ಕಂಡು ಬಂದಿವೆ. ಹಲವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರಿಗೆ ಮಾಹಿತಿ ಬಂದಿತ್ತು. ಆರೋಪಿಗಳಿಗೆ ಯಾವ ಸಂಸ್ಥೆಗಳು ಮದ್ಯ ಪೂರೈಸಿವೆ ಎಂಬುದರ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಅಕ್ರಮ ಮದ್ಯ ಪೂರೈಕೆದಾರರು ಆನ್‌ಲೈನ್‌ಲ್ಲಿ ರಾಸಾಯನಿಕವನ್ನು ಆರ್ಡರ್ ಮಾಡಿದ್ದಾರೆ. ನಂತರ ಸ್ಥಳೀಯ ಪೂರೈಕೆದಾರರು ಅಕ್ರಮ ಮದ್ಯವನ್ನು ತಯಾರಿಸಿ ಪಾಕೆಟ್‌ಗಳಲ್ಲಿ ಹಾಕಿ ದಿನಗೂಲಿ ಕಾರ್ಮಿಕರಿಗೆ ಮಾರಾಟ ಮಾಡಿದ್ದಾರೆ. ಮುಖ್ಯ ಪೂರೈಕೆದಾರರನ್ನು ಬಂಧಿಸಲು ನಮ್ಮ ತಂಡಗಳು ಇತರ ರಾಜ್ಯಗಳಿಗೆ ತೆರಳಿವೆ. ಭಾರತೀಯ ನ್ಯಾಯ ಸಂಹಿತೆ ಮತ್ತು ಅಬಕಾರಿ ಕಾಯ್ದೆಯಡಿ ಎರಡು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಅವರು ಮಣೀಂದರ್ ಸಿಂಗ್ ತಿಳಿಸಿದ್ದಾರೆ. ಅಮೃತಸರದ ಉಪ ಆಯುಕ್ತ ಸಾಕ್ಷಿ ಸಾಹ್ನಿ ಆಸ್ಪತ್ರೆಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದ್ದಾರೆ. ಮಜಿತಾ ಪ್ರದೇಶದಲ್ಲಿ ಒಂದು ದುರದೃಷ್ಟಕರ ದುರಂತ ಸಂಭವಿಸಿದೆ. ನಿನ್ನೆ ರಾತ್ರಿ ಐದು ಹಳ್ಳಿಗಳಲ್ಲಿ ಅಕ್ರಮ ಮದ್ಯ ಸೇವಿಸಿ ಜನರು ಸಾವನ್ನಪ್ಪಿದ್ದಾರೆ. ಇನ್ನೂ ಹಲವರು ಗಂಭೀರ ಸ್ಥಿತಿಯಲ್ಲಿದ್ದಾರೆ ಎಂದು ನಮಗೆ ಮಾಹಿತಿ ಬಂದಿತ್ತು. ತಕ್ಷಣ ವೈದ್ಯಕೀಯ ತಂಡಗಳು ಸ್ಥಳಕ್ಕೆ ಧಾವಿಸಿದೆ. ಆ ತಂಡಗಳು ಇನ್ನೂ ಮನೆ ಮನೆಗೆ ತೆರಳಿ ಜನರಲ್ಲಿ ಏನಾದರು ಅಸ್ವಸ್ಥೆಯ ಲಕ್ಷಣಗಳು ಇದೆಯೇ ಎಂಬುದನ್ನು ಪರಿಶೀಲಿಸುತ್ತಿವೆ. ಅಸ್ವಸ್ಥಗೊಂಡವರನ್ನು ಉಳಿಸಲು ನಾವು ಆಸ್ಪತ್ರೆಗೆ ಕರೆದೊಯ್ಯುತ್ತಿದ್ದೇವೆ. ಸರ್ಕಾರ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುತ್ತಿದೆ, ಎಂದು ಸಾಹ್ನಿ ಹೇಳಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಮೃತರು ಭಾನುವಾರ ಸಂಜೆ ಒಂದೇ ಮೂಲದಿಂದ ಮದ್ಯ ಖರೀದಿಸಿದ್ದಾರೆ ಎಂದು ತಿಳಿದುಬಂದಿದೆ. ಅವರಲ್ಲಿ ಕೆಲವರು ಸೋಮವಾರ ಬೆಳಗ್ಗೆ ಸಾವನ್ನಪ್ಪಿದ್ದಾರೆ. ಸ್ಥಳೀಯರು ಈ ವಿಷಯವನ್ನು ಪೊಲೀಸರಿಗೆ ತಿಳಿಸದೆ ಅಂತ್ಯಸಂಸ್ಕಾರ ಮಾಡಿದ್ದಾರೆ. ತಡವಾಗಿ ಸಂಜೆ ನಮಗೆ ಮದ್ಯ ಸೇವಿಸಿ ಸಾವನ್ನಪ್ಪಿದ ಬಗ್ಗೆ ನಮಗೆ ಮಾಹಿತಿ ಸಿಕ್ಕಿತ್ತು. ಘಟನೆಯ ಕುರಿತು ತನಿಖೆ ಆರಂಭಿಸಲಾಗಿದೆ ಎಂದು ಮಜಿತಾ ಪೊಲೀಸ್ ಠಾಣೆಯ ಸ್ಟೇಷನ್ ಹೌಸ್ ಆಫೀಸರ್ ಅಬ್ತಾಬ್ ಸಿಂಗ್ ಹೇಳಿದ್ದಾರೆ. ಐದು ವರ್ಷಗಳ ಹಿಂದೆ ಪಂಜಾಬ್ನ ತರಣ್ ತರಣ್, ಅಮೃತಸರ ಮತ್ತು ಗುರುದಾಸ್ಪುರ ಜಿಲ್ಲೆಗಳಲ್ಲಿ ಇದೇ ರೀತಿಯ ಕಳ್ಳಭಟ್ಟಿ ದುರಂತ ಸಂಭವಿಸಿತ್ತು. ಆ ಘಟನೆಯಲ್ಲಿ ಸುಮಾರು 130 ಜನರು ಸಾವನ್ನಪ್ಪಿದ್ದರು ಮತ್ತು ಸುಮಾರು 10ಕ್ಕಿಂತ ಹೆಚ್ಚು ಜನರು ವಿಷಪೂರಿತ ಮದ್ಯ ಸೇವಿಸಿ ದೃಷ್ಟಿ ಕಳೆದುಕೊಂಡಿದ್ದರು. ಈ ದುರಂತ ಘಟನೆಯು ಪಂಜಾಬ್ನ ಗ್ರಾಮೀಣ ಭಾಗಗಳಲ್ಲಿ ನಕಲಿ ಮದ್ಯದ ಅನಿಯಂತ್ರಿತ ಪೂರೈಕೆಯ ಬಗ್ಗೆ ಮತ್ತೊಮ್ಮೆ ಕಳವಳ ಹುಟ್ಟುಹಾಕಿದೆ.

# ಪೊಲ್ಲಾಚಿ ಲೈಂಗಿಕ ದೌರ್ಜನ್ಯ ಪ್ರಕರಣ 9 ದೋಷಿಗಳಿಗೆ ಜೀವಾವಧಿ ಶಿಕ್ಷೆ



**ಚೆನ್ನೈ, ಮೇ 13:** ತಮಿಳುನಾಡಿನ ಪೊಲ್ಲಾಚಿ ಲೈಂಗಿಕ ದೌರ್ಜನ್ಯ ಪ್ರಕರಣದ ಬಹುನಿರೀಕ್ಷಿತ ತೀರ್ಪು ಬುಧವಾರ ಹೊರಬಿದ್ದಿದ್ದು, ಕೊಯಮತ್ತೂರಿನ ಮಹಿಳಾ ವಿಶೇಷ ನ್ಯಾಯಾಲಯವು ಎಲ್ಲಾ ಒಂಬತ್ತು ಆರೋಪಿಗಳನ್ನು ತಪ್ಪಿತಸ್ಥರೆಂದು ಘೋಷಿಸಿದೆ. ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ಪ್ರಕಟಿಸಲಾಗಿದೆ. ಗುಂಪೊಂದು ಮಹಿಳೆಯರನ್ನು ಹುಸಿ ಸ್ನೇಹದ ಆಮಿಷವೊಡ್ಡಿ ಲೈಂಗಿಕ ದೌರ್ಜನ್ಯ ಮತ್ತು ಬೆದರಿಕೆ ಮಾಡಿದ್ದ ಈ ಪ್ರಕರಣ 2019ರಲ್ಲಿ ಬೆಳಕಿಗೆ ಬಂದಿತ್ತು.

ನ್ಯಾಯಮೂರ್ತಿ ನಂದಿನಿ ದೇವಿ ನೇತೃತ್ವದ ಮಹಿಳಾ ಪೀಠವು, ಆರೋಪಿಗಳಾದ ತಿರುನಾವುಕರಸು, ಸಬರೀಶನ್, ವಸಂತ ಕುಮಾರ್, ಸತೀಶ್, ಮಣಿವಣ್ಣನ್, ಹರನ್ಪಾಲ್, ಬಾಬು, ಅರುಳನಂತಮ್ ಮತ್ತು ಅರುಣ್ ಕುಮಾರ್ ಅವರನ್ನು ಕಾನೂನಿನ ಬಹು ವಿಭಾಗಗಳ ಅಡಿಯಲ್ಲಿ ತಪ್ಪಿತಸ್ಥರೆಂದು ತೀರ್ಪು ನೀಡಿದ್ದಾರೆ.

ಸಂತ್ರಸ್ತರೊಬ್ಬರು ಕಳ್ಳತನದ ದೂರನ್ನು ದಾಖಲಿಸಿದ ನಂತರ ಈ ಪ್ರಕರಣ ಬೆಳಕಿಗೆ ಬಂದಿತ್ತು. ತನಿಖೆಯ ವೇಳೆ ಇದು ದೊಡ್ಡ ಸಂಘಟಿತ ಲೈಂಗಿಕ ದೌರ್ಜನ್ಯ ಎಂದು ತಿಳಿದುಬಂದಿತ್ತು. ಮಹಿಳೆಯರ ಮೇಲೆ ನಡೆದ ದೌರ್ಜನ್ಯದ ವೀಡಿಯೊಗಳು ವೈರಲ್ ಆದ ನಂತರ, ಆಗಿನ ಆಡಳಿತಾರೂಢ ಅಖಿಲ ಭಾರತ ಅಣ್ಣಾ ದ್ರಾವಿಡ ಮುನ್ನೇತ್ರ ಕಳಗಂ (ಎಐಎಡಿಎಂಕೆ) ವಿರುದ್ಧ ತಮಿಳುನಾಡಿನಾದ್ಯಂತ ಪ್ರತಿಭಟನೆಗಳು ನಡೆದಿದ್ದವು.

ಜೊತೆಗೆ, ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಮತ್ತು ಇತರ ವಿರೋಧ ಪಕ್ಷಗಳು ಈ ವಿಷಯದ ಬಗ್ಗೆ ಒಟ್ಟುಗೂಡಿ ಹೋರಾಟ ಮಾಡಿದ್ದರಿಂದ ರಾಜಕೀಯ ಚರ್ಚೆಯನ್ನೂ ಹುಟ್ಟುಹಾಕಿತ್ತು. ಪ್ರಕರಣವು ನ್ಯಾಯ ಮತ್ತು ಮಹಿಳಾ ಸುರಕ್ಷತೆಗಾಗಿ ವ್ಯವಸ್ಥಿತ ಸುಧಾರಣೆಯನ್ನು ಸರ್ಕಾರಕ್ಕೆ ಒತ್ತಾಯಿಸಿದ್ದವು.

ಆರಂಭದಲ್ಲಿ ಪ್ರಕರಣವನ್ನು ನಿರ್ವಹಿಸುತ್ತಿದ್ದ ಅಪರಾಧ ತನಿಖಾ ಇಲಾಖೆಯು ಸಾರ್ವಜನಿಕ ಒತ್ತಡದ ನಂತರ ಅದನ್ನು ಕೇಂದ್ರ ತನಿಖಾ ದಳಕ್ಕೆ ಹಸ್ತಾಂತರಿಸಿತ್ತು.

ವಿಚಾರಣೆಯ ಉದ್ದಕ್ಕೂ, ಸರ್ಕಾರಿ ವಕೀಲರು 50 ಕ್ಕೂ ಹೆಚ್ಚು ಸಾಕ್ಷಿಗಳು, 200ಕ್ಕೂ ಹೆಚ್ಚು ದಾಖಲೆಗಳು ಮತ್ತು 400 ಡಿಜಿಟಲ್ ಸಾಕ್ಷ್ಯಗಳನ್ನು ಹಾಜರುಪಡಿಸಿದ್ದರು. ಎಂಟು ಸಂತ್ರಸ್ತರು ಸಾಕ್ಷ್ಯ ಹೇಳಲು ನ್ಯಾಯಾಲಯದ ಮುಂದೆ ಹಾಜರಾಗಿದ್ದರು ಮತ್ತು ಆರೋಪಿಗಳು 50 ಪ್ರಶ್ನೆಗಳಿಗೆ ಲಿಖಿತವಾಗಿ ಪ್ರತಿಕ್ರಿಯಿಸಿದ್ದರು.

# ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆ ಫಲಿತಾಂಶ ಪ್ರಕಟ



**ನವದೆಹಲಿ, ಮೇ 13:** ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ (ಸಿಬಿಎಸ್‌ಇ) 10ನೇ ತರಗತಿ ಪರೀಕ್ಷೆ ಫಲಿತಾಂಶ ಪ್ರಕಟಿಸಿದೆ. ಶೇ 93.60ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಳೆದ ವರ್ಷಕ್ಕೆ ಹೋಲಿಸಿದರೆ ಉತ್ತೀರ್ಣ ಮಟ್ಟ ಶೇ 0.06ರಷ್ಟು ಏರಿಕೆಯಾಗಿದೆ. ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದು, ಶೇ 95ರಷ್ಟು ಹೆಣ್ಣು ಮಕ್ಕಳು ಪಾಸಾಗಿದ್ದಾರೆ.ತಿರುವನಂತಪುರ ಶೇ 99.79 ರಷ್ಟು ಫಲಿತಾಂಶ ಪಡೆದು ಮೊದಲ ಸ್ಥಾನ ಗಳಿಸಿದ್ದು, ವಿಜಯವಾಡ ಕೂಡ ಶೇ 99.79 ಫಲಿತಾಂಶ ಪಡೆದು ಎರಡನೇ ಸ್ಥಾನದಲ್ಲಿದೆ. ಶೇ 98.90 ರಷ್ಟು ಫಲಿತಾಂಶ ಪಡೆದು ಬೆಂಗಳೂರು ಮೂರನೇ ಸ್ಥಾನ ಗಳಿಸಿದೆ. ಉಳಿದಂತೆ ಚೆನ್ನೈ, ಪುಣೆ, ಅಜ್ಮೀರ್ ಸೇರಿದಂತೆ ಹಲವು ನಗರಗಳು ನಂತರದ ಸ್ಥಾನದಲ್ಲಿವೆ.

**ಪ್ರದೇಶವಾರು ಫಲಿತಾಂಶ**

| | | |
|---|---|---|
| 1 | ತಿರುವನಂತಪುರ | -99.79 |
| 2 | ವಿಜಯವಾಡ | 99.79 |
| 3 | ಬೆಂಗಳೂರು | 98.90 |
| 4 | ಚೆನ್ನೈ | 98.71 |
| 5 | ಪುಣೆ | 96.54 |
| 6 | ಅಜ್ಮೀರ್ | 95.44 |
| 7 | ದೆಹಲಿ ಪಶ್ಚಿಮ | 95.24 |
| 8 | ದೆಹಲಿ ಪೂರ್ವ | 95.07 |
| 9 | ಚಂಡೀಗಢ | 93.71 |
| 10 | ಪಂಚಕುಲ | 92.77 |

# ಆಂಧ್ರ, ತೆಲಂಗಾಣ, ಕೇಂದ್ರದ ಸಿಡಬ್ಲ್ಯೂ ಒಪ್ಪಿಗೆ: ತುಂಗಭದ್ರಾ ಆಣೆಕಟ್ಟೆಯ ಎಲ್ಲ 33 ಗೇಟ್ ಬದಲಿಸಲು ಟೆಂಡರ್

## ಬೆಳೆಗೆ ನೀರು ಸಿಗುವುದೇ ಎಂಬ ಆತಂಕದಲ್ಲಿ ರೈತರಲ್ಲಿ

**ಅನುದಾನ ಕೊರತೆ ನಡುವೆಯೇ ತುಂಗಭದ್ರಾ ಜಲಾಶಯದ ಗೇಟುಗಳ ಬದಲಾವಣೆ ಕಾಮಗಾರಿ ಕೈಗೆತ್ತಿಕೊಳ್ಳುವ ಸಾಹಸ ಟಿಬಿ ಮಂಡಳಿ ಮಾಡಿದೆ. ಬೇಸಿಗೆ ಅವಧಿ ಹಿನ್ನೆಲೆಯಲ್ಲಿ ಕೆಲಸ ಮಾಡಲು ಇದೇ ಸೂಕ್ತ ಕಾಲ. 19ನೇ ಕ್ರಸ್ಟ್‌ಗೇಟ್ ಕಾಮಗಾರಿ ಮುಗಿಸಲು ಎರಡು ತಿಂಗಳು ಡೆಡ್‌ಲೈನ್ ನೀಡಲಾಗಿದೆ. ಉಳಿದ 32 ಗೇಟ್ ಸಂದರ್ಭಕ್ಕನುಸಾರ ಕೈಗೊಳ್ಳಲು ನಿರ್ಧರಿಸಲಾಗಿದೆ. ಆದರೆ, ಇದರ ನಡುವೆ ಜಲಾಶಯ ನೆಚ್ಚಿಕೊಂಡು ಕರ್ನಾಟಕ, ಆಂಧ್ರ, ತೆಲಂಗಾಣ ಸೇರಿ 15 ಲಕ್ಷ ಹೆಕ್ಟೇರ್‌ಗೂ ಅಧಿಕ ಪ್ರದೇಶದಲ್ಲಿ ಭತ್ತ ಬೆಳೆಯಲಾಗುತ್ತದೆ. ಗೇಟುಗಳ ಬದಲಾವಣೆ ಕೆಲಸ ಕೈಗೊಳ್ಳುವುದರಿಂದ ಈ ಬಾರಿ ನೀರು ಸಿಗಲಿದೆಯೋ, ಇಲ್ಲವೋ ಎನ್ನುವ ಪ್ರಶ್ನೆ ರೈತರಲ್ಲಿ ಕಾಡತೊಡಗಿದೆ.**



**ರಾಯಚೂರು, ಮೇ.13–** ಕರ್ನಾಟಕದ ರಾಯಚೂರು, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳೂ ಸೇರಿದಂತೆ ನೆರೆಯ ತಎಲಂಗಾಣ ಮತ್ತು ಆಂಧ್ರ ಪ್ರದೇಶದ ಸುಮಾರು 20 ಲಕ್ಷ ಎಕರೆ ಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ತುಂಗಭದ್ರಾ ಜಲಾಶಯ ಮೂರೂ ರಾಜ್ಯಗಳ ರೈತರ ಜೀವನಾಡಿಯಾಗಿದೆ. ಕಳೆದ 2024ರ ಆಗಸ್ಟ್ 10ರಂದು ದಿಢೀರ್ ಕೊಚ್ಚಿ ಹೋಗಿದ್ದ ತುಂಗಭದ್ರಾ ಜಲಾಶಯದ 19ನೇ ಕ್ರಸ್ಟ್‌ಗೇಟ್ ಮುರಿದು ರೈತರು ಕಂಗಾಲಾಗುವಂತೆ ಮಾಡಿತ್ತು. ಇದೀಗ 19ನೇ ಕ್ರಸ್ಟ್ ಗೇಟ್ ಸಹಿತ ಅಣೆಕಟ್ಟೆಯ ಎಲ್ಲ 33 ಗೇಟ್ ಬದಲಾಯಿಸಿ ಹೊಸದಾಗಿ ಅಳವಡಿಕೆಗೆ ಟೆಂಡರ್ ಪ್ರಕ್ರಿಯೆ ಅಂತಿಮಗೊಂಡಿದ್ದು, ಆಂಧ್ರ, ತೆಲಂಗಾಣ ಸಹಿತ ಕೇಂದ್ರ ಸರ್ಕಾರದ ಒಪ್ಪಿಗೆ ಬಾಕಿ ಇದೆ.

ತುಂಗಭದ್ರಾ ಮಂಡಳಿಯಲ್ಲಿ ಎಲ್ಲ 33 ಕ್ರಸ್ಟ್‌ಗೇಟ್ ಮರು ಅಳವಡಿಕೆಗೆ ಬೇಕಿರುವ ಅಗತ್ಯ ಅನುದಾನ ಲಭ್ಯವಿಲ್ಲದೇ ಇದ್ದರೂ, ಆದ್ಯತಾನುಸಾರ ಈ ಕ್ರಸ್ಟ್ ಗೇಟ್‌ಗಳ ಬದಲಾವಣೆಗೆ 53.80 ಕೋಟಿ ರೂ.ಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ. ಕೊಚ್ಚಿ ಹೋಗಿದ್ದ 19ನೇ ಕ್ರಸ್ಟ್‌ಗೇಟ್ ಮರು ಅಳವಡಿಕೆಗೆ ಪ್ರತ್ಯೇಕ 1.80 ಕೋಟಿ ರೂ. ಹಂಚಿಕೆಯಾಗಿದ್ದು, ಒಂದು ವಾರದ ಹಿಂದೆಯೇ ಗುಜರಾತ್ ಮೂಲದ ಹಾರ್ಡ್‌ವೇರ್ಸ್ ಟೂಲ್ಸ್ ಆ್ಯಂಡ್ ಮಷಿನರಿ ಪ್ರಾಜೆಕ್ಟ್ ಲಿ. ಕಂಪನಿಗೆ ಟೆಂಡರ್ ಹಂಚಿಕೆಯಾಗಿದೆ.

ಗೇಟ್ ಮೂಲ ವಿನ್ಯಾಸ ಸೇರಿ ಇತರೆ ತಾಂತ್ರಿಕ ಒಪ್ಪಿಗೆಗಾಗಿ ಆಂಧ್ರ, ತೆಲಂಗಾಣ ಮತ್ತು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ.

ಅನುಮೋದನೆ ಸಿಗುವ ಭರವಸೆ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಅಳವಡಿಕೆ ಮಾಡಲಾಗಿದ್ದ ಸ್ಟಾಪ್‌ಲಾಗ್ ಗೇಟ್ ತೆರವು ಮಾಡಿ ಗೇಟು ಮರು ನಿರ್ಮಾಣಕ್ಕೆ ಬೇಕಿದ್ದ ಪೂರಕ ಪ್ರಾಥಮಿಕ ಕಾಮಗಾರಿಗಳು ಈಗಾಗಲೇ ಆರಂಭಗೊಂಡಿವೆ.

ಜಲಾಶಯದ ಉಳಿದ 32 ಗೇಟ್ ಬದಲಾಯಿಸಿ ಹೊಸದಾಗಿ ಅಳವಡಿಕೆಗೂ ಟಿಬಿ ಬೋರ್ಡ್ ಅಧಿಕಾರಿಗಳು 52 ಕೋಟಿ ರೂ. ಕ್ರಿಯಾ ಯೋಜನೆ ಸಿದ್ಧಪಡಿಸಿ ಟೆಂಡರ್ ಕರೆಯಲಾಗಿತ್ತು. ಮೇ 12ರಂದು ಟೆಕ್ನಿಕಲ್ ಬಿಡ್ ಓಪನ್ ಆಗಿದ್ದು, ಐದಕ್ಕೂ ಹೆಚ್ಚು ಕಂಪನಿ ಟೆಂಡರ್‌ನಲ್ಲಿ ಭಾಗವಹಿಸಿವೆ. ಯಾವ ಕಂಪನಿಗೆ ಕೆಲಸ ಹಂಚಿಕೆ ಮಾಡಬೇಕು ಎನ್ನುವ ನೆಗೋಷಿಯೇಷನ್ ನಡೆಯಬೇಕಿದೆ. ಎಲ್ಲ ಗೇಟುಗಳ ಬದಲಾವಣೆಗೆ ಕ್ರಿಯಾಯೋಜನೆ ತುಂಗಭದ್ರಾ ಜಲಾಶಯದ 19ನೇ ಕ್ರಸ್ಟ್‌ಗೇಟ್ ಕೊಚ್ಚಿ ಹೋದ ಬಳಿಕ ಜಲಾಶಯದ ಎಲ್ಲ ಗೇಟ್ ಬದಲಾವಣೆ ಮಾಡಬೇಕು ಎಂದು ಜಲಾಶಯ ತಜ್ಞ ಕನ್ಹಯಾ ನಾಯ್ಡು ಹೇಳಿದ್ದರು. ಅದರ ಹಿನ್ನೆಲೆಯಲ್ಲಿ ಜಲಾಶಯದ ಎಲ್ಲ ಗೇಟುಗಳ ಬದಲಾವಣೆಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ. ಆದರೆ, ಎಲ್ಲ ಗೇಟ್ ಬದಲಾವಣೆಗೆ ಬೇಕಿರುವ ಅನುದಾನ ಸದ್ಯ ಟಿಬಿ ಬೋರ್ಡ್‌ನಲ್ಲಿ ಲಭ್ಯವಿಲ್ಲ. ಅಂತಾರಾಜ್ಯ ಯೋಜನೆಯಾಗಿದ್ದರಿಂದ ಕರ್ನಾಟಕ, ಆಂಧ್ರ ಮತ್ತು ತೆಲಂಗಾಣ ರಾಜ್ಯಗಳು ಹಣಕಾಸಿನ ನೆರವು ನೀಡಬೇಕು. ಕರ್ನಾಟಕ ಶೇ. 45ರಷ್ಟು ಆಂಧ್ರ ಮತ್ತು ತೆಲಂಗಾಣ ಸೇರಿ ಶೇ. 55ರಷ್ಟು ಹಣಕಾಸಿನ ನೆರವು ನೀಡಬೇಕಿದೆ. ಅನುದಾನ ಹಂಚಿಕೆ ಕುರಿತು ಪತ್ರ ವ್ಯವಹಾರಗಳು ನಡೆದಿದ್ದು ಇದುವರೆಗೂ ಒಪ್ಪಿಗೆ ಸಿಕ್ಕಿಲ್ಲ.

## ನಬಾರ್ಡ್ ಮೂಲಕ ತೋಟಗಾರಿಕೆ ಬೆಳೆಗಾರರಿಗೆ ನೆರವು

# ಕೋಲ್ಡ್ ಸ್ಟೋರೇಜ್, ವೇರ್‌ಹೌಸ್ ನಿರ್ಮಿಸಲು ಪ್ರಿಯಾಂಕ್ ಖರ್ಗೆ ಸಲಹೆ

**ಕಲಬುರಗಿ, ಮೇ.13–** ರೈತರು ಬೆಳೆಯುವ ತೋಟಗಾರಿಕೆ ಬೆಳೆಗಳನ್ನು ಮತ್ತು ಕೃಷಿ ಉತ್ಪನ್ನಗಳನ್ನು ಶೇಖರಿಸಲು ನಬಾರ್ಡ್–ವಿಶ್ವ ಬ್ಯಾಂಕ್ ನೆರವು ಪಡೆದು ಕೋಲ್ಡ್ ಸ್ಟೋರೇಜ್, ವೇರ್ ಹೌಸ್ ನಿರ್ಮಿಸಬೇಕು ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ನಬಾರ್ಡ್ ಮತ್ತು ವಿಶ್ವ ಬ್ಯಾಂಕ್ ನಲ್ಲಿ ಸಾಕಷ್ಟು ಅನುದಾನ ಲಭ್ಯವಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದರು.

ತೋಟಗಾರಿಕೆ ಉಪನಿರ್ದೇಶಕ ಸಂತೋಷ ಇನಾಂದಾರ ಮಾತನಾಡಿ, ಜೇವರ್ಗಿಯಲ್ಲಿ ಮೆಣಸಿನಕಾಯಿ ಶೇಖರಣೆಗೆ 7.50 ಕೋಟಿ ರೂ. ವೆಚ್ಚದಲ್ಲಿ 5,000 ಮೆಟ್ರಿಕ್ ಟನ್ ಸಾಮರ್ಥ್ಯದ ಕೋಲ್ಡ್ ಸ್ಟೋರೇಜ್ ತೆರೆಯಲು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದೆ ಎಂದು ಸಭೆಗೆ ಮಾಹಿತಿ ನೀಡಿದರು.ಕಲಬುರಗಿ ರೊಟ್ಟಿಗೆ ಬೇಡಿಕೆ ಹೆಚ್ಚುತ್ತಿರುವುದರಿಂದ ಸಂಸ್ಕರಣೆ, ಮಾರುಕಟ್ಟೆ ಸರಿಯಾಗಿ ಒದಗಿಸಿದಲ್ಲಿ ಸಿರಿಧಾನ್ಯದ ರೊಟ್ಟಿ ತಯಾರಿಸುವ ಮಹಿಳೆಯರು ಇನ್ನು ಹೆಚ್ಚು ಆರ್ಥಿಕ ಲಾಭ ಪಡೆಯ ಬಹುದಾಗಿದೆ. ಭೌಗೋಳಿಕ ಸೂಚ್ಯಂಕ ಹೊಂದಿರುವ, ತೊಗರಿ, ಭೀಮಾ ಪಲ್ಸ್, ಕೆಂಬಾಳೆಗೂ ಮಾರುಕಟ್ಟೆ ಕಲ್ಪಿಸಿ ರೈತರಿಗೆ ನೆರವಾಗಬೇಕು. ಸಮಾಜ ಕಲ್ಯಾಣ ಇಲಾಖೆ ಚರ್ಚೆ ವೇಳೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಅಲ್ಲಾಭಕ್ಷ ಅವರು ಮಾತನಾಡಿ, ಪ್ರಧಾನಮಂತ್ರಿ ಆದರ್ಶ ಗ್ರಾಮ ಯೋಜನೆಯಡಿ ಶಾಲೆ, ಅಂಗನವಾಡಿ, ಆರೋಗ್ಯ ಕೇಂದ್ರ ದುರಸ್ತಿ, ರಸ್ತೆ–ಚರಂಡಿ ನಿರ್ಮಾಣದಂತಹ ಕಾರ್ಯಕ್ರಮಗಳು ಹಾಕಿಕೊಳ್ಳುತ್ತಿದ್ದು, ಕಳೆದ 2024–25ನೇ ಸಾಲಿಗೆ ಜಿಲ್ಲೆಯ 11 ಗ್ರಾಮ ಆಯ್ಕೆ ಮಾಡಿದೆ ಎಂದರು.



ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ ತಮ್ಮ ಕ್ಷೇತ್ರದ ಪಾಣೆಗಾಂವ, ಕೆರಿಭೋಸಗಾ ಗ್ರಾಮದಲ್ಲಿ ಅಪೂರ್ಣ ಕಾಮಗಾರಿಗಳಾಗಿದ್ದು, ಬಾಕಿ ಕೆಲಸ ಕೂಡಲೆ ಗಮನಹರಿಸಿ ಪೂರ್ಣಗೊಳಿಸಬೇಕು. ಕಲಬುರಗಿ ಹೊರ ವರ್ತುಲ ರಸ್ತೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ರಾಷ್ಟ್ರೀಯ ಹೆದ್ದಾರಿ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಇಬ್ರಾಹಿಂ ಮಾತನಾಡಿ, ಹಿಂದೆ ಕಳುಹಿಸಿದ ಪ್ರಸ್ತಾವನೆ ಕೇಂದ್ರ ತಿರಸ್ಕರಿಸಿದೆ. ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಕೂಡಲೇ ಜಮೀನು ಭೂಸ್ವಾಧೀನಕ್ಕೆ ಬೇಕಾದ ಮೊತ್ತದ ಕುರಿತು ಅಧ್ಯಯನ ಮಾಡಿ. ರೈತರ ಜೊತೆಗೂ ಚರ್ಚಿಸಿ. ವಾಡಿ, ಹೀರಾಪುರ ಆರ್.ಓ.ಬಿ ಕಾಮಗಾರಿಗಳು ನೆನೆಗುದ್ದಿಗೆ ಬಿದ್ದಿದ್ದು, ಕೂಡಲೆ ಇದಕ್ಕೆ ಚಾಲನೆ ನೀಡಿ ಪೂರ್ಣಗೊಳಿಸಬೇಕು. ಇನ್ನು ರೈಲ್ವೆ ಬ್ರಿಡ್ಜ್ ನಿರ್ಮಾಣದ ಜೊತೆಗೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಸಹ ಆದ್ಯತೆ ಮೇಲೆ ಮಾಡಬೇಕು. ಪ್ರಕೃತಿ ವಿಕೋಪ ಕಾಮಗಾರಿಗಳು ಬಾಕಿ ಉಳಿಸಿದ್ದು, ಅದನ್ನು ಸಹ ಪೂರ್ಣಗೊಳಿಸಿ ಎಂದು ಅಧಿಕಾರಿಗಳಿಗೆ ಜಿಲ್ಲಾ ಸಚಿವರು ಸೂಚಿಸಿದಲ್ಲದೆ ಕೇಂದ್ರ ಪುರಸ್ಕೃತ ಯೋಜನೆಯಲ್ಲಿ ರಾಜ್ಯದ ಪಾಲು ಇರುವುದರಿಂದ ಶಾಸಕರ ಗಮನಕ್ಕೆ ತಂದು ಗುದ್ದಲಿ ಪೂಜೆ ನೆರವೇರಿಸಿ ಕೆಲಸ ಅರಂಭಿಸಬೇಕು ಸೂಚನೆ ನೀಡಿದರು.

**ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಿ:** ಕಲಬುರಗಿ ರಿಂಗ್ ರಸ್ತೆಯ ಖರ್ಗೆ ಪೆಟ್ರೋಲ್ ಪಂಪ್–ಹುಮನಾಬಾದ ರಸ್ತೆ ಮಧ್ಯದಲ್ಲಿ ಸರ್ವಿಸ್ ರಸ್ತೆ ಕಾಮಗಾರಿ ನಿಧಾನಗತಿಯಿಂದ ರಸ್ತೆ ಅಪಘಾತಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಇದನ್ನು ತಪ್ಪಿಸಲು ರಸ್ತೆ ಕೆಲಸ ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತ ಮಾಡಬೇಕೆಂದು ರೇಷ್ಮೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಹಾಗೂ ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತಿಮಾ ಹೇಳಿದರು.

## ವಿಶ್ವ ದಾದಿಯರ ದಿನಾಚರಣೆ

# ದಾದಿಯರು ಆಸ್ಪತ್ರೆಗಳ ಬೆನ್ನೆಲುಬು: ಶಶಿಲ್ ನಮೋಶಿ

**ಕಲಬುರಗಿ, ಮೇ.13–** ದಾದಿಯರು ಆಸ್ಪತ್ರೆಗಳ ಬೆನ್ನೆಲುಬು. ವೈದ್ಯರಷ್ಟೇ ಜವಾಬ್ದಾರಿಯಿಂದ ಅನಂತರದ ರೋಗಿಗಳ ಸೇವೆ ಮಾಡುವ ಮೂಲಕ ದದಿಯರು ರೋಗಿಗಳ ಸೇವೆ ಮಾಡುವರು ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಶಶಿಲ್ ನಮೋಶಿ ಹೇಳಿದರು.

ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೆಯ ದಾದಿಯರ ನೇತೃತ್ವದಲ್ಲಿ ನಡೆದ ವಿಶ್ವ ದಾದಿಯರ ದಿನಾಚರಣೆ ಮುಖ್ಯ ಅತಿಥಿಗಳಾಗಿ ಚಿಕಿತ್ಸೆಗಾಗಿ ಬಂದ ರೋಗಿಗಳನ್ನು ದಾದಿಯರು ನಗು ಮುಖದಿಂದ ಸ್ವಾಗತಿಸಿದಾಗಲೇ ರೋಗಿಗಳ ಅರ್ಧ ಕಾಯಿಲೆ ಗುಣ ಆಗಿರುತ್ತದೆ ಮತ್ತು ಅವರು ರೋಗಿಗಳೊಂದಿಗೆ ಆತ್ಮೀಯ ವಾಗಿ ಒಡನಾಡಿ ಮಾನಸಿಕವಾಗಿ ಧೈರ್ಯ ತುಂಬುವ ಕೆಲಸ ಮಾಡು ತ್ತಾರೆ. ನರ್ಸಿಂಗ್ ವೃತ್ತಿ ಎಷ್ಟು ಪ್ರಾಮುಖ್ಯವಾದುದು ಎಂಬುದನ್ನು ಫ್ಲಾರೆನ್ಸ್ ನೈಟಿಂಗೇಲ್ ತೋರಿಸಿಕೊಟ್ಟಿದ್ದಾರೆ. ಶುಷ್ರೂಷಕರು ತಮ್ಮ ಕೆಲಸವನ್ನು ಬೇಸರ ಮಾಡಿಕೊಳ್ಳದೆ, ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ಮಾಡಿದರೆ ವೃತ್ತಿಯಲ್ಲಿ ಮೇಲೆ ಬರಲು ಸಾಧ್ಯವೆಂದು ಕಿವಿಮಾತು ಹೇಳಿದರು



**ಕಲಬುರಗಿ ನಗರದ ಬಸವೇಶ್ವರ ಬೋಧನಾ ಮತ್ತು ಸಾರ್ವಜನಿಕ ಆಸ್ಪತ್ರೆಯಲ್ಲಿ ಆಯೋಜಿಸಿದ ವಿಶ್ವ ದಾದಿಯರ ದಿನಚರಣೆಯನ್ನು ಹೈದರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಶಶಿಲ್ ನಮೋಶಿ ಅವರು ಉದ್ಘಾಟಿಸಿದರು.**

ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷರಾದ ರಾಜಾ ಭಿ ಭೀಮಳ್ಳಿ ಮಾತನಾಡಿ ಎಲ್ಲರೂ ಕೆಲಸ ಮಾಡುತ್ತಾರೆ. ಆದರೆ, ತಮ್ಮ ಕೆಲಸದ ಮೂಲಕ ಗುರುತಿಸಿಕೊಳ್ಳುವುದು ಬಹಳ ಮುಖ್ಯ. ದಾದಿಯರ ವೃತ್ತಿಗೆ ವಿಶೇಷ ಸ್ಥಾನಮಾನ ಇದೆ. ನಾವು ಯಾವುದೇ ಕೆಲಸ ಮಾಡಿದರೂ ಅದನ್ನು ದಾಖಲಿಸಬೇಕು. ಅದು ಮುಂದಕ್ಕೆ ಪ್ರಯೋಜನಕ್ಕೆ ಬರುತ್ತದೆ ಎಂದರು

ರೋಗಿಗಳ ಪಾಲಿನ ನರ್ಸ್‌ಗಳು ಸಂಜೀವಿನಿಗಳು. ಪರಿಸರ, ಗಾಳಿ, ನೈರ್ಮಲ್ಯಕ್ಕೆ ಎಷ್ಟು ಪ್ರಾಮುಖ್ಯ ಕೊಡಬೇಕು ಎಂದು ಫ್ಲಾರೆನ್ಸ್ ನೈಟಿಂಗೇಲ್ ಅಂದೇ ತಿಳಿಸಿದ್ದರು. ನರ್ಸಿಂಗ್ ಈಗ ಬರೀ ಸೇವೆ ಆಗಿರದೆ ವೃತ್ತಿ ಆಗಿದೆ. ಒಂದು ಆಸ್ಪತ್ರೆ ಚೆನ್ನಾಗಿದೆ ಎಂದರೆ, ಅಲ್ಲಿ ಕೆಲಸ ಮಾಡುವ ದಾದಿಯರು ಮುಖ್ಯ ಕಾರಣ ಆಗುತ್ತಾರೆ ಎಂದರು.

# ಪ್ರಾಣಿ-ಪಕ್ಷಿಗಳಿಗಾಗಿ ಕಾಳು, ನೀರಿನ ಬಟ್ಟಲು, ತೊಟ್ಟಿಗಳ ವಿತರಣೆ



**ಬಳ್ಳಾರಿ ಮೇ.13–** ನಿಮಗಾಗಿ ನಾವು ಸಂಸ್ಥೆಯ ವತಿಯಿಂದ ಬಿಸಿಲಿನ ಬೇಗೆಯನ್ನು ಅನುಭವಿಸುತ್ತಿರುವ ಪ್ರಾಣಿ–ಪಕ್ಷಿಗಳ ನೆರವಿಗಾಗಿ "ನಮ್ಮ ಸಹಜೀವಿಗಳು" ಯೋಜನೆ ರೂಪಿಸಿಕೊಂಡು., ಕಾಳು ನೀರಿನ ಬಟ್ಟಲು ಮತ್ತು ತೊಟ್ಟಿಗಳನ್ನು ಆಸಕ್ತ ಸಾರ್ವಜನಿಕರಿಗೆ ಸರ್ಕಾರಿ ಶಾಲೆ ಆವರಣ ಎ.ಆರ್.ಪಿ ಲೈನ್ ಶಾಲೆ ಬಳ್ಳಾರಿಯಲ್ಲಿ ವಿತರಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ವಿನಯಕುಮಾರ್ ರವರು ಮಾತಾಡಿ ಬಿಸಿಲಿನ ತಾಪಕ್ಕೆ ಮೂಕ ಜೀವಿಗಳಿಗೆ ತೊಂದರೆಯಾಗುತ್ತಿದ್ದು., ನಮ್ಮ ಸಹಜೀವಿಗಳನ್ನು ಸಂರಕ್ಷಿಸುವ ಕೆಲಸ ಪ್ರತಿಯೊಬ್ಬರಿಂದಲೂ ಆಗಬೇಕು ಎಂದು ತಿಳಿಸಿದರು. ಯೋಜನೆಯ ಕಾರ್ಯದರ್ಶಿ ನಾಗರಾಜ್ ಮಾತನಾಡಿ, ಈ ಬಟ್ಟಲು ಮತ್ತು ತೊಟ್ಟಿಗಳ ಉಚಿತ ವಿತರಣೆಯು ಮೇ ತಿಂಗಳು ಪೂರ್ತಿ ನಡೆಯಲಿದ್ದು., ಆಸಕ್ತರು ಸಂಸ್ಥೆಯ ಮೊಬೈಲ್ ಸಂಖ್ಯೆ 9448584400 ನ್ನು ಸಂಪರ್ಕಿಸಿ ಪಡೆಯಬಹುದೆಂದು ತಿಳಿಸಿದರು.

# ಎಂಎಲ್‌ಸಿ ಸತೀಶ್ ರೆಡ್ಡಿ ಅವರಿಗೆ ಪತ್ನಿ ವಿಯೋಗ

**ಬಳ್ಳಾರಿ, ಮೇ.3–** ವಿಧಾನ ಪರಿಷತ್ ಸದಸ್ಯರಾದ ವೈ.ಎಂ. ಸತೀಶ್ ಅವರ ಪತ್ನಿ ಪ್ರೀತಿ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ತೀವ್ರತರದ ಅನಾರೋಗ್ಯದಿಂದ ನಿಧನರಾಗಿದ್ದಾರೆ. ಅವರು ಪತಿ ವೈ ಎಂ ಸತೀಶ್ ರೆಡ್ಡಿ, ಪುತ್ರ ಪುತ್ರಿಯರು ಸೇರಿದಂತೆ ಅನೇಕ ಬಂಧು ಬಳಗವನ್ನು ಅಗಲಿದ್ದಾರೆ.



## ಕಬ್ಬಿನ ಹಣದ ಬಾಕಿ ರೈತರ ಖಾತೆಗೆ

# ಪ್ರತಿ ಟನ್‌ಗೆ 2700 ರೂಗಳಂತೆ ಜಮೆ ಮಾಡಲು ಡಿಸಿಗೆ ಮನವಿ



**ಬೀದರ ಜಿಲ್ಲೆ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರ ಬ್ಯಾಂಕ್ ಖಾತೆಗೆ ಜಹಣ ಜಮಾ ಮಾಡಲು ಕ್ರಮ ಕೈಕೊಳ್ಳುವಂತೆ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಜಿಲ್ಲಾಧಿಕಾರಿ ಮೂಲಕ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಿದರು.**

**ಬೀದರ್, ಮೇ.13–** ಜಿಲ್ಲೆಯ ರೈತರಿಗೆ ಹಲವಾರು ಸಮಸ್ಯೆಗಳಿದ್ದು, ಅದರಲ್ಲಿ ಪ್ರಮುಖವಾದಂತಹ ಸಕ್ಕರೆ ಕಾರ್ಖಾನೆಗಳಿಗೆ ರೈತರು ಸರಬರಾಜು ಮಾಡಿರುವ ಕಬ್ಬಿನ ಬಿಲ್ಲು ಪಾವತಿ ಮಾಡದ ಕಾರಣ ಕಳೆದ ಏಪ್ರಿಲ್ 19 ರಂದು ಜಿಲ್ಲಾಧಿಕಾರಿಗಳ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಮಾಡುವುದಾಗಿ ರೈತ ಸಂಘದ ವತಿಯಿಂದ ನಿರ್ಣಯ ಕೈಗೊಳ್ಳಲಾಗಿತ್ತು. ಆದರೆ ತಾವುಗಳು ಬರುವ ಮೇ ತಿಂಗಳಿನ ಮೊದಲನೇ ವಾರದಲ್ಲಿ ಕಾರ್ಖಾನೆಗೆ ಸರಬರಾಜು ಮಾಡಿರುವ ಎಲ್ಲಾ ರೈತರ ಕಬ್ಬಿನ ಬಿಲ್ಲು ಪಾವತಿ ಮಾಡಲಾಗುವುದು ಎಂದು ತಾವು ಆಶ್ವಾಸನೆ ನೀಡಿದ್ದೀರಿ. ಆದಕಾರಣ ತಮ್ಮ ಆಶ್ವಾಸನೆಯಂತೆ ನಾವುಗಳು ಜಿಲ್ಲಾಧಿಕಾರಿಗಳ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಹಿಂಪಡೆದಿರುತ್ತೇವೆ. ಆದರೆ ತಾವು ತಿಳಿಸಿರುವ ಪ್ರಕಾರ ತಿಂಗಳ ಮೊದಲನೇ ವಾರ ಮುಗಿದು ಎರಡನೇ ವಾರ ಮುಗಿದಿದೆ. ತಾವು ಕೊಟ್ಟ ಆಶ್ವಾಸನೆ ಉಳಿಸಿಕೊಂಡಿಲ್ಲ. ಅದಲ್ಲದೇ ಜಿಲ್ಲಾಧಿಕಾರಿಗಳ ಕಚೇರಿ ಯಲ್ಲಿ ತಮ್ಮ ನೇತೃತ್ವದ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ ರೂ. 2700/– ಕೊಡಬೇಕೆಂದು ನಿರ್ಣಯ ತೆಗೆದು ಕೊಂಡಿದ್ದೀರಿ. ಆದರೆ ಇಲ್ಲಿಯವರೆಗೆ ಯಾವ ಕಾರ್ಖಾನೆಯವರು ಕೂಡ ಪ್ರತಿ ಟನ್‌ಗೆ ರೂ. 2700 ಪಾವತಿ ಮಾಡಿರುವುದಿಲ್ಲ. ಆದಕಾರಣ ತಾವುಗಳು ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿರುವ ಎಲ್ಲಾ ರೈತರ ಖಾತೆಗೆ ಪ್ರತಿ ಟನ್ ಕಬ್ಬಿಗೆ ರೂ. 2700 ರಂತೆ ಮೇ ತಿಂಗಳು ಮುಗಿಯುವವರೆಗೆ ಜಮೆ ಮಾಡಬೇಕು. ಇಲ್ಲದಿದ್ದಲ್ಲಿ ಮುಂಬ ರುವ ದಿನಗಳಲ್ಲಿ ತಮ್ಮನ್ನು ಘೆರಾವ್ ಹಾಕಿ, ಪ್ರತಿಭಟನೆ ಮಾಡಲಾಗುವುದು. ಮುಂದಾಗುವ ಯಾವುದೇ ಅಹಿತಕರ ಘಟನೆಗಳಿಗೆ ತಾವೇ ಜವಾಬ್ದಾರರು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಬೀದರ ಜಿಲ್ಲಾ ಘಟಕದ ವತಿಯಿಂದ ಇಂದು ಜಿಲ್ಲಾಧಿಕಾರಿಗಳ ಮುಖಾಂತರ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಲಾಯಿತು.

# ಜಗತ್ತಿನ ಶಾಂತಿ, ಸಮಾನತೆಗೆ ಬುದ್ಧನ ಸಂದೇಶವೇ ಸ್ಫೂರ್ತಿ: ಖಂಡ್ರೆ



**ಬೀದರ್, ಮೇ.13–** ಜಗತ್ತಿಗೆ ಶಾಂತಿ, ಸಮಾನತೆ, ಸರಳತೆಯ ಸಂದೇಶ ನೀಡಿದರು ಗೌತಮಬುದ್ಧರು ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಭಗವಾನ್ ಬುದ್ಧ ಜಯಂತ್ಯುತ್ಸವ ಅಂಗವಾಗಿ ಭಗವಾನ್ ಬುದ್ಧ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿ, ಸಮಾಜದಲ್ಲಿ ಮೌಢ್ಯ, ಅಸಮಾನತೆ, ದೌರ್ಜನ್ಯ ಮುಂತಾದ ಅನೇಕ ಅನಿಷ್ಟ ಪದ್ಧತಿಗಳು ಆಚರಣೆಯಲ್ಲಿದ್ದವು . ಇಂತಹವುಗಳ ವಿರುದ್ಧವಾಗಿ ಸಮಾಜದಲ್ಲಿ ಶಾಂತಿ, ಸಹಬಾಳ್ವೆ, ಸಮಾನತೆ, ಪ್ರೀತಿ ವಿಶ್ವಾಸಗಳನ್ನು ಮೂಡಿಸಿದರು ಬುದ್ಧ. ರಾಜಮನೆತನದಲ್ಲಿ ಹುಟ್ಟಿದರು ಕೂಡ ಸರ್ವವೂ ತ್ಯಾಗ ಮಾಡಿ, ಬೋಧಿವೃಕ್ಷದ ಕೆಳಗೆ ತಪಸ್ಸು ಮಾಡಿ ಜ್ಞಾನವನ್ನು ಪಡೆದರು. ದೇಶದ ಹಲವೆಡೆ ಸಂಚಾರ ಕೈಗೊಂಡು ತಮ್ಮ ತತ್ವಗಳನ್ನು ಬೋಧಿಸಿದರು. ಜಗತ್ತಿನಲ್ಲಿ ಏನೇ ಅನಾಹುತ ಆಗಲು ಆಸೆಯೇ ಕಾರಣ, ಆಸೆ ದುಃಖಕ್ಕೆ ಮೂಲ ಕಾರಣವಾಗಿದೆ, ಆಸೆ ಬಿಡುವುದರಿಂದ ದುಃಖ ಕಡಿಮೆಯಾಗುತ್ತದೆ ಹಾಗೂ ಆಸೆ ಹೋಗಬೇಕೆಂದರೆ ಅಷ್ಟಾಂಗ ಮಾರ್ಗ ಪಾಲನೆ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಗೌತಮಬುದ್ಧರ ಭಾವಚಿತ್ರದ ರಥ ಮೆರವಣಿಗೆಗೆ ಸಚಿವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಸೇರಿದಂತೆ ಇತರರು ಉಪಸ್ಥಿತರಿದ್ದರು. ರಥ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳ ಮೂಲಕ ಹಾದು ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ ತಲುಪಿತು. ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಿತು, ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ಉದ್ಘಾಟಿಸಿ ಮಾತನಾಡಿ, ಭಗವಾನ್ ಬುದ್ಧರು ಸಮಾಜದಲ್ಲಿ ಮಾನವೀಯತೆ, ಸಮಾನತೆ, ಸಹಬಾಳ್ವೆಯಿಂದ ಜನರು ಬದುಕಲು ಮಾರ್ಗ ಹಾಕಿಕೊಟ್ಟಿದ್ದಾರೆ. ನಾವೆಲ್ಲರೂ ಸರಳತೆಯ ಜೀವನವನ್ನು ಅನುಸರಿಸಬೇಕು ಮತ್ತು ಪ್ರೀತಿ ವಿಶ್ವಾಸದಿಂದ ಕೂಡಿ ಬಾಳಬೇಕು. ಬುದ್ಧ, ಬಸವ ಮಾರ್ಗದಲ್ಲಿ ನಡೆದು ಉತ್ತಮವಾದ ಸಮಾಜವನ್ನು ಕಟ್ಟಬೇಕು ಎಂದು ತಿಳಿಸಿದರು. ನಿವೃತ್ತ ಪ್ರಾಂಶುಪಾಲರು ಹಾಗೂ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ವಿಠಲದಾಸ ಪ್ಯಾಗೆ ಅವರು ಅತಿಥಿ ಉಪನ್ಯಾಸದಲ್ಲಿ ಮಾತನಾಡಿ ಬುದ್ಧರ ಜೀವನ ಹಾಗೂ ಬೌದ್ಧ ಧರ್ಮದ ಬಗ್ಗೆ ತಿಳಿಸಿದರು.

# ದೇಶ ರಕ್ಷಣೆಗೆ ಮಂತ್ರಾಲಯದಲ್ಲಿ ಆಯುಷ್ಯ ಹೋಮ

**ಮಂತ್ರಾಲಯ, ಮೇ. 13:** ದೇಶದಲ್ಲಿ ನಡೆಯುತ್ತಿರುವ ಭಾರತ–ಪಾಕ್ ಯುದ್ಧದ ಕಾರ್ಮೋಡ ತೊಲಗಿ, ಯುದ್ಧದಲ್ಲಿ ಭಾರತೀಯ ಸೈನಿಕರು ಮತ್ತು ಭಾರತದ ನಾಗರಿಕರ ರಕ್ಷಣೆಗಾಗಿ, ಯೋಗಕ್ಷೇಮಕ್ಕಾಗಿ ದೈವಿಕ ಆಶೀರ್ವಾದ ಕೋರಿ ಶ್ರೀಮಠದ ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಾನದಲ್ಲಿ ಮೃತ್ಯುಂಜಯ, ಆಯುಷ್ಯ, ಮಾರ್ಕಂಡೇಯ ಹೋಮಗಳನ್ನು ನಡೆಸಲಾಯಿತು.

ಶ್ರೀಮಠದ ಪೀಠಾಧಿಪತಿಗಳಾದ ಶ್ರೀ ಸುಬುಧೇಂದ್ರ ತೀರ್ಥರ ನೇತೃತ್ವದಲ್ಲಿ ನಡೆದ ಈ ಎಲ್ಲ ಧಾರ್ಮಿಕ ಕಾರ್ಯಗಳು, ರಾಷ್ಟ್ರೀಯ ಬಿಕ್ಕಟ್ಟು ಬೇಗ ಪರಿಹಾರವಾಗಲಿ ಎಂದು ಸಂಪ್ರದಾಯಿಕ ಮತ್ತು ಅಗತ್ಯ ಧಾರ್ಮಿಕ ಆಚರಣೆಗಳ ಹೊರತು ಯಾವುದೇ ಆಚರಣೆಗಳನ್ನು ನಡೆಸಲಾಗುವುದಿಲ್ಲ ಎಂದು ಶ್ರೀಮಠದ ಪೀಠಾಧಿಪತಿ ತಿಳಿಸಿದರು.



ವಾಸ್ತವದಲ್ಲಿ ನಮ್ಮ ಭಾರತೀಯ ಸನಾತನ ಧರ್ಮದ ಪ್ರಕಾರ ಹಿಂದಿನಿಂದಲೂ ನಡೆದುಕೊಂಡು ಬಂದಿರುವಂತೆ ರಾಜಮಹಾರಾಜರು ಯುದ್ಧಗಳನ್ನು ನಡೆಸುವುದಕ್ಕೆ ಮುಂಚೆ ಯಜ್ಞಯಾಗಾದಿಗಳನ್ನು ನಡೆಸಿದ ನಂತರವೇ ಆರಂಭವಾ ಗುತ್ತಿತ್ತು. ಹೀಗಾಗಿ ಎಲ್ಲ ಯುದ್ಧಗಳಲ್ಲಿ ಯಶಸ್ಸು ದೊರೆಯು ತ್ತಿತ್ತು. ಧರ್ಮ ಪರಿಪಾಲನೆ ರಾಜರುಗಳ ಕರ್ತವ್ಯ ವಾಗಿದ್ದರೆ, ರಾಜ್ಯದ ಮತ್ತು ಪ್ರಜೆಗಳ ಸುರಕ್ಷೆ ದೃಷ್ಟಿಯಿಂದ ಹೋಮ ಹವನಗಳನ್ನು ನಡೆಸುವುದು ಧರ್ಮ ಗುರುಗಳ ಕರ್ತವ್ಯವಾಗಿ ನಡೆದುಕೊಂಡು ಬಂದಿದೆ. ಇದನ್ನು ಯಾರೂ ಯರಿಗೂ ಹೇಳುವ ಅಗತ್ಯವಿಲ್ಲ. ಋಷಿ ಮುನಿಗಳು ಮತ್ತು ಯತಿಗಳು ಸದಾ ರಾಜ್ಯದ ಮತ್ತು ಪ್ರಜೆಗಳ ಕ್ಷೇಮವನ್ನು ಬಯಸುತ್ತ ಬಂದಿದ್ದು, ಈಗಿನ ಪ್ರಜಾ ಪ್ರಭುತ್ವದಲ್ಲೂ ಕೂಡ ಶ್ರೀಮಠವು ದೇಶದ ಮತ್ತು ಪ್ರಜೆಗಳ ಕ್ಷೇಮಕ್ಕಾಗಿ ಈ ಯಜ್ಞ ನಡೆಸುತ್ತಿದೆ ಎಂದು ಶ್ರೀಗಳು ತಿಳಿಸಿದರು.

# ಕರಿಬೇವು ಬೆಳೆದು ಆದಾಯ ಗಳಿಸಿದ ಇಂಜನಿಯರಿಂಗ್ ಪದವೀಧರ ರೈತ

**ಬೀದರ್, ಮೇ.13–** ಬೀದರ್ ತಾಲ್ಲೂಕಿನ ಮಲ್ಕಾಪುರ ಗ್ರಾಮದ ಸಿವಿಲ್ ಎಂಜಿನಿಯರಿಂಗ್ ಪದವೀಧರ ರವಿ ರೊದ್ದಾ ಅವರು, ಎಂಜಿನಿಯರಿಂಗ್ ವೃತ್ತಿಯನ್ನು ತೊರೆದು ಕರಿಬೇವು ಕೃಷಿ ಮಾಡಿ, ಯಶಸ್ವಿಯಾಗಿದ್ದಾರೆ.

ರವಿ ಅವರು ಸುಲ್ತಾನಪುರದಲ್ಲಿ ಪಾಳು ಬಿದ್ದಿದ್ದ ತಮ್ಮ ಒಂದೂವರೆ ಎಕರೆ ಜಮೀನನ್ನು ಕೃಷಿ ಯೋಗ್ಯವಾಗಿಸಿ, 2023ರ ಆಗಸ್ಟ್‌ನಲ್ಲಿ 8,400 ಕರಿಬೇವು ಸಸಿಗಳನ್ನು ನಾಟಿ ಮಾಡಿದ್ದಾರೆ. ಹನಿ ನೀರಾವರಿ ಪದ್ಧತಿ ಅಳವಡಿಸಿ, ಕೊಳವೆಬಾವಿಯಿಂದ ನೀರುಣಿಸಿದ್ದಾರೆ. ಒಂಬತ್ತು ತಿಂಗಳಲ್ಲಿ ಬಂಪರ್ ಬೆಳೆ ಬಂದಿದೆ.2024ರ ಮೇ ನಲ್ಲಿ ಬೆಳೆಯ ಮೊದಲ ಕಟಾವು ಆಗಿದ್ದು, ಅಂದಿನಿಂದ ನಿತ್ಯ ಬೀದರ್ ಮಾರುಕಟ್ಟೆಯಲ್ಲಿ ಕರಿಬೇವು ಮಾರಾಟ ಮಾಡುತ್ತಿದ್ದಾರೆ. ಇದರಿಂದ ತಿಂಗಳಿಗೆ 90 ಸಾವಿರದಿಂದ 1 ಲಕ್ಷದ ವರೆಗೆ ಆದಾಯ ಗಳಿಸುತ್ತಿದ್ದಾರೆ.



ಸಹಾಯಕ ತೋಟಗಾರಿಕೆ ಅಧಿಕಾರಿ ಕಾಶಿನಾಥ ಸ್ವಾಮಿ ಮಾರ್ಗದರ್ಶನದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ನೆರವಿನೊಂದಿಗೆ ಕರಿಬೇವು ಕೃಷಿ ಮಾಡಿದ್ದೇನೆ ಎಂದು ರವಿ ರೊದ್ದಾ ತಿಳಿಸಿದರು.

ಬೀಜ, ಗೊಬ್ಬರ, ಕೀಟನಾಶಕ, ಹನಿ ನೀರಾವರಿ ಪದ್ಧತಿ ಅಳವಡಿಕೆ, ಆಳುಗಳ ಕೂಲಿ ಸೇರಿ ಈವರೆಗೆ 2 ಲಕ್ಷ ಖರ್ಚು ಮಾಡಿದ್ದೇನೆ. 11 ತಿಂಗಳ ಅವಧಿಯಲ್ಲಿ ಎಲ್ಲ ಖರ್ಚು ಹೊರತುಪಡಿಸಿ, ಹೆಚ್ಚುವರಿ 6 ಲಕ್ಷ ಆದಾಯ ಬಂದಿದೆ ಎಂದು ಹೇಳುತ್ತಾರೆ.


ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಶ್ರೀಮತಿ ವರಲಕ್ಷ್ಮಿ ಆರ್. ಗುಂಡೂರಾವ್
ಶ್ರೀಮತಿ ತಬು ದಿನೇಶ್‌ರಾವ್
ಕು. ಅನನ್ಯರಾವ್
ಧೀಮಂತ ನಾಯಕರು, ಮಾಜಿ ಮುಖ್ಯಮಂತ್ರಿಗಳಾದ
ಆರ್. ಗುಂಡೂರಾವ್
ಪ್ರತಿಮೆ ಅನಾವರಣ
ದಿನಾಂಕ: 14-05-2025
ಬುಧವಾರ
ಸಮಯ: ಸಂಜೆ 5ಕ್ಕೆ
ಸ್ಥಳ: ಶಾಂತಲಾ ಸರ್ಕಲ್ ಬಳಿ
ಗಾಂಧಿನಗರ, ಬೆಂಗಳೂರು
ಉದ್ಘಾಟನೆ
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ
ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ
ಪ್ರಕಟಣೆ:
ದಿನೇಶ್ ಗುಂಡೂರಾವ್
ಸಚಿವರು
ಆರೋಗ್ಯ ಮತ್ತು
ಕುಟುಂಬ
ಕಲ್ಯಾಣ ಇಲಾಖೆ
ಕರ್ನಾಟಕ ಸರ್ಕಾರ